ಸಂಪುಟ: 22, ಸಂಚಿಕೆ: 155, ಪುಟಗಳು: 8, ಶನಿವಾರ, 15 ಮಾರ್ಚ್ 2025 RNI NO. KARKAN/2002/08054
epaper: www.sanjemugilu.com



ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ವೇಣು ಸಾರಥ್ಯದಲ್ಲಿ...

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3




### ಸುಭಾಷಿತ

ನಲ್ನುಡಿಗಳಿಂದ ಎಲ್ಲ ಜೀವಿಗಳೂ ಆನಂದಿಸುತ್ತವೆ. ಆದ್ದರಿಂದ ಒಳ್ಳೆಯ ಮಾತುಗಳನ್ನೇ ಆಡೋಣ. ಮಾತಿಗೇನು ಬಡತನ!?

### ಪಂಚಾಂಗ

(ಶನಿವಾರ 15 ಮಾರ್ಚ್-2025)

- ಶ್ರೀ ಕ್ರೊಧಿನಾಮ ಸಂವತ್ಸರ,
- ಉತ್ತರಾಯಣ, ಶಿಶಿರ ಋತು,
- ಫಾಲ್ಗುಣಮಾಸ, ಕೃಷ್ಣ ಪಕ್ಷ,
- ಪ್ರಥಮಿ / ದ್ವಿತೀಯ,
- ಉತ್ತರ ಫಾಲ್ಗುಣಿ ನಕ್ಷತ್ರ / ಹಸ್ತ ನಕ್ಷತ್ರ.
- ರಾಹುಕಾಲ: 09:31 ರಿಂದ 11:02
- ಗುಳಿಕಕಾಲ: 06:30 ರಿಂದ 08:01
- ಯಮಗಂಡಕಾಲ: 02:03 ರಿಂದ 03:33

## ಸಂಕ್ಷಿಪ್ತ ಸುದ್ದಿ

## ಹಿಂದಿ ಹೇರಿಕೆ ಗಲಾಟೆ



**ಚೆನ್ನೈ::** ತಮಿಳುನಾಡು ಸರ್ಕಾರ ಹಿಂದಿ ಹೇರಿಕೆಯನ್ನು ವಿರೋಧಿಸುತ್ತಾ ಬಂದಿದೆ. ಕೇಂದ್ರ ಸರ್ಕಾರವು ತ್ರಿಭಾಷಾ ನೀತಿಯ ಮೂಲಕ ಹಿಂದಿ ಹೇರಿಕೆಗೆ ಪ್ರಯತ್ನಿಸುತ್ತಿದೆ ಎಂದು ತಮಿಳುನಾಡು ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್ ಇತ್ತೀಚೆಗೆ ಆರೋಪಿಸಿದ್ದರು. ಈ ಬಗ್ಗೆ ಆಂಧ್ರ ಪ್ರದೇಶ ಉಪಮುಖ್ಯಮಂತ್ರಿ ಪವನ್ ಕಲ್ಯಾಣ್ ಅವರು ಮಾತನಾಡಿದ್ದಾರೆ. 'ಈ ನಾಯಕರು ಹಿಂದಿಯನ್ನು ವಿರೋಧಿಸುತ್ತಾರೆ. ಆದರೆ, ಆರ್ಥಿಕ ಲಾಭಕ್ಕಾಗಿ ತಮಿಳು ಚಲನಚಿತ್ರಗಳನ್ನು ಹಿಂದಿಗೆ ಡಬ್ ಮಾಡುತ್ತಾರೆ' ಎಂದು ಟೀಕೆ ಮಾಡಿದ್ದಾರೆ. ಅವರ ಹೇಳಿಕೆ ಸಂಚಲನ ಮೂಡಿಸಿದೆ. ಪುಟ 2

**» ತಮಿಳು ಸಿಎಂ ಸ್ಟಾಲಿನ್‌ಗೆ ಟಾಂಗ್ ಕೊಟ್ಟ ಪವನ್ ಕಲ್ಯಾಣ್**

## ಹೋಟೆಲ್ ಅಂಗಡಿಗಳಲಿ ಪೇಪರ್ ಕಪ್‌ಗಳಲ್ಲಿ ಟೀ ಹೀರೋರು ಇನ್ನುಂದೆ ಹುಷಾರಾಗಿರಿ!



**ಬೆಂಗಳೂರು:** ಇಡ್ಲಿ ಬೇಯಿಸಲು ಪ್ಲಾಸ್ಟಿಕ್ ಬಳಕೆ ಮಾಡುವುದು, ಕಲ್ಲಂಗಡಿ ಹಣ್ಣಿಗೆ ಕೃತಕ ಬಣ್ಣ ಸೇರ್ಪಡೆ ಮಾಡುತ್ತಿರುವುದು ಬೆಳಕಿಗೆ ಬಂದ ಹಿನ್ನಲೆಯಲ್ಲಿ ಸರಕಾರ ಈ ಬಗ್ಗೆ ಕಟ್ಟುನಿಟ್ಟಿನ ಕ್ರಮಗಳನ್ನು ಜಾರಿಗೊಳಿಸಿದೆ. ಇದು ತಿಳಿದಿರುವ ವಿಚಾರ. ಆದರೆ ಈಗ ಪೇಪರ್ ಗ್ಲಾಸ್ ಸರದಿ. ಹೌದು. ಪೇಪರ್ ಗ್ಲಾಸ್ ಬಳಕೆ ಕೂಡ ನಮ್ಮ ಆರೋಗ್ಯ ಹಾಳು ಮಾಡುತ್ತದೆ. ಈ ಬಗ್ಗೆ ಹಿಂದೆ ಕೆಲವು ಚರ್ಚೆಗಳು ನಡೆದಿದ್ದರೂ ಕೂಡ ಜನರಾಗಲಿ ಅಥವಾ ಸರಕಾರವಾಗಲಿ ಈ ಬಗ್ಗೆ ಹೆಚ್ಚು ತಲೆಕೆಡಿಸಿಕೊಂಡಿರಲಿಲ್ಲ. ಆದರೆ ಇತ್ತೀಚಿನ ದಿನಗಳಲ್ಲಿ ಹೊರಗಡೆ ಸಿಗುವ ಆಹಾರಗಳ ಗುಣಮಟ್ಟದ ಬಗ್ಗೆ, ಅವುಗಳ ಆಯ್ಕೆಯ ಬಗ್ಗೆ ಜನರು ಹೆಚ್ಚಾಗಿ ಚರ್ಚಿಸುತ್ತಿರುವುದರಿಂದ ಈ ರೀತಿಯ ವಿಷಯಗಳು ಸರಕಾರದ ಕದ ತಟ್ಟಿದೆ. ಹಾಗಾದರೆ ಪೇಪರ್ ಗ್ಲಾಸ್ ಕೂಡ ನಮ್ಮ ಆರೋಗ್ಯ ಹಾಳು ಮಾಡುತ್ತಾ ಕ್ಯಾನ್ಸರ್ ತಜ್ಞರು ಈ ಪೇಪರ್ ಗ್ಲಾಸ್ ಬಳಕೆ ಪುಟ 2

## ಸಭಾಪತಿ ಹೊರಟ್ಟಿ ಮನೆ ಬಳಿ ದರೋಡೆ ಮಾಡಿದ್ದ ಇಬ್ಬರ ಕಾಲಿಗೆ ಗುಂಡೇಟು!



**ಹುಬ್ಬಳ್ಳಿ:** ನಗರದಲ್ಲಿ ಮತ್ತೆ ಪೊಲೀಸರ ಗನ್ ಸದ್ದು ಮಾಡಿದೆ. ಮನೆಯೊಂದರಲ್ಲಿ ದರೋಡೆ ಮಾಡಿದ್ದ ಇಬ್ಬರು ಅಂತರರಾಜ್ಯ ದರೋಡೆಕೋರರಿಗೆ ಪೊಲೀಸರು ಗುಂಡೇಟು ನೀಡಿದ್ದಾರೆ.

ಅಂತರರಾಜ್ಯ ಕಳ್ಳರಾದ ಇರ್ಷಾದ್ ಹಾಗೂ ಅಕ್ಬರ್ ಕಾಲಿಗೆ ಹುಬ್ಬಳ್ಳಿಯ ಉಪನಗರ ಪೊಲೀಸರು ಗುಂಡು ಹಾರಿಸಿದ್ದಾರೆ. ಸಭಾಪತಿ ಬಸವರಾಜ್ ಹೊರಟ್ಟಿಯವರ ಹುಬ್ಬಳ್ಳಿಯ ನಿವಾಸದ ಬಳಿ ಆರೋಪಿಗಳು ದರೋಡೆ ಮಾಡಿದ್ದರು. ಆರೋಪಿಗಳ ಬಂಧನಕ್ಕೆ ತೆರಳಿದ್ದ ವೇಳೆ ಪೊಲೀಸರ ಮೇಲೆ ಹಲ್ಲೆ ಮಾಡಿ ಪರಾರಿಯಾಗಲು ಯತ್ನಿಸಿದ್ದು, ಪೊಲೀಸರು ಗುಂಡೇಟು ನೀಡಿ ಆರೋಪಿಗಳನ್ನು ಬಂಧಿಸಿದ್ದಾರೆ. ಪುಟ 2

## ಆಟೋ, ಕಾರು, ಲಾರಿ, ಐರಾವತ ಬಸ್‌ಗೆ ಡಿಕ್ಕಿ!



**ಬೆಂಗಳೂರು:** ನಗರದ ಮೈಸೂರು ರಸ್ತೆಯಲ್ಲಿ ಕ್ಯಾಂಟರ್ ಒಂದು ನಿಯಂತ್ರಣ ತಪ್ಪಿ ಐರಾವತ ಬಸ್, ಕಾರು, ಆಟೋ ಲಾರಿ ಹಾಗೂ ಬೈಕ್‌ಗೆ ಡಿಕ್ಕಿಯಾಗಿದೆ.

ಸ್ಯಾಟಲೈಟ್ ಬಸ್ ನಿಲ್ದಾಣ ಮುಂಭಾಗ ಬೆಳಗ್ಗೆ 5:00 ಗಂಟೆಗೆ ಈ ಅಪಘಾತ ಸಂಭವಿಸಿದೆ. ಕ್ಯಾಂಟರ್ ಮೈಸೂರು ಕಡೆಗೆ ಹೋಗುತ್ತಿತ್ತು.

**» ಮೈಸೂರು ರಸ್ತೆಯಲ್ಲಿ ನಿಯಂತ್ರಣ ತಪ್ಪಿದ ಕ್ಯಾಂಟರ್**

## ರೈಲು ಹೈಜಾಕ್‌ನಲ್ಲಿ ಸೆರೆಯಾಗಿದ್ದ ಎಲ್ಲ 214 ಒತ್ತೆಯಾಳುಗಳ ಸಾಮೂಹಿಕ ಹತ್ಯೆ

# ಬಿಎಲ್‌ಎ ಹೇಳಿಕೆ



**ಇಸ್ಲಾಮಾಬಾದ್:** ಜಾಫರ್ ಎಕ್ಸ್‌ಪ್ರೆಸ್ ಅಪಹರಣದ ನಂತರ ಒತ್ತೆಯಾಳಾಗಿರಿಸಿಕೊಂಡಿದ್ದ ಎಲ್ಲಾ 214 ಮಂದಿಯನ್ನೂ ಹತ್ಯೆ ಮಾಡಲಾಗಿದೆ ಎಂದು ಬಲೂಚ್ ಲಿಬರೇಶನ್ ಆರ್ಮಿ (ಬಿಎಲ್‌ಎ) ಹೇಳಿಕೊಂಡಿದೆ. ನಮ್ಮ ಹೋರಾಟಗಾರರಿಂದ ಒತ್ತೆಯಾಳುಗಳಾಗಿದ್ದ ಎಲ್ಲಾ 214 ಮಂದಿಯನ್ನೂ ಹತ್ಯೆ ಮಾಡಲಾಗಿದೆ. ಪಾಕಿಸ್ತಾನಿ ಭದ್ರತಾ ಪಡೆಗಳೊಂದಿಗೆ ಇನ್ನೂ ಎನ್‌ಕೌಂಟರ್ ನಡೆಯುತ್ತಿದೆ ಎಂದು ತಿಳಿಸಿದೆ.

ಬಿಎಲ್‌ಎ ಪ್ರತ್ಯೇಕತಾವಾದಿಗಳನ್ನು ಸದೆಬಡಿದು ಜನರ ರಕ್ಷಣೆ ಮಾಡಿರುವುದಾಗಿ ಪಾಕಿಸ್ತಾನ ಹೇಳಿಕೆ ನೀಡಿತ್ತು. ಆದರೆ, ಈ ಹೇಳಿಕೆಗೆ ತದ್ವಿರುದ್ಧವಾದ ಹೇಳಿಕೆಯನ್ನು ಬಿಎಲ್‌ಎ ನೀಡಿದೆ. ಪಾಕಿಸ್ತಾನ ಹೇಳುತ್ತಿರುವುದೆಲ್ಲ ಸುಳ್ಳು ಎಂದಿದೆ.

ನಮ್ಮ ಬೇಡಿಕೆಗಳನ್ನು ಈಡೇರಿಸಲು 48 ಗಂಟೆಗಳ ಸಮಯ ನೀಡಲಾಗಿತ್ತು. ಪಾಕಿಸ್ತಾನವು ತನ್ನ ಸಾಂಪ್ರದಾಯಿಕ ಮೊಂಡುತನ ಮತ್ತು ಮಿಲಿಟರಿ ದುರಹಂಕಾರವನ್ನು ಪ್ರದರ್ಶಿಸಿತು. ಈ ಹಿನ್ನೆಲೆ 214 ಒತ್ತೆಯಾಳುಗಳನ್ನು ಗಲ್ಲಿಗೇರಿಸಿದೆ. ಪಾಕ್ ಮಾತುಕತೆಗೆ ನಿರಾಕರಿಸಿದ ಹಿನ್ನೆಲೆ ಸಾಮೂಹಿಕವಾಗಿ ಹತ್ಯೆ ಮಾಡಿರುವುದಾಗಿ ಬಂಡುಕೋರ ಗುಂಪಿನ ವಕ್ತಾರ ಜೀಯಂಡ್ ಬಲೂಚ್ ಹೇಳಿದ್ದಾರೆ. ಪುಟ 2

## ರುದ್ರಪ್ಪ ಲಮಾಣಿ ದಿಢೀರ್ ಬೆಂಗಳೂರಿಗೆ ಶಿಫ್ಟ್!



**ಬೆಂಗಳೂರು:** ರಸ್ತೆ ಅಪಘಾತದಲ್ಲಿ ಗಾಯಗೊಂಡಿರುವ ವಿಧಾನಸಭೆ ಡೆಪ್ಯೂಟಿ ಸ್ಪೀಕರ್ ರುದ್ರಪ್ಪ ಲಮಾಣಿ ಅವರನ್ನು ಹೆಚ್ಚಿನ ಚಿಕಿತ್ಸೆಗಾಗಿ ದಾವಣಗೆರೆಯಿಂದ ಬೆಂಗಳೂರಿಗೆ ಶಿಫ್ಟ್ ಮಾಡಲಾಗಿದೆ. ನಿನ್ನೆ (ಮಾರ್ಚ್ 14) ಬಜೆಟ್ ಅಧಿವೇಶನ ಮುಗಿಸಿಕೊಂಡು ಬೆಂಗಳೂರಿನಿಂದ ಹಾವೇರಿಗೆ ತೆರಳುವ ಮಾರ್ಗ ಮಧ್ಯ ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲೂಕಿನ ಜೆ.ಜೆ.ಹಳ್ಳಿ ಗ್ರಾಮದ ಬಳಿ ರಸ್ತೆ ಅಪಘಾತ ಸಂಭವಿಸಿದೆ. ಕೂಡಲೇ ಅವರನ್ನು ದಾವಣಗೆರೆಯ ಖ.ಖ.ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಲಾಗಿತ್ತು. ಆದ್ರೆ, ಇದೀಗ ಏಕಾಏಕಿ ರುದ್ರಪ್ಪ ಲಮಾಣಿ ಅವರನ್ನು ಬೆಂಗಳೂರಿನ ಅಪೋಲೋ ಆಸ್ಪತ್ರೆಗೆ ಶಿಫ್ಟ್ ಮಾಡಲಾಗಿದ್ದು, ಸಹಜವಾಗಿಯೇ ಬೆಂಬಲಿಗರಲ್ಲಿ ಆತಂಕ ಮೂಡಿಸಿದೆ.

ರುದ್ರಪ್ಪ ಲಮಾಣಿ ಅವರು ನಿನ್ನೆ (ಮಾರ್ಚ್ 14) ಅಧಿವೇಶನ ಮುಗಿಸಿಕೊಂಡು ಬೆಂಗಳೂರಿನಿಂದ ಸ್ವಕ್ಷೇತ್ರ ಹಾವೇರಿಗೆ ತೆರಳುತ್ತಿದ್ದರು. ಆದ್ರೆ, ಎಳನೀರು ಕುಡಿಯಲೆಂದು ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲ್ಲೂಕಿನ ಜೆಜೆ ಹಳ್ಳಿ ಬಳಿ ರಾಷ್ಟ್ರೀಯ ಹೆದ್ದಾರಿ ಬಳಿಕ ಕಾರನ್ನು ಸೈಡಿಗೆ ಹಾಕಿ ಇಳಿದಿದ್ದಾರೆ. ಅದೇ ವೇಳೆ ವೇಗವಾಗಿ ಬಂದ ಬೈಕ್ ವೊಂದು ರುದ್ರಪ್ಪ ಲಮಾಣಿ ಅವರಿಗೆ ಗುದ್ದಿದೆ. ಪರಿಣಾಮ ಅವರು ಸ್ಥಳದಲ್ಲೇ ಕುಸಿದು ಬಿದ್ದಿದ್ದು, ಹಣೆ, ಹಲ್ಲು, ಗದ್ದ ಮತ್ತು ಬಲ ಮೊಣಕಾಲಿಗೆ ಗಾಯವಾಗಿದ್ದು, ಕೂಡಲೇ ಅವರನ್ನು ಹಿರಿಯೂರಲ್ಲಿ ಚಿಕಿತ್ಸೆ ಕೊಡಿಸಿ ಬಳಿಕ ದಾವಣಗೆರೆಯ ಎಸ್ ಎಸ್ ಆಸ್ಪತ್ರೆಗೆ ಶಿಫ್ಟ್ ಮಾಡಲಾಗಿತ್ತು. ಪುಟ 2

## ಚಿತ್ರದುರ್ಗ ಪಿಎಸ್‌ಐ ಮೇಲೆ ಬಿಜೆಪಿ ಮುಖಂಡನಿಂದ ಹಲ್ಲೆ?



**ಚಿತ್ರದುರ್ಗ:** ಚಿತ್ರದುರ್ಗ ನಗರ ಠಾಣೆ ಪಿಎಸ್‌ಐ ಗಾದಿಲಿಂಗಪ್ಪ ಮೇಲೆ ಬಿಜೆಪಿ ಜಿಲ್ಲಾ ಘಟಕದ ಅಧ್ಯಕ್ಷ ಹನುಮಂತೇಗೌಡ ಹಲ್ಲೆ ಮಾಡಿರುವ ಆರೋಪ ಕೇಳಿಬಂದಿದೆ. ಚಿತ್ರದುರ್ಗ ನಗರದ ತುರುವನೂರು ರಸ್ತೆಯಲ್ಲಿ ಘಟನೆ ನಡೆದಿದೆ. ಪಿಎಸ್‌ಐ ಗಾದಿಲಿಂಗಪ್ಪ ಅವರ ಕೈ ಬೆರಳಿಗೆ ಗಾಯವಾಗಿದ್ದು, ಆಸ್ಪತ್ರೆಗೆ ದಾಖಲಿಸಲಾಗಿದೆ. ತುರುವನೂರು ರಸ್ತೆಯ ಖಾಸಗಿ ಹೋಟೆಲ್ ಬಳಿ ತಡರಾತ್ರಿ ರಸ್ತೆ ಮೇಲೆ ತುಮಕೂರು ಜಿಲ್ಲೆ ಮಧುಗಿರಿ ಬಿಜೆಪಿ ಜಿಲ್ಲಾ ಘಟಕದ ಅಧ್ಯಕ್ಷ ಹನುಮಂತೇಗೌಡ ಗುಂಪಾಗಿ ನಿಂತಿದ್ದನ್ನು ಪಿಎಸ್‌ಐ ಗಾದಿಲಿಂಗಪ್ಪ ಪ್ರಶ್ನಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಪಿಎಸ್‌ಐ ಗಾದಿಲಿಂಗಪ್ಪ ಅವರ ಮೇಲೆ ಹಲ್ಲೆ ಬಿಜೆಪಿ ಜಿಲ್ಲಾ ಅಧ್ಯಕ್ಷ ಹನುಮಂತೇಗೌಡ ಹಲ್ಲೆ ಮಾಡಿರುವ ಆರೋಪ ಕೇಳಿಬಂದಿದೆ. ಪುಟ 2

## ಚಂದ್ರದ್ರೋಣ ಪರ್ವತ ಸಾಲಿನ ಪ್ರವಾಸಿ ತಾಣಗಳಿಗೆ ನಿರ್ಬಂಧ



**ಚಿಕ್ಕಮಗಳೂರು:** ಚಿಕ್ಕಮಗಳೂರು ತಾಲೂಕಿನ ಚಂದ್ರದ್ರೋಣ ಪರ್ವತದಲ್ಲಿರುವ ಶ್ರೀ ಗುರುದತ್ತಾತ್ರೇಯ ಬಾಬಾಬುಡನ್‌ಸ್ವಾಮಿ ದರ್ಗಾ (ದತ್ತಪೀಠ)ದಲ್ಲಿ ಇಂದಿನಿಂದ ಮೂರು ದಿನಗಳ ಕಾಲ ಚಿಕ್ಕಮಗಳೂರು ಜಿಲ್ಲಾಡಳಿತದ ನೇತೃತ್ವದಲ್ಲಿ ಉರುಸ್ ಆಚರಿಸಲಾಗುತ್ತದೆ. ಈ ಹಿನ್ನೆಲೆಯಲ್ಲಿ ಮಾರ್ಚ್ 15 ರಿಂದ 17ರವರೆಗೂ ಚಂದ್ರದ್ರೋಣ ಪರ್ವತ ಸಾಲಿನ ಪ್ರವಾಸಿ ತಾಣಗಳಿಗೆ ಪ್ರವಾಸಿಗರಿಗೆ ನಿರ್ಬಂಧಿಸಲಾಗಿದೆ. ಪುಟ 2

### ಸ್ವಾತಿ ಕೊಲೆ ಪ್ರಕರಣದಲ್ಲಿ ಪೊಲೀಸರಿಗೆ ಸಂಕಷ್ಟ!

## ಅನುಮಾನಕ್ಕೆ ಹುಟ್ಟುಹಾಕಿದ ಅಂತ್ಯಕ್ರಿಯೆ

**ಹಾವೇರಿ:** ಮಾಸೂರು ಗ್ರಾಮದ ಯುವತಿ ಸ್ವಾತಿ ಕೊಲೆಯಾಗಿರುವ ಪ್ರಕರಣದಲ್ಲಿ ಪೊಲೀಸರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಮಾರ್ಚ್ 6 ರಂದು ರಾಣೆಬೆನ್ನೂರು ತಾಲೂಕಿನ ಪತ್ತೆಪುರ ಬಳಿ ಸ್ವಾತಿಯ ಶವ ಪತ್ತೆಯಾಗಿತ್ತು. ಆದರೆ, ಪೊಲೀಸರು ಶವವನ್ನು ಗುರುತಿಸಲು ಸಾಧ್ಯವಾಗದೆ ಅಪರಿಚಿತ ಶವ ಎಂದು ಭಾವಿಸಿ ಹಲಗೇರಿ ಪೊಲೀಸರಿಂದ ಅಂತ್ಯಕ್ರಿಯೆ ಮಾಡಿಸಿದ್ದರು. ಈಗ ಸ್ವಾತಿಯ ಕೊಲೆಯಾಗಿರುವುದು ಬೆಳಕಿಗೆ ಬಂದಿದ್ದು, ಪೊಲೀಸರ ಕಾರ್ಯವೈಖರಿ ಬಗ್ಗೆ ಹಲವು ಅನುಮಾನಗಳು ವ್ಯಕ್ತವಾಗಿವೆ.

ಸಾಮಾನ್ಯವಾಗಿ ಪೊಲೀಸರು ಯಾವುದೇ ಅಪರಿಚಿತ ಶವ ಸಿಕ್ಕಾಗ ಕನಿಷ್ಠ ಆ ಜಿಲ್ಲೆಯ ಎಲ್ಲಾ ಪೊಲೀಸ್ ಠಾಣೆಗಳಲ್ಲಿ ದಾಖಲಾಗಿರುವ ಮಿಸ್ಸಿಂಗ್ ಕಂಪ್ಲೇಂಟ್‌ಗಳನ್ನು ನೋಡಿ ಅವರಿಗೆ ತಿಳಿಸುತ್ತಾರೆ. ಅದರಲ್ಲೂ ಮಹಿಳೆ, ಯುವತಿ, ಅಪ್ರಾಪ್ತ ಯುವತಿ ಆಗಿದ್ದಲ್ಲಿ ಪೊಲೀಸರು ಇನ್ನಷ್ಟು ಎಚ್ಚರಿಕೆಯಿಂದ ಈ ಕೆಲಸ ಮಾಡುತ್ತಾರೆ. ಆದರೆ, ಹಾವೇರಿಯ ಜಿಲ್ಲೆಯಲ್ಲಿ ಹದಿಹರೆಯದ 22 ವರ್ಷ ವಯಸ್ಸಿನ ಯುವತಿಯ ಕೊಲೆ ಆಗಿದ್ದು, ಅಪರಿಚಿತ ಶವ ಎಂದುಕೊಂಡು ಪೊಲೀಸರೇ ಅಂತ್ಯಸಂಸ್ಕಾರ ಮಾಡಿದ್ದಾರೆ. ಮರಣೋತ್ತರ ಪರೀಕ್ಷೆಯಲ್ಲಿ ಯುವತಿಯ ಕೊಲೆಯಾಗಿರುವ ದೃಢವಾದ ಬೆನ್ನಲ್ಲಿಯೇ ಯಾವುದೇ ಮಾಹಿತಿ ನೀಡದೇ ಅಂತ್ಯಸಂಸ್ಕಾರ ಮಾಡಿದ ಪೊಲೀಸರಿಗೆ ಸಂಕಷ್ಟ ಎದುರಾಗಿದೆ.



ಹಾವೇರಿ ಜಿಲ್ಲೆಯ ಮಾಸೂರು ಗ್ರಾಮದ ಯುವತಿ 22 ವರ್ಷದ ಸ್ವಾತಿ ಮಾರ್ಚ್ 3 ರಂದು ನಾಪತ್ತೆಯಾಗಿದ್ದಳು. ಮೂರು ದಿನಗಳ ಕಾಲ ಮನೆಯವರೆಲ್ಲಾ ಹುಡುಕಿ 7ನೇ ತಾರೀಖಿನಿಂದ ಮಿಸ್ಸಿಂಗ್ ದೂರು ದಾಖಲಿಸಿದ್ದರು. ಈಕೆಯ ಶವ ಹಾವೇರಿ ಜಿಲ್ಲೆ ರಾಣೆಬೆನ್ನೂರು ತಾಲೂಕು ಪತ್ತೇಪುರ ಗ್ರಾಮದ ತುಂಗಭದ್ರಾ ನದಿ ಬಳಿ ಪತ್ತೆಯಾಗಿತ್ತು. ಮಾರ್ಚ್ 6 ರಂದು ಯುವತಿಯ ಮೃತದೇಹ ಸಿಕ್ಕಿತ್ತು.

ಅಪರಿಚಿತ ಯುವತಿ ಶವ ಎಂದು ಘೋಷಿಸಿದ್ದ ಹಲಗೇರಿ ಪೊಲೀಸರು, ವಾರಸುದಾರರು ಯಾರೂ ಇಲ್ಲದ ಹಿನ್ನಲೆಯಲ್ಲಿ, ಮರಣೋತ್ತರ ಪರೀಕ್ಷೆ ನಡೆಸಿ ಕಾನೂನು ಪ್ರಕಾರ ಸ್ವಾತಿ ಶವ ಹೂತು ಹಾಕಲಾಗಿತ್ತು. ಈ ಹಂತದಲ್ಲಿ ಕನಿಷ್ಠ ಜಿಲ್ಲೆಯಲ್ಲಿ ದಾಖಲಾದ ಮಿಸ್ಸಿಂಗ್ ಕಂಪ್ಲೇಂಟ್‌ಗಳ ಮಾಹಿತಿಯನ್ನೂ ಅವರು ಪಡೆದುಕೊಂಡಿಲ್ಲ. ಮರಣೋತ್ತರ ಪರೀಕ್ಷೆ ವೇಳೆ ಸ್ವಾತಿ ಹತ್ಯೆಯಾಗಿರುವುದು ದೃಢವಾಗಿದೆ. ಇದರ ಬೆನ್ನಲ್ಲಿಯೇ ಹಲಗೇರಿ ಪೊಲೀಸರು ತನಿಖೆ ತೀವ್ರಗೊಳಿಸಿದ್ದಾರೆ. ಪುಟ 2

## ನನ್ನ ಎದುರಾಳಿಗಳನ್ನು ಜೈಲಿಗೆ ಹಾಕುವೇ

### ನ್ಯಾಯಾಂಗ ಇಲಾಖೆ ಭಾಷಣದಲ್ಲಿ ಅಬ್ಬರಿಸಿ ಬೊಬ್ಬರಿದ ಟ್ರಂಪ್

**ವಾಷಿಂಗ್ಟನ್:** ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಅಮೆರಿಕದ ನ್ಯಾಯಂಗ ಇಲಾಖೆಯಲ್ಲಿ ತಮ್ಮ ಭಾಷಣವನ್ನು ಮಾಡಿದ್ದಾರೆ. ಈ ವೇಳೆ ತಮ್ಮ ಶತ್ರುಗಳ ಹೆಡೆಮುರಿ ಕಟ್ಟುವ ಬಗ್ಗೆ ಮಾತನಾಡಿದ್ದಾರೆ. ತಮ್ಮ ವಿರೋಧಿಗಳಿಗೆ ಖಡಕ್ ಎಚ್ಚರಿಕೆಯನ್ನು ಈ ಮೂಲಕ ಟ್ರಂಪ್ ನೀಡಿದ್ದಾರೆ. ಹಲವಾರು ಕ್ರಿಮಿನಲ್ ಪ್ರಕರಣಗಳಲ್ಲಿ ತಮ್ಮ ವಿರುದ್ಧದ ವಿಚಾರಣೆಯಲ್ಲಿ ಭಾಗಿಯಾಗಿರುವ ಎಲ್ಲ ಜನರನ್ನು ಬಹಿರಂಗಪಡಿಸುವುದಾಗಿ ಪ್ರತಿಜ್ಞೆ ಮಾಡಿದ್ದಾರೆ. ಕೆಲವು ತಿಂಗಳುಗಳ ಹಿಂದೆ ತನ್ನ ಮೇಲೆ ಮೊಕದ್ದಮೆ ಹೂಡಿದ್ದ ಬಗ್ಗೆ ನ್ಯಾಯಾಂಗ ಇಲಾಖೆಯ ಪ್ರಧಾನ ಕಚೇರಿಯಲ್ಲಿ ಮಾತನಾಡಿದ್ದಾರೆ. ತಮ್ಮ ರಾಜಕೀಯ ವಿರೋಧಿಗಳನ್ನು ಜೈಲಿಗೆ ಕಳುಹಿಸುವುದಾಗಿ ಹೇಳಿದ್ದಾರೆ.

ನಮ್ಮ ಸರ್ಕಾರದಿಂದ ರಾಕ್ಷಸ ಗುಣ ಇರುವ ಹಾಗೂ ಭ್ರಷ್ಟ ಶಕ್ತಿಗಳನ್ನು ನಾವು ಹೊರಹಾಕುತ್ತೇವೆ. ಅವರ ಘೋರ ಅಪರಾಧಗಳು ಮತ್ತು ದುಷ್ಕೃತ್ಯವನ್ನು ನಾವು ಬಹಿರಂಗಪಡಿಸುತ್ತೇವೆ ಎಂದು ಡೊನಾಲ್ಡ್ ಟ್ರಂಪ್ ತಮ್ಮ ಭಾಷಣದಲ್ಲಿ ಹೇಳಿದರು. 2021ರಲ್ಲಿ ಅಫ್ಘಾನಿಸ್ತಾನದಿಂದ ಯುನೈಟೆಡ್ ಸ್ಟೇಟ್ಸ್ ಮಿಲಿಟರಿಯನ್ನು ತೆಗೆಯುವ ಮೂಲಕ ತಾಲಿಬಾನ್‌ಗಳಿಗೆ ಅವಕಾಶ ಮಾಡಿಕೊಟ್ಟು, ಜಗತ್ತಿನ ಮುಂದೆ ನಮ್ಮ ದೇಶಕ್ಕೆ ಅವಮಾನ ಮಾಡಿದ್ದಾರೆ. ಜೋ ಬೈಡನ್ ಆಡಳಿತ ಸಮಯದಲ್ಲಿ ಈ ನಿರ್ಧಾರವನ್ನು ತೆಗೆದುಕೊಳ್ಳಲಾಗಿತ್ತು. ಈ ಸಮಯದಲ್ಲಿದ್ದ ಅಧಿಕಾರಿಗಳ ವಿರುದ್ಧ ಕ್ರಮ ತೆಗೆದುಕೊಳ್ಳುವುದಾಗಿ ಹೇಳಿದ್ದಾರೆ.



### ಬೈಡನ್ ಭಾರತದಲಿ ಸರ್ಕಾರ ಬದಲಿಸಲು ಪ್ರಯತ್ನಿಸಿದ್ದರೇ?

ಇನ್ನು ಅಮೆರಿಕದ ಆಡಳಿತದಲ್ಲಿ ಅಧ್ಯಕ್ಷರೊಬ್ಬರು ನ್ಯಾಯಾಂಗ ಇಲಾಖೆಗೆ ಭೇಟಿ ನೀಡಿದ್ದು ಇದೇ ಮೊದಲು. ತಮ್ಮ ಭಾಷಣದಲ್ಲಿ, ಬೈಡನ್ ಆಡಳಿತವು ಇಲಾಖೆಯನ್ನು ತಮ್ಮ ವಿರುದ್ಧ ಅಸ್ತ್ರವನ್ನಾಗಿ ಮಾಡಿಕೊಂಡಿದೆ ಎಂದು ಟ್ರಂಪ್ ಹೇಳಿಕೊಂಡಿದ್ದಾರೆ. ನಮ್ಮ ಪೂರ್ವಜರು ಈ ನ್ಯಾಯ ಇಲಾಖೆಯನ್ನು ಅನ್ಯಾಯದ ಇಲಾಖೆಯಾಗಿ ಪರಿವರ್ತಿಸಿದರು. ಆದರೆ ಆ ದಿನಗಳು ಮುಗಿದಿವೆ ಮತ್ತು ಅವು ಎಂದಿಗೂ ಹಿಂತಿರುಗುವುದಿಲ್ಲ ಮತ್ತು ಎಂದಿಗೂ ಬರುವುದಿಲ್ಲ ಎಂದು ಘೋಷಿಸಲು ನಾನು ಇಂದು ನಿಮ್ಮ ಮುಂದೆ ನಿಂತಿದ್ದೇನೆ'' ಎಂದು ಟ್ರಂಪ್ ಹೇಳಿದರು.

## ನೀರು ತರಲು ಹೋಗಿ ಕಾಲು ಜಾರಿ ಬಾವಿಗೆ ಬಿದ್ದು ಕೂಲಿ ಕಾರ್ಮಿಕ ಸಾವು

**ಬೀದರ್:** ಕುಡಿಯುವ ನೀರು ತರಲು ಬಾವಿಗೆ ಹೋಗಿದ್ದ ಕೂಲಿ ಕಾರ್ಮಿಕ ಕಾಲು ಜಾರಿ ಬಿದ್ದು ಸಾವನ್ನಪ್ಪಿದ ಘಟನೆ ಬೀದರ್ ಜಿಲ್ಲೆಯ ಹುಲಸೂರು ತಾಲೂಕಿನ ಮಾಚಾನಾಳ ಗ್ರಾಮದಲ್ಲಿ ನಡೆದಿದೆ.ಕಾರ್ಮಿಕ ಸತೀಶ್ ಲಿಂಬಾಜಿ ಬಾಗುವಾಲೆ (40) ಮೃತ ದುರ್ದೈವಿ. ಗುರುವಾರ ಸಂಜೆ ಹೊಲದಲ್ಲಿ ಕೆಲಸ ಮಾಡುವಾಗ ಪಕ್ಕದ ಬಾವಿಯಲ್ಲಿ ಕುಡಿಯಲು ನೀರು ತರಲು ಹೋಗಿದ್ದಾಗ ಈ ಘಟನೆ ಸಂಭವಿಸಿದೆ. ಮಾಚಾನಾಳ ಗ್ರಾಮದ ಹೊಲದಲ್ಲಿ ಕೃಷಿ ಕೆಲಸ ಮಾಡಲು ಕಾರ್ಮಿಕ ತೆರಳಿದ್ದು, ನೀರು ತರಲು ಬಾವಿಗೆ ಹೋದಾಗ ಕಾಲು ಜಾರಿದೆ. ಈಜು ಬಾರದ



ಕಾರಣ ಬಾವಿಯಿಂದ ಹೊರಬರಲಾಗದೆ ಸಾವನ್ನಪ್ಪಿದ್ದಾರೆ. ವಿಷಯ ತಿಳಿದು ಶುಕ್ರವಾರ ಬೆಳಿಗ್ಗೆ ಸ್ಥಳಕ್ಕೆ ಬಂದ ಅಗ್ನಿಶಾಮಕ ದಳದ ಸಿಬ್ಬಂದಿ, ಬಾವಿಗೆ ಇಳಿದು ಹಗ್ಗದ ಸಹಾಯದಿಂದ ಮೃತದೇಹವನ್ನು ಹೊರತೆಗೆದಿದ್ದಾರೆ. ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ, ಪರಿಶೀಲನೆ ನಡೆಸಿದ್ದು, ಹುಲಸೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಹಾವೇರಿಯಲ್ಲಿ ಹಿಂದೂ ಯುವತಿ ಹತ್ಯೆ: ನಯಾಜ್ ಅರೆಸ್ಟ್

**ಹಾವೇರಿ:** ರಾಣೇಬೆನ್ನೂರಿನ ಆಸ್ಪತ್ರೆಯೊಂದರಲ್ಲಿ ನರ್ಸ್ ಆಗಿ ಕೆಲಸ ಮಾಡುತ್ತಿದ್ದ ಯುವತಿಯ ಹತ್ಯೆಯಾಗಿದ್ದು, ಮೂವರ ಮೇಲೆ ಶಂಕೆ ವ್ಯಕ್ತವಾಗಿದೆ. ಪ್ರಕರಣ ಸಂಬಂಧ ಓರ್ವನನ್ನು ಬಂಧಿಸಲಾಗಿದ್ದು, ಬಂಧಿತನನ್ನು ನಯಾಜ್ ಎಂದು ಗುರುತಿಸಲಾಗಿದೆ. ಹತ್ಯೆಯಾದ ಯುವತಿಯನ್ನು ರಟ್ಟಿಹಳ್ಳಿ ತಾಲೂಕಿನ ಮಾಸೂರು ಗ್ರಾಮದ ಸ್ವಾತಿ ರಮೇಶ್ ಬ್ಯಾಡಗಿ (22) ಎಂದು ಗುರುತಿಸಲಾಗಿದೆ. ಮಾ.6 ರಂದು ಯುವತಿಯ ಮೃತದೇಹ ರಾಣೇಬೆನ್ನೂರು ತಾಲೂಕಿನ ಪತ್ತೇಪುರ ಗ್ರಾಮದ ತುಂಗಭದ್ರಾ ನದಿ ಬಳಿ ಪತ್ತೆಯಾಗಿತ್ತು. ಮೊದಲು ಅಪರಿಚಿತ ಯುವತಿಯ ಶವ ಎಂದು ಹಲಗೇರಿ ಪೊಲೀಸರು ಘೋಷಿಸಿದ್ದರು. ಬಳಿಕ ವಾರಸುದಾರರು ಯಾರೂ ಇಲ್ಲದ ಹಿನ್ನೆಲೆ, ಮರಣೋತ್ತರ



ಪರೀಕ್ಷೆ ನಡೆಸಿ ಕಾನೂನು ಪ್ರಕಾರ ಸ್ವಾತಿ ಶವವನ್ನು ಹೂತು ಹಾಕಲಾಗಿತ್ತು. ಮರಣೋತ್ತರ ಪರೀಕ್ಷೆ ವೇಳೆ ಸ್ವಾತಿ ಹತ್ಯೆಯಾಗಿರುವುದು ದೃಢಪಟ್ಟಿದೆ. ಬಳಿಕ ತನಿಖೆ ತೀವ್ರಗೊಳಿಸಿದ ಹಲಗೇರಿ ಪೊಲೀಸರು, ಮಾ.3 ರಂದು ಕಾಣೆಯಾಗಿದ್ದ ಯುವತಿಯ ಗುರುತನ್ನು ಪತ್ತೆಹಚ್ಚಿದ್ದರು. ಇನ್ನೂ ಸ್ವಾತಿ ಪೋಷಕರು, ಹಿರೇಕೇರೂರು ಪೊಲೀಸ್ ಠಾಣೆಯಲ್ಲಿ ಆಕೆ ಕಾಣೆಯಾದ ಬಗ್ಗೆ ದೂರು ದಾಖಲಿಸಿದ್ದರು ಎಂದು ತಿಳಿದು ಬಂದಿದೆ. ಸ್ವಾತಿ ತಂದೆ ಮೃತಪಟ್ಟಿದ್ದು, ತಾಯಿ ಜೊತೆ ವಾಸವಿದ್ದರು. ಮೂವರ ಮೇಲೆ ಶಂಕೆ ವ್ಯಕ್ತವಾಗಿದ್ದು, ತನಿಖೆಯನ್ನು ಹಲಗೇರಿ ಪೊಲೀಸರು ತೀವ್ರಗೊಳಿಸಿದ್ದಾರೆ. ಹಿಂದೂ ಸಂಘಟನೆಗಳು ಸಾಮಾಜಿಕ ಜಾಲತಾಣದಲ್ಲಿ ಜಸ್ಟೀಸ್ ಫಾರ್ ಸ್ವಾತಿ ಅಭಿಯಾನ ಆರಂಭಿಸಿದ್ದು, ಹಂತಕರನ್ನು ಪತ್ತೆ ಹಚ್ಚಿ, ಶಿಕ್ಷೆ ವಿಧಿಸುವಂತೆ ಆಗ್ರಹಿಸಿದ್ದಾರೆ.

# ಬಿಜೆಪಿಯಲ್ಲಿ ಶಿಸ್ತು ಸಮಿತಿ ಖಡಕ್ ಸಂದೇಶ, ಕ್ರಮಕ್ಕೆ ಕೂಡಿಬಂತು ಕಾಲ

**ಬೆಂಗಳೂರು:** ಕರ್ನಾಟಕ ಬಿಜೆಪಿ ಮನೆಯೊಂದು ಮೂರು ಬಾಗಿಲು ಎಂಬಂತಾಗಿದೆ. ಪಕ್ಷದಲ್ಲಿ ವಿಜಯೇಂದ್ರ ಪರವಾದ ಒಂದು ತಂಡ, ವಿರುದ್ಧವಾದ ಮತ್ತೊಂದು ತಂಡ ಹಾಗೂ ತಟಸ್ಥವಾದ ತಂಡವೊಂದು ಇದೆ. ಈ ಮೂರು ಬಣದಲ್ಲಿ ಒಂದಿಷ್ಟು ಜನರು ಗುರುತಿಸಿಕೊಂಡಿದ್ದಾರೆ. ಈ ಬಣಗಳ ನಡೆಯಿಂದ ಹೈಕಮಾಂಡ್‌ಗೆ ದೊಡ್ಡ ತಲೆನೋವಾಗಿದ್ದು, ಏನು ಮಾಡಬೇಕೆಂದು ಒಂದೂ ತಿಳಿಯದೇ ಸೈಲೆಂಟ್ ಆಗಿದೆ. ಭೇಟಿ ಬಂದವರಿಗೆ ಸಮಾಧಾನ ಮಾಡಿ ಕಳುಹಿಸುವುದನ್ನು ಬಿಟ್ಟರೆ ಬೇರೆ ಯಾವುದೇ ಕ್ರಮಕೈಗೊಂಡಿಲ್ಲ. ಆದ್ರೆ, ಇದೀಗ ರಾಜ್ಯ ಬಿಜೆಪಿಯಲ್ಲಿನ ಗೊಂದಲ ನಿವಾರಣೆಗೆ ಸಮಯ ಕೂಡಿ ಬಂದಂತಿದೆ. ಹೌದು.. ರಾಜ್ಯ ಬಿಜೆಪಿ ಶಿಸ್ತು ಸಮಿತಿ ಅಧ್ಯಕ್ಷ ಲಿಂಗರಾಜ ಪಾಟೀಲ್ ಅವರೇ ಖಡಕ್ ಎಚ್ಚರಿಕೆ ಸಂದೇಶವನ್ನು ರವಾನಿಸಿದ್ದು, ಭಾರೀ ಸಂಚಲನಕ್ಕೆ ಕಾರಣವಾಗಿದೆ.

ಹೌದು.. ಒಂದು ಕಡೆ ಯತ್ನಾಳ್ ಹಾಗೂ ವಿಜಯೇಂದ್ರ ಬಣ ಬಡಿದಾಟ ಒಂದುಕಡೆಯಾದರೆ ಮತ್ತೊಂದೆಡೆ ಬಿಜೆಪಿ ರೆಬೆಲ್ ಶಾಸಕರ ಒಂದು ಕಥೆಯಾಗಿದೆ. ಬಿಜೆಪಿ ಚಿಹ್ನೆಯಿಂದ ಗೆದ್ದಿರುವ ಯಶವಂತಪುರ ಶಾಸಕ ಎಸ್.ಟಿ ಸೋಮಶೇಖರ್ ಹಾಗೂ ಯಲ್ಲಾಪುರ ಶಾಸಕ ಶಿವರಾಮ್ ಹೆಬ್ಬಾರ್ ಪಕ್ಷದ ನೀತಿ ನಿಯಮಗಳನ್ನು ಧಿಕ್ಕರಿಸಿ ತಮ್ಮದೇ ಹಾದಿಯಲ್ಲಿ ಹೊರಟ್ಟಿದ್ದಾರೆ. ಇದರಿಂದ ರಾಜ್ಯ ಬಿಜೆಪಿ ಶಿಸ್ತು ಸಮಿತಿ ಕೆರಳಿದ್ದು, ಈ ಇಬ್ಬರು ಶಾಸಕರ ವಿರುದ್ಧ ಕ್ರಮಕ್ಕೆ ಮುಂದಾಗಿದೆ. ಇಷ್ಟು ದಿನ ಪಕ್ಷದ ಕಾರ್ಯಚಟುವಟಿಕೆಗಳಿಂದ ದೂರ ಉಳಿದ ಕಾಂಗ್ರೆಸ್ ನಾಯಕರೊಂದಿಗೆ ಉತ್ತಮ ಬಾಂಧವ್ಯ ಹೊಂದಿದ್ದು, ಸ್ವಪಕ್ಷ ಬಿಜೆಪಿ ವಿರುದ್ಧವೇ ಟೀಕೆ ಟಿಪ್ಪಣಿಗಳನ್ನು ಮಾಡುತ್ತಿದ್ದಾರೆ. ಸಾಲದಕ್ಕೆ ಮಾ.13ಕ್ಕೆ ಡಿಕೆ ಶಿವಕುಮಾರ್ ಅವರು ಕೆಪಿಸಿಸಿ ಅಧ್ಯಕ್ಷರಾಗಿ ಐದು ವರ್ಷ ಪೂರೈಸಲಿರುವ ಹಿನ್ನೆಲೆಯಲ್ಲಿ ಕಾಂಗ್ರೆಸ್ ಶಾಸಕರು, ಸಚಿವರಿಗೆ ಔತಣಕೂಟ ಏರ್ಪಡಿಸಿದ್ದು. ಈ ಭೋಜನಕೂಟದಲ್ಲಿ ಸೋಮಶೇಖರ್ ಹಾಗೂ



ಶಿವರಾಮ್ ಹೆಬ್ಬಾರ್ ಭಾಗವಹಿಸಿ ಡಿಕೆಶಿಗೆ ಶುಭಾಶಯ ತಿಳಿಸಿ ಔತಣವನ್ನು ಸ್ವೀರಿಸಿ ಅಚ್ಚರಿ ಮೂಡಿಸಿದ್ದಾರೆ. ಇದರಿಂದ ಕೆಂಡಾಮಂಡಲವಾಗಿರುವ ರಾಜ್ಯ ಬಿಜೆಪಿ ಶಿಸ್ತು ಸಮಿತಿ ಈ ತಿಂಗಳ ಅಂತ್ಯಕ್ಕೆ ಇವರಿಬ್ಬರ ವಿರುದ್ಧ ಕ್ರಮಕೈಗೊಳ್ಳುವ ಬಗ್ಗೆ ದೃಢ ನಿರ್ಧಾರ ಮಾಡಿದೆ.

**ಈ ತಿಂಗಳಾಂತ್ಯಕ್ಕೆ ಬಿಜೆಪಿ ಗೊಂದಲಕ್ಕೆ ತೆರೆ:** ಈ ಸಂಬಂಧ ಹುಬ್ಬಳ್ಳಿಯಲ್ಲಿ ಮಾಧ್ಯಮದೊಂದಿಗೆ ರಾಜ್ಯ ಬಿಜೆಪಿ ಶಿಸ್ತು ಸಮಿತಿ ಅಧ್ಯಕ್ಷ ಲಿಂಗರಾಜ ಪಾಟೀಲ್ ಮಾತನಾಡಿ, ಇಬ್ಬರು ಶಾಸಕರ ವಿರುದ್ಧ ಶಿಸ್ತುಕ್ರಮ ಆಗುತ್ತೆ. ಪಕ್ಷ ದ್ರೋಹ ಕೆಲಸ ಮಾಡಿದ ಈ ಇಬ್ಬರು ಶಾಸಕರ ವಿರುದ್ಧ ಈ ತಿಂಗಳಾಂತ್ಯದಲ್ಲಿ ಶಿಸ್ತುಕ್ರಮ ಆಗುತ್ತೆ ಎಂದು ಕಡ್ಡಿಮುರಿದಂತೆ ಹೇಳಿದರು. ಅಲ್ಲದೇ ಪಕ್ಷದಲ್ಲಿರುವ ಎಲ್ಲಾ ಗೊಂದಲಕ್ಕೆ ಈ ತಿಂಗಳಾಂತ್ಯಕ್ಕೆ ತೆರೆ ಬೀಳುತ್ತೆ ಎಂದು ಸ್ಪಷ್ಟಪಡಿಸಿದರು. ಈ ಮೂಲಕ ರೆಬೆಲ್ ಶಾಸಕರು ಹಾಗೂ ಯತ್ನಾಳ್ ಹಾಗೂ ವಿಜಯೇಂದ್ರ ಬಣ ಬಡಿದಾಟಕ್ಕೆ ಅಂತ್ಯವಾಡುವ ಸುಳಿವು ನೀಡಿದರು.

ವಿಧಾನಸಭೆ ಚುನಾವಣೆ ನಂತರ ಶಾಸಕರಾದ ಎಸ್ .ಟಿ.ಸೋಮಶೇಖರ್, ಶಿವರಾಂ ಹೆಬ್ಬಾರ್ ನಿರಂತರವಾಗಿ ಪಕ್ಷ ದ್ರೋಹ ಕೆಲಸ ಮಾಡಿದ್ದಾರೆ. ಚುನಾವಣೆಯಲ್ಲಿ ಪಕ್ಷ ವಿರೋಧಿ ಚಟುವಟಿಕೆಯಲ್ಲಿ ಭಾಗಿಯಾಗಿದ್ದಾರೆ. ಕಾಂಗ್ರೆಸ್‌ನ ಡಿನ್ನರ್ ಪಾರ್ಟಿಗೆ ಹೋಗಿರುವ ವಿಚಾರ ದೊಡ್ಡದಲ್ಲ. ಅದಕ್ಕಿಂತ ಹೆಚ್ಚಿನ ಪಕ್ಷ ವಿರೋಧಿ ಚಟುವಟಿಕೆ ಅವರಿಬ್ಬರು ಮಾಡಿದ್ದಾರೆ. ಎಸ್.ಟಿ.ಸೋಮಶೇಖರ್ ಹಾಗೂ ಶಿವರಾಂ ಹೆಬ್ಬಾರ್ ಕ್ಷೇತ್ರಕ್ಕೆ ತೆರಳಿ ಭಾರತೀಯ ಜನತಾ ಪಕ್ಷದ ಕಾರ್ಯಕರ್ತರು, ಮಂಡಳ ಅಧ್ಯಕ್ಷರು, ಜಿಲ್ಲಾಧ್ಯಕ್ಷರಿಂದ ವರದಿ ಸಿದ್ದಪಡಿಸಿ ಕೇಂದ್ರ ಶಿಸ್ತು ಸಮಿತಿ ಅಧ್ಯಕ್ಷ ಓಂ ಪಾಟೀಲ್ ಅವರಿಗೆ ವರದಿ ನೀಡಿದ್ದೇನೆ ಎಂದು ಸ್ಪಷ್ಟಪಡಿಸಿದರು.

ಶಾಸಕರು ಪಕ್ಷ ವಿರೋಧಿ ಚಟುವಟಿಕೆಯಲ್ಲಿ ಭಾಗಿಯಾದ ವಿಡಿಯೋ, ಪೇಪರ್ ಕಟಿಂಗ್‌ಗಳನ್ನು ವರದಿಯ ಜೊತೆಗೆ ಸಲ್ಲಿಸಲಾಗಿದೆ. ಇಲ್ಲಿಯವರೆಗೂ ಎರಡ್ಮೂರು ಬಾರಿ ಕೇಂದ್ರಕ್ಕೆ ವರದಿ ನೀಡಲಾಗಿದೆ. ಆದಷ್ಟು ಬೇಗ ಎಸ್.ಟಿ.ಸೋಮಶೇಖರ್, ಹೆಬ್ಬಾರ್ ವಿರುದ್ಧ ಶಿಸ್ತುಕ್ರಮವಾಗಲಿದೆ ಎಂದು ತಿಳಿಸಿದರು.

ಲಿಂಗರಾಜ್ ಪಾಟೀಲ್ ಹೇಳಿರುವಂತೆ ಈ ತಿಂಗಳ ಅಂತ್ಯಕ್ಕೆ ರಾಜ್ಯ ಬಿಜೆಪಿಯಲ್ಲಿನ ಗೊಂದಲ ನಿವಾರಣೆಯಾಗಲಿದೆ ಎಂದು ಹೇಳಿದ್ದಾರೆ. ಹಾಗಾದ್ರೆ, ಯತ್ನಾಳ್ ಹಾಗೂ ವಿಜಯೇಂದ್ರ ಬಣ ರಾಜಕೀಯಕ್ಕೆ ಬ್ರೇಕ್ ಬೀಳುತ್ತಾ ಎನ್ನುವುದನ್ನು ಕಾದುನೋಡಬೇಕಿದೆ. ಒಂದು ವೇಳೆ ಎಲ್ಲವೂ ಸರಿಯಾದರೆ ಯಾವ ಬಣ ಮೇಲುಗೈ ಸಾಧಿಸಲಿದೆ ಎನ್ನುವುದು ಸಹ ಕುತೂಹಲಕ್ಕೆ ಕಾರಣವಾಗಿದ್ದರೆ, ಇನ್ನು ಬಿಜೆಪಿ ಚಿಹ್ನೆಯಿಂದಲೇ ಗೆದ್ದು ಪಕ್ಷದ ಕಾರ್ಯಚಟುವಟಿಕೆಗಳಿಂದ ಅಂತರ ಕಾಯ್ದುಕೊಂಡಿರುವ ಸೋಮಶೇಖರ್ ಹಾಗೂ ಶಿವರಾಮ್ ಹೆಬ್ಬಾರ್ ವಿರುದ್ಧ ಶಿಸ್ತು ಸಮಿತಿ ಯಾವ ಕ್ರಮಕೈಗೊಳ್ಳುತ್ತೆ ಎನ್ನುವುದು ಕುತೂಹಲ ಮೂಡಿಸಿದೆ.

ಒಟ್ಟಿನಲ್ಲಿ ಕರ್ನಾಟಕ ಬಿಜೆಪಿಯಲ್ಲಿ ಸದ್ಯ ಒಂದಲ್ಲ ಒಂದು ರೀತಿಯಲ್ಲಿ ದಿನಕ್ಕೊಂದು ಮಹತ್ವದ ಬೆಳವಣಿಗೆಗಳು ನಡೆಯುತ್ತಿದ್ದು, ಇದನ್ನು ಯಾವ ರೀತಿ ಬಗಹರಿಸುತ್ತೆ ಎನ್ನುವುದೇ ಎನ್ನುವುದನ್ನು ಕಾದುನೋಡಬೇಕಿದೆ.

## ಟಿಕೆಟ್ ಕಳೆದುಕೊಂಡು ವರ್ಷವಾಯ್ತು, ಜನರ ಆಶೀರ್ವಾದ ಇವತ್ತಿಗೂ ಹಾಗೇ ಇದೆ

**ಮೈಸೂರು:** ಎಂಪಿ ಟಿಕೆಟ್ ಕಳೆದುಕೊಂಡು ಇವತ್ತಿಗೆ ಒಂದು ವರ್ಷವಾಯ್ತು ಎಂದು ಮಾಜಿ ಸಂಸದ ಪ್ರತಾಪ್ ಸಿಂಹ ಹೇಳಿಕೊಂಡಿದ್ದಾರೆ.

ಎಂಪಿ ಟಿಕೆಟ್ ಕಳೆದುಕೊಂಡು ಇವತ್ತಿಗೆ ಒಂದು ವರ್ಷವಾಯಿತು. ಆದರೆ ಕಾರ್ಯಕರ್ತರ ಪ್ರೀತಿ, ಜನರ ಆಶೀರ್ವಾದ ಇವತ್ತಿಗೂ ಹಾಗೇ ಇದೆ ಮತ್ತು ನೀವು ಕೊಟ್ಟಿರುವ ಈ ಶಕ್ತಿಯಿಂದಲೇ ಇವತ್ತಿಗೂ ಸೈದ್ಧಾಂತಿಕ ಕೆಲಸ ಮತ್ತು ಹೋರಾಟವನ್ನು 8 ಎಫ್‌ಐಆರ್ ಹಾಕಿಸಿಕೊಂಡರೂ ಮುಂದುವರಿಸುತ್ತಿದ್ದೇನೆ. ನಿಮ್ಮ ಪ್ರೀತಿ, ವಿಶ್ವಾಸ ಮತ್ತು ಆಶೀರ್ವಾದ ಹೀಗೇ ನಿರಂತರವಾಗಿರಲಿ ಎಂದಿದ್ದಾರೆ.



ಕಳೆದ ಎಂಪಿ ಚುನಾವಣೆಯಲ್ಲಿ ಮೈಸೂರು ಲೋಕಸಭಾ ಕ್ಷೇತ್ರದ ಟಿಕೆಟ್ ಸಿಗುವ ವಿಶ್ವಾಸವನ್ನು ಪ್ರತಾಪ್ ಸಿಂಹ ವ್ಯಕ್ತಪಡಿಸಿದ್ದರು. ಟಿಕೆಟ್ ಸಿಗದಿದ್ದರೆ ಪಕ್ಷಕ್ಕಾಗಿ ದುಡಿಯುತ್ತೇನೆ ಎಂದು ಹೇಳಿಕೊಂಡಿದ್ದರು. ಇನ್ನೂ ಟಿಕೆಟ್ ಕೈತಪ್ಪುವ ಬಗ್ಗೆ ಮಾಧ್ಯಮಗಳಲ್ಲಿ ಸುದ್ದಿ ಪ್ರಸಾರವಾಗುತ್ತಿದ್ದಂತೆ ಅವರಿಗೆ ಟಿಕೆಟ್ ನೀಡುವಂತೆ ಅಭಿಯಾನಗಳು ಸಹ ನಡೆದಿದ್ದವು.

ಅಂತಿಮವಾಗಿ ಬಿಜೆಪಿ ಹೈಕಮಾಂಡ್ ಯದುವೀರ್ ಒಡೆಯರ್ ಅವರಿಗೆ ಟಿಕೆಟ್ ನೀಡಿತ್ತು. ಎನ್‌ಡಿಎ ಮೈತ್ರಿಕೂಟದ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದ ಅವರು, ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ್ ವಿರುದ್ಧ 1.30 ಲಕ್ಷಕ್ಕೂ ಹೆಚ್ಚು ಮತಗಳ ಅಂತರದಿಂದ ಜಯಗಳಿಸಿದ್ದರು. ಇದರಿಂದ ತವರಲ್ಲೇ ಸಿಎಂಗೆ ಮುಖಭಂಗವಾಗಿತ್ತು.

# ನೀರಿನ ದರ 1 ಪೈಸೆ ಹೆಚ್ಚಳ

**ಬೆಂಗಳೂರು:** ನಗರದಲ್ಲಿ ಪ್ರತಿ 1 ಲೀಟರ್ ನೀರಿಗೆ 1 ಪೈಸೆ ಹೆಚ್ಚಿಸಲು ರಾಜ್ಯ ಸರ್ಕಾರ ತೀರ್ಮಾನಿಸಿದೆ ಎಂದು ಡಿಸಿಎಂ ಡಿ.ಕೆ ಶಿವಕುಮಾರ್ ತಿಳಿಸಿದ್ದಾರೆ.

ವಿಧಾನ ಪರಿಷತ್‌ನಲ್ಲಿ ಶೂನ್ಯವೇಳೆಯಲ್ಲಿ ಕಾಂಗ್ರೆಸ್ ಸದಸ್ಯ ರಾಮೋಜಿಗೌಡ ಪ್ರಶ್ನೆಗೆ ಡಿಸಿಎಂ ಡಿಕೆಶಿವಕುಮಾರ್ ಉತ್ತರಿಸಿದರು.



ಬೇಸಿಗೆ ಕಾಲದಲ್ಲಿ ಬೆಂಗಳೂರಿನಲ್ಲಿ ನೀರಿನ ಸಮಸ್ಯೆ ಪರಿಹಾರಕ್ಕೆ ಅನೇಕ ಕ್ರಮ ತೆಗೆದುಕೊಳ್ತಿದ್ದೇವೆ. ಮಾರ್ಚ್ 22ರಂದು ವಿಶ್ವ ಜಲ ದಿನ ಇದೆ. ಹೀಗಾಗಿ ಅಂದಿನಿಂದ ಒಂದು ತಿಂಗಳ ಕಾಲ ನೀರು ಉಳಿಸಿ ಅಭಿಯಾನ ಹಮ್ಮಿಕೊಂಡಿದ್ದೇವೆ ಎಂದು ತಿಳಿಸಿದರು. ಅಪಾರ್ಟ್‌ಮೆಂಟ್‌ಗಳಲ್ಲಿ ಕೆಲವರು ಯಾವುದೇ ಅನುಮತಿ ಇಲ್ಲದೇ ಬೋರ್‌ವೆಲ್ ಕೊರೆದಿದ್ದಾರೆ. ಅವರಿಗೆ ನೋಟೀಸ್ ಕೊಡುವ ಕೆಲಸ ಮಾಡಿದ್ದೇವೆ. 2014 ರಿಂದ ಇಲ್ಲಿವರೆಗೂ ನೀರಿನ ದರ ಏರಿಕೆ ಮಾಡಿಲ್ಲ. ಹೀಗಾಗಿ 1 ಪೈಸೆ ಆದರು ಜಾಸ್ತಿ ಮಾಡಬೇಕು ಅಂತ ತೀರ್ಮಾನ ಮಾಡಲಾಗಿದೆ. 6-7 ಪೈಸೆ ಜಾಸ್ತಿ ಮಾಡಬೇಕು ಅಂತ ಬಿಡಬ್ಲ್ಯೂಎಸ್ ಎಸ್‌ಬಿ ಅವರು ಮನವಿ ಮಾಡಿದ್ರು. ನಾನು 1 ಪೈಸೆ ಏರಿಕೆ ಮಾಡಲು ಒಪ್ಪಿಗೆ ಕೊಟ್ಟಿದ್ದೇನೆ ಎಂದು ವಿವರಿಸಿದರು.

ಈಗ ಬಿಬಿಎಂಪಿ ಬಜೆಟ್ ಮೀಟಿಂಗ್ ಮಾಡುತ್ತೇನೆ. ಆಗ ಬೆಂಗಳೂರಿನ ಎಲ್ಲಾ ಶಾಸಕರ ಸಭೆ ಕರೆದು ನಿರ್ಧಾರ ಮಾಡ್ತೀವಿ. ಅಂಡರ್ ಗ್ರೌಂಡ್ ವಾಟರ್ ಹೆಚ್ಚಿಸಲು ಎಲ್ಲಾ ಕೆರೆ ತುಂಬಿಸೋ ಯೋಚನೆ ಮಾಡಿದ್ದೇವೆ ಎಂದು ಮಾಹಿತಿ ನೀಡಿದರು.

# ಚಿನ್ನ ತಂದೇ ಇಲ್ಲ, ಪ್ರಕರಣದಲ್ಲಿ ಸಿಲುಕಿಸಲಾಗಿದೆ

**ಬೆಂಗಳೂರು:** ನಾನು ವಿಮಾನದಲ್ಲಿ ಚಿನ್ನವನ್ನು ತಂದೇ ಇಲ್ಲ ಎಂದು ನಟಿ ರನ್ಯಾ ರಾವ್ ದೂರು ನೀಡಿದ್ದಾಳೆ. ಕಂದಾಯ ಗುಪ್ತಚರ ನಿರ್ದೇಶನಾಲಯ ಅಧಿಕಾರಿಗಳಿಂದ ಬಂಧನಕ್ಕೆ ಒಳಗಾಗಿ ಸದ್ಯ ನ್ಯಾಯಾಂಗ ಬಂಧನದಲ್ಲಿರುವ ರನ್ಯಾ ರಾವ್ ಈಗ ದೂರು ನೀಡುವ ಮೂಲಕ ಪ್ರಕರಣಕ್ಕೆ ಟ್ವಿಸ್ಟ್ ನೀಡಿದ್ದಾಳೆ. ಪರಪ್ಪನ ಅಗ್ರಹಾರ ಜೈಲರ್‌ಗೆ ದೂರು ನೀಡಿರುವ ರನ್ಯಾ, ನನ್ನ ಮೇಲೆ ಸುಳ್ಳು ಆರೋಪ ಮಾಡಲಾಗಿದೆ. ಯಾರನ್ನೋ ಬಚಾವ್ ಮಾಡಲು ನನ್ನನ್ನು ಪ್ರಕರಣದಲ್ಲಿ ಸಿಲುಕಿಸಲಾಗಿದೆ ಎಂದು ಆರೋಪಿಸಿದ್ದಾಳೆ.

ನಾನು ವಿಮಾನದಲ್ಲಿ ಚಿನ್ನವನ್ನು ತಂದೇ ಇಲ್ಲ. ಈ ಪ್ರಕರಣದಲ್ಲಿ ನಾನು ನಿರಪರಾಧಿಯಾಗಿದ್ದೇನೆ. ದುಬೈನಲ್ಲಿ ನನಗೆ ರಿಯಲ್ ಎಸ್ಟೇಟ್ ಬಿಸಿನೆಸ್ ಮಾಡುತ್ತಿದ್ದೆ. ಈ ಕಾರಣಕ್ಕೆ ನಾನು ದುಬೈಗೆ ತೆರಳಿದ್ದೆ. ಮಾರ್ಚ್ 3 ರಂದು ಬೆಳಗ್ಗೆ ಹೋಗಿ ಕೆಲಸ ಮುಗಿಸಿದ ಬಳಿಕ ತಕ್ಷಣ ಮರಳಿದ್ದೇನೆ ಎಂದು ಹೇಳಿದ್ದಾಳೆ. ಜೈಲರ್‌ಗೆ ಸಲ್ಲಿಸಿದ ದೂರನ್ನು ಪೊಲೀಸ್ ಅಧಿಕಾರಿಗಳು ಡಿಆರ್‌ಐಗೆ ವರ್ಗಾವಣೆ ಮಾಡಿದ್ದಾರೆ. ಈಗ ಡಿಆರ್‌ಐ ಅಧಿಕಾರಿಗಳು




ದೂರನ್ನು ಪರಿಶೀಲನೆ ಮಾಡುತ್ತಿದ್ದಾರೆ.

ರನ್ಯಾ ಬಂಧನವಾಗುವ 2 ವಾರಗಳ ಹಿಂದೆ ರನ್ಯಾ ದುಬೈಗೆ ಹೋಗಿ ಬಂದಿದ್ದಳು. ಆಗ ವಿಮಾನ ನಿಲ್ದಾಣದಲ್ಲಿ ತಪಾಸಣೆ ವೇಳೆ ಕಸ್ಟಮ್ ಅಧಿಕಾರಿಗಳೊಂದಿಗೆ ಕಿರಿಕ್ ಮಾಡಿಕೊಂಡು, ನಾನು ಡಿಜಿಪಿ ಮಗಳು ಎಂದು ತಪಾಸಣೆಗೆ ಒಳಗಾಗದೇ ಹೊರಗೆ ಬರುತ್ತಿದ್ದದ್ದಳು. ಪ್ರತಿ ಬಾರಿ ಆಕೆಯನ್ನು ಕರೆದೊಯ್ಯಲು ವಿಮಾನ ನಿಲ್ದಾಣ ಪೊಲೀಸ್ ಠಾಣೆಯ ಹೆಡ್ ಕಾನ್ ಸ್ಟೇಬಲ್ ಬಸವರಾಜು ಹೋಗುತ್ತಿದ್ದರು. ಈ ಜಗಳದ ಬಳಿಕ ರನ್ಯಾಳ ಮೇಲೆ ಕಣ್ಣಿಟ್ಟಿದ್ದ ಡಿಆರ್‌ಐ ಅಧಿಕಾರಿಗಳು ಆಕೆಯ ವಿದೇಶ ಪ್ರಯಾಣದ ಮೇಲೆ ಕಣ್ಣಿಟ್ಟಿದ್ದರು. ರನ್ಯಾ ಮತ್ತೆ ದುಬೈಗೆ ಪ್ರಯಾಣ ಬೆಳೆಸಿದ ಬೆನ್ನಲ್ಲೇ ಜಾಗೃತರಾದ ಅಧಿಕಾರಿಗಳು ರನ್ಯಾ ಬರುವಿಕೆಗಾಗಿಯೇ ಕಾಯುತ್ತಿದ್ದರು. ಮಾ. 3 ರಂದು ರನ್ಯಾ ಪತಿ ಜೊತೆ ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಬಂದಿಳಿಯುತ್ತಿದ್ದಂತೆ ಡಿಆರ್‌ಐ ಅಧಿಕಾರಿಗಳು ಆಕೆಯನ್ನು ವಶಕ್ಕೆ ಪಡೆದಿದ್ದಾರೆ. ಆಗಲೂ ಸಹ ರನ್ಯಾಳನ್ನು ತಪಾಸಣೆ ಇಲ್ಲದೇ ಹೊರಗೆ ಕರೆತರಲು ವಿಮಾನ ನಿಲ್ದಾಣ ಠಾಣೆ ಹೆಡ್ ಕಾನ್‌ಸ್ಟೇಬಲ್ ಬಸವರಾಜ್ ತೆರಳಿದ್ದರು. ರನ್ಯಾಳನ್ನ ಅಧಿಕಾರಿಗಳು ವಶಕ್ಕೆ ಪಡೆದಾಗ ಅವರು ಡಿಜಿಪಿ ರಾಮಚಂದ್ರರಾವ್ ಅವರ ಮಗಳು ಎಂದಿದ್ದಾರೆ. ಕೂಡಲೇ ರನ್ಯಾಳನ್ನು ಲೋಹ ಪರಿಶೋಧಕ ಕಚೇರಿಯಲ್ಲಿ ಪರೀಕ್ಷೆಗೆ ಒಳಪಡಿಸಿದಾಗ 1 ಕೆಜಿ ತೂಕದ 14 ಗೋಲ್ಡ್ ಬಿಸ್ಕೆಟ್ ತಂದಿರುವುದು ತಿಳಿದಿದೆ. ತೊಡೆಯ ಭಾಗಕ್ಕೆ 14 ಬಿಸ್ಕೆಟ್‌ಗಳನ್ನು ಗಮ್ ಹಾಕಿ ಅಂಟಿಸಿಕೊಂಡು ಬಳಿಕ ಟೇಪ್‌ನಿಂದ ಸುತ್ತಿಕೊಂಡಿದ್ದಳು. ಯಾವುದೇ ಸ್ಕ್ಯಾನರ್‌ನಲ್ಲಿ ಅನುಮಾನ ಬಾರದಂತೆ ಕ್ರ್ಯಾಂಪ್ ಬ್ಯಾಂಡೇಜ್ ಹಾಕಿಕೊಂಡು ಬಂದಿದ್ದಳು. ಕೂಡಲೇ ಡಿಆರ್‌ಐ ಅಧಿಕಾರಿಗಳು ವಶಕ್ಕೆ ಪಡೆದು ವಿಚಾರಿಸಿದಾಗದೇ ಆಕೆ ಪೊಲೀಸ್ ಅಧಿಕಾರಿಯ ಮಗಳು ಎನ್ನುವುದು ಬಯಲಾಗಿದೆ.

## ಮೊದಲನೇ ಪುಟದಿಂದ...

## ಇಬ್ಬರ ಕಾಲಿಗೆ ಗುಂಡೇಟು!

ಕಾರ್ಯಾಚರಣೆ ವೇಳೆ, ಮೂವರು ಪೊಲೀಸ್ ಸಿಬ್ಬಂದಿಗೆ ಗಾಯವಾಗಿದ್ದು, ಅವರನ್ನು ಕಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿದೆ. ಆಸ್ಪತ್ರೆಗೆ ಪೊಲೀಸ್ ಕಮಿಷನರ್ ಎನ್. ಶಶಿಕುಮಾರ್ ಭೇಟಿ ನೀಡಿ ಪೊಲೀಸ್ ಸಿಬ್ಬಂದಿಯ ಆರೋಗ್ಯ ವಿಚಾರಿಸಿದ್ದಾರೆ.

ಪೊಲೀಸರಿಂದ ಗುಂಡೇಟು ತಿಂದ ಆರೋಪಿಗಳನ್ನು ಸಹ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಚಿಕಿತ್ಸೆ ನೀಡಲಾಗುತ್ತಿದೆ.

## ಐರಾವತ ಬಸ್‌ಗೆ ಡಿಕ್ಕಿ!

ಈ ವೇಳೆ ಚಾಲಕನ ನಿಯಂತ್ರಣ ತಪ್ಪಿ ರಸ್ತೆಯಲ್ಲಿ ನಿಂತಿದ್ದ ಕಾರು, ಆಟೋ, ಬೈಕ್‌ಗೆ ಡಿಕ್ಕಿಯಾಗಿದೆ. ಡಿಕ್ಕಿಯ ರಭಸಕ್ಕೆ ಆಟೋ ಅಪ್ಪಚ್ಚಿಯಾಗಿದೆ ಅಷ್ಟೇ ಅಲ್ಲದೇ ಸ್ಯಾಟಲೈಟ್ ಬಸ್ ನಿಲ್ದಾಣದಿಂದ ಹೊರಬರುತ್ತಿದ್ದ ಐರಾವತ ಬಸ್‌ಗೂ ಸಹ ಕ್ಯಾಂಟರ್ ಡಿಕ್ಕಿಹೊಡೆದಿದೆ. ಬಳಿಕ ಲಾರಿಯೊಂದಕ್ಕೆ ಡಿಕ್ಕಿಯಾಗಿ ಕ್ಯಾಂಟರ್ ನಿಂತಿದೆ.

ಅಪಘಾತದಲ್ಲಿ ಅದೃಷ್ಟವಶಾತ್ ಯಾರಿಗೂ ಪ್ರಾಣಾಪಾಯ ಆಗಿಲ್ಲ. ಡಿಕ್ಕಿಯ ರಭಸಕ್ಕೆ ಕ್ಯಾಂಟರ್ನ ಮುಂಭಾಗ ಅಪ್ಪಚ್ಚಿಯಾಗಿದೆ. ಅಪಘಾತದಲ್ಲಿ ಗಾಯಗೊಂಡಿದ್ದ ಕ್ಯಾಂಟರ್ ಚಾಲಕನನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಕ್ಯಾಂಟರ್ ಚಾಲಕ ಕುಡಿದು ವಾಹನ ಚಲಾಯಿಸಿರುವ ಶಂಕೆ ವ್ಯಕ್ತವಾಗಿದೆ.

## ಬಿಎಲ್‌ಎ ಹೇಳಿಕೆ

ಪಾಕಿಸ್ತಾನಿ ಸೇನೆಯು ಪರಿಸ್ಥಿತಿಯನ್ನು ತಪ್ಪಾಗಿ ನಿರೂಪಿಸಲು ಪ್ರಯತ್ನಿಸುತ್ತಿದೆ. ಯುದ್ಧ ನಿಯಮಗಳ ಅಡಿ ಕೆಲವರನ್ನು ನಾವೇ ಬಿಡುಗಡೆ ಮಾಡಿದ್ದೇವೆ. ಇದನ್ನು ತಪ್ಪಾಗಿ ನಿರೂಪಿಸಿ ಪಾಕ್ ಸುಳ್ಳು ಹೇಳಿದೆ ಎಂದು ಬಿಎಲ್‌ಎ ಪ್ರತಿಕ್ರಿಯಿಸಿದೆ.

ಹೇಳಿಕೆಯಲ್ಲಿ, ಕಾರ್ಯಾಚರಣೆಯಲ್ಲಿ ಸಾವನ್ನಪ್ಪಿದ 12 ಬಿಎಲ್‌ಎ ಹೋರಾಟಗಾರರಿಗೆ ಶ್ರದ್ಧಾಂಜಲಿ ಅರ್ಪಿಸಿದೆ. 33 ಬಿಎಲ್‌ಎ ಹೋರಾಟಗಾರರನ್ನು ಸದೆಬಡಿದು ಜನರನ್ನು ರಕ್ಷಿಸಿರುವುದಾಗಿ ಪಾಕ್ ಹೇಳಿತ್ತು.

## ಬೆಂಗಳೂರಿಗೆ ಶಿಫ್ಟ್!

ಎಸ್‌ಎಸ್ ಆಸ್ಪತ್ರೆತಲ್ಲಿ ರುದ್ರಪ್ಪ ಲಮಾಣಿ ಅವರಿಗೆ ಐಸಿಯುನಲ್ಲಿ ಚಿಕಿತ್ಸೆ ನೀಡಲಾಗಿತ್ತು. ಸಿಟಿ ಸ್ಕ್ಯಾನ್ ಸೇರಿದಂತೆ ಇತರೆ ಚಿಕಿತ್ಸೆ ನೀಡಲಾಗಿದ್ದು, ಅವರ ಆರೋಗ್ಯ ಸ್ಥಿರವಾಗಿದೆ. ಯಾವುದೇ ಆತಂಕ ಪಡುವ ಅಗತ್ಯವಿಲ್ಲ ಎಂದು ತಿಳಿದುಬಂದಿತ್ತು. ಆದ್ರೆ, ಇದೀಗ ಇಂದು (ಮಾರ್ಚ್ 15) ಬೆಳಗ್ಗೆ ಏಕಾಏಕಿ ದಾವಣಗೆರೆ ಎಸ್‌ಎಸ್ ಆಸ್ಪತ್ರೆಯಿಂದ ಬೆಂಗಳೂರಿನ ಅಪೋಲೋ ಆಸ್ಪತ್ರೆಗೆ ಶಿಫ್ಟ್ ಮಾಡಲಾಗಿದೆ.

ಸದ್ಯ ರುದ್ರಪ್ಪ ಲಮಾಣಿ ಅವರ ಆರೋಗ್ಯದ ಬಗ್ಗೆ ವೈದ್ಯರಾಗಲಿ, ಅವರ ಕುಟುಂಬಸ್ಥರಾಗಲಿ ಯಾವುದೇ ಗುಟ್ಟು ಬಿಟ್ಟುಕೊಟ್ಟಿಲ್ಲ. ನಿನ್ನೆ ರಾತ್ರಿಯವರೆಗೂ ಚೆನ್ನಾಗಿದ್ದಾರೆ , ಸಣ್ಣಪುಟ್ಟ ಗಾಯಗಳಾಗಿವೆ ಅಷ್ಟೇ ಎಂದು ತಿಳಿದುಬಂದಿತ್ತು. ಆದ್ರೆ ಇದೀಗ ದಿಢೀರ್ ಬೆಂಗಳೂರಿಗೆ ಶಿಫ್ಟ್ ಮಾಡಿದ್ದು, ಅವರ ಬೆಂಬಲಿಗರಿಗೆ ಆತಂಕಕ್ಕೆ ಕಾರಣವಾಗಿದೆ.

## ಪ್ರವಾಸಿ ತಾಣಗಳಿಗೆ ನಿರ್ಬಂಧ

ಚಿಕ್ಕಮಗಳೂರು ಜಿಲ್ಲಾಡಳಿತ ನೇತೃತ್ವದಲ್ಲಿ ನಡೆಯುವ ಉರುಸ್ ಆಚರಣೆಗೆ ರಾಜ್ಯ ಸೇರಿದಂತೆ ಹೊರ ರಾಜ್ಯದಿಂದ ಸಾವಿರಾರು ಜನರು ಆಗಮಿಸುತ್ತಾರೆ. ಉರುಸ್ ಆಚರಣೆಯಲ್ಲಿ ಸೂಫಿ ಸಂತರು ಭಾಗಿಯಾಗಲಿದ್ದಾರೆ. ಉರುಸ್ ಆಚರಣೆ ಹಿನ್ನೆಲೆಯಲ್ಲಿ ಶ್ರೀ ಗುರುದತ್ತಾತ್ರೇಯ ಬಾಬಾಬುಡನ್‌ಸ್ವಾಮಿ ದರ್ಗಾ (ದತ್ತಪೀಠ) ಸೇರಿದಂತೆ ಚಿಕ್ಕಮಗಳೂರು ಜಿಲ್ಲೆಯಾದ್ಯಂತ ಪೊಲೀಸ್ ಬಿಗಿ ಭದ್ರತೆ ಕೈಗೊಳ್ಳಲಾಗಿದೆ. ಭದ್ರತೆಗಾಗಿ ಒಂದು ಸಾವಿರ ಪೊಲೀಸರನ್ನು ನಿಯೋಜನೆ ಮಾಡಲಾಗಿದೆ.

ಶಾಖಾದ್ರಿ ಕುಟುಂಬದಿಂದ ಉರುಸ್ ಆಚರಣೆಗೆ ಪಟ್ಟು ನಮ್ಮ ನೇತೃತ್ವದಲ್ಲಿ ಉರುಸ್ ಆಚರಣೆ ನಡೆಯಬೇಕೆಂದು ಶಾಖಾದ್ರಿ ಕುಟುಂಬ ಪಟ್ಟು ಹಿಡಿದಿದೆ. ವಿವಾದಿತ ಗುಹೆಯೊಳಗಿನ ಗೋರಿಗಳಿಗೆ ಗಂಧ ಲೇಪನಕ್ಕೆ ಶಾಖಾದ್ರಿ ಕುಟುಂಬ ಅವಕಾಶ ಕೇಳಿದೆ. ಆದರೆ, ಶಾಖಾದ್ರಿ ಕುಟುಂಬದ ನೇತೃತ್ವದ ಉರುಸ್ ಆಚರಣೆಗೆ ಜಿಲ್ಲಾಡಳಿತ ಅನುಮತಿ ನೀಡಿಲ್ಲ. ಉರುಸ್, ಗಂಧ ಲೇಪನಕ್ಕೆ ಅವಕಾಶ ಕೇಳಿ ಶಾಖಾದ್ರಿ ಕುಟುಂಬ ಸುಪ್ರೀಂ ಕೋರ್ಟ್ ಮೊರೆ ಹೋಗಿದೆ.

## ಬಿಜೆಪಿ ಮುಖಂಡನಿಂದ ಹಲ್ಲೆ?

ಮಧುಗಿರಿ ಬಿಜೆಪಿ ಜಿಲ್ಲಾಧ್ಯಕ್ಷ ಹನುಮಂತೇಗೌಡ ಅವರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಈ ವೇಳೆ, ''ಪೊಲೀಸರಿಂದಲೇ ನನ್ನ ಮೇಲೆ ಹಲ್ಲೆ ನಡೆದಿದೆ'' ಎಂದು ಹನುಮಂತೇಗೌಡ ಪ್ರತಿ ಆರೋಪ ಮಾಡಿದ್ದಾರೆ. ಬಿಜೆಪಿ ಜಿಲ್ಲಾಧ್ಯಕ್ಷ ಹನುಮಂತೇಗೌಡ ಎದೆ ನೋವೆಂದು ಆಸ್ಪತ್ರೆಗೆ ದಾಖಲಾಗಿದ್ದಾರೆ. ಚಿತ್ರದುರ್ಗ ನಗರ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

**ಪಿಎಸ್‌ಐ ಅವಾಚ್ಯ ಶಬ್ದಗಳಿಂದ ನಿಂದಿಸಿದರು: ಪ್ರತ್ಯಕ್ಷದರ್ಶಿ:** ಘಟನೆ ಸಂಬಂಧ ಬಿಜೆಪಿ ಜಿಲ್ಲಾ ಅಧ್ಯಕ್ಷ ಹನುಮಂತೇಗೌಡರ ಕಾರು ಚಾಲಕ, ಪ್ರತ್ಯಕ್ಷದರ್ಶಿ ರಂಗಸ್ವಾಮಿ ಮಾತನಾಡಿ, ನಿನ್ನೆ ರಾತ್ರಿ 11:30ರ ಸುಮಾರಿಗೆ ಘಟನೆ ನಡೆದಿದೆ. ಖಾಸಗಿ ಹೋಟೆಲ್‌ನಲ್ಲಿ ಊಟ ಮಾಡಿ ಹೊರಡಲು ನಿಂತಿದ್ದೆವು. ಹನುಮಂತೇಗೌಡರ ಜತೆಗೆ ಇಬ್ಬರು ಸ್ನೇಹಿತರು ಇದ್ದರು. ಈ ವೇಳೆ ಸ್ಥಳಕ್ಕೆ ಆಗಮಿಸಿದ ಪಿಎಸ್‌ಐ ಗಾದಿಲಿಂಗಪ್ಪ ಅವರು ''ರಾತ್ರಿ ಇಷ್ಟೊತ್ತಾದರೂ ಏಕೆ ನಿಂತಿದ್ದೀರೋ ಎಂದು ಪ್ರಶ್ನಿಸಿದರು. ಸರ್ ಹೊರಡುತ್ತಿದ್ದೇವೆ ಎಂದರೂ ಏಕವಚನದಲ್ಲೇ ಗದರಿದರು. ನಾನು ಬಿಜೆಪಿ ಜಿಲ್ಲಾಧ್ಯಕ್ಷ, ಗೌರವಯುತವಾಗಿ ಮಾತಾಡಿ ಎಂದು ಹನುಮಂತೇಗೌಡ ಹೇಳಿದರು. ಆದರೂ, ಪಿಎಸ್‌ಐ ಗಾದಿಲಿಂಗಪ್ಪ ಅವಾಚ್ಯ ಶಬ್ದಗಳಿಂದ ನಿಂದಿಸಿದರು. ಆಗ ನೂಕಾಟ ತಳ್ಳಾಟ ನಡೆಯಿತು, ಪಿಎಸ್‌ಐ ಹಲ್ಲೆ ಮಾಡಿದರು. ಪಿಎಸ್‌ಐ ಮೇಲೆ ಹನುಮಂತೇಗೌಡ ಹಲ್ಲೆ ಮಾಡಿಲ್ಲ. ಎದೆನೋವು ಕಾರಣಕ್ಕೆ ಹನುಮಂತೇಗೌಡ ಜಿಲ್ಲಾಸ್ಪತ್ರೆಗೆ ದಾಖಲಾಗಿದ್ದಾರೆ'' ಎಂದು ಹೇಳಿದರು.

## ಹುಟ್ಟುಹಾಕಿದ ಅಂತ್ಯಕ್ರಿಯೆ

ಕಳೆದ ಮಾರ್ಚ್ 3 ರಂದು ಸ್ವಾತಿ ಕಾಣೆಯಾಗಿದ್ದಳು. ಈ ಕುರಿತು ಸ್ವಾತಿ ಪೋಷಕರು ಮಿಸ್ಸಿಂಗ್ ಕಂಪ್ಲೇಂಟ್ ದಾಖಲು ಮಾಡಿದ್ದರು. ಹಿರೇಕೇರೂರು ಪೊಲೀಸ್ ಠಾಣೆಯಲ್ಲಿ ಮಿಸ್ಸಿಂಗ್ ಕಂಪ್ಲೇಂಟ್ ದಾಖಲಾಗಿತ್ತು. ಮಾರ್ಚ್ 6 ರಂದು ರಾಣೆಬೆನ್ನೂರು ತಾಲೂಕು ಪತ್ತೆಪುರ ಬಳಿ ಸ್ವಾತಿ ಶವ ಪತ್ತೆಯಾಗಿತ್ತು. ಸ್ವಾತಿ ತಂದೆ ತೀರಿಕೊಂಡಿದ್ದು, ತಾಯಿ ಜೊತೆ ವಾಸವಿದ್ದಳು ಎನ್ನಲಾಗಿದೆ. ಸ್ವಾತಿ ಕೊಲೆಯಾಗಿದ್ದಾಗಿ ಪೊಲೀಸರು ಪೋಷಕರಿಗೆ ಮಾಹಿತಿ ನೀಡಿದ್ದು, ಶವದ ಚಿತ್ರವನ್ನು ಪೋಷಕರಿಗೆ ತೋರಿಸಿದ್ದಾರೆ. ಫೋಟೋದಲ್ಲಿಯೇ ಈಕೆ ತನ್ನ ಮಗಳು ಎಂದು ತಾಯಿ ತಿಳಿಸಿದ್ದಾರೆ.

ಈ ನಡುವೆ ಹಿಂದೂ ಮುಖಂಡ ಪ್ರಮೋದ್ ಮುತಾಲಿಕ್ ಅವರು ಈ ಹತ್ಯೆಯನ್ನು ಲವ್ ಜಿಹಾದ್ ಎಂದು ಬಣ್ಣಿಸಿದ್ದಾರೆ. ಸ್ವಾತಿ ಜೊತೆ ಪ್ರೀತಿಯಲ್ಲಿದ್ದ ನಯಾಜ್ ಎಂಬಾತ ಮತ್ತೊಂದು ಮದುವೆಗೆ ಸಿದ್ಧತೆ ನಡೆಸುತ್ತಿದ್ದ ಹಿನ್ನೆಲೆಯಲ್ಲಿ ಈ ಹತ್ಯೆ ನಡೆದಿದೆ ಎಂದು ಮುತಾಲಿಕ್ ಆರೋಪಿಸಿದ್ದಾರೆ. ಇದಕ್ಕೆ ಹಿಂದೂ ಹುಡುಗರೂ ಸಹಕಾರ ನೀಡಿದ್ದಾರೆ ಎಂದು ಅವರು ಆರೋಪಿಸಿದರು. ಲವ್ ಜಿಹಾದ್ ಪ್ರಕರಣಗಳು ಹಾವೇರಿ ಜಿಲ್ಲೆಯಲ್ಲಿ ಹೆಚ್ಚಾಗುತ್ತಿದ್ದು, ಇದೊಂದು ದಂಧೆಯಂತೆ ನಡೆಯುತ್ತಿದೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

## ಗಲಾಟೆ

ಕಾಕಿನಾಡಿನ ಪಿಠಾಂಪುರಂನಲ್ಲಿ ನಡೆದ ಜನಸೇನಾ ಪಕ್ಷದ 12ನೇ ಸಂಸ್ಥಾಪನಾ ದಿನಾಚರಣೆಯಲ್ಲಿ ಪವನ್ ಕಲ್ಯಾಣ್ ಮಾತನಾಡಿದ್ದಾರೆ. 'ಕೆಲವರು ಸಂಸ್ಕೃತ, ಹಿಂದಿಯನ್ನು ಏಕೆ ಟೀಕಿಸುತ್ತಾರೆ ಗೊತ್ತಿಲ್ಲ. ಆರ್ಥಿಕ ಲಾಭಕ್ಕಾಗಿ ತಮ್ಮ ಸಿನಿಮಾಗಳನ್ನು ಹಿಂದಿಗೆ ಡಬ್ ಮಾಡಲು ಅವಕಾಶ ನೀಡುವ ತಮಿಳುನಾಡಿನ ರಾಜಕಾರಣಿಗಳು ಹಿಂದಿ ಭಾಷೆಯನ್ನು ಏಕೆ ವಿರೋಧಿಸುತ್ತಾರೆ ಅವರು ಬಾಲಿವುಡ್‌ನಿಂದ ಹಣ ಮಾಡಲು ಬಯಸುತ್ತಾರೆ. ಆದರೆ, ಹಿಂದಿಯನ್ನು ಸ್ವೀಕರಿಸಲು ನಿರಾಕರಿಸುತ್ತಾರೆ, ಇದು ಯಾವ ರೀತಿಯ ತರ್ಕ' ಎಂದು ಪ್ರಶ್ನೆ ಮಾಡಿದ್ದಾರೆ.

'ತಮಿಳು ಸೇರಿದಂತೆ ಭಾರತಕ್ಕೆ ಎಲ್ಲಾ ಭಾಷೆಗಳು ಬೇಕು. ಯಾವುದೋ ಎರಡು ಭಾಷೆ ಮಾತ್ರ ಸಾಕಾಗಲ್ಲ. ನಾವು ಭಾಷಾ ವೈವಿಧ್ಯತೆಯನ್ನು ಅಳವಡಿಸಿಕೊಳ್ಳಬೇಕು. ನಮ್ಮ ದೇಶದ ಸಮಗ್ರತೆಯನ್ನು ಕಾಪಾಡಿಕೊಳ್ಳುವುದರ ಜೊತೆಗೆ ನಮ್ಮ ಜನರಲ್ಲಿ ಪ್ರೀತಿ ಮತ್ತು ಏಕತೆಯನ್ನು ಉತ್ತೇಜಿಸಲು ಭಾಷಾ ವೈವಿಧ್ಯತೆಯ ಅಗತ್ಯವಿದೆ' ಎಂದಿದ್ದಾರೆ ಅವರು.

**ಸ್ಟಾಲಿನ್ ಹೇಳಿದ್ದೇನು?:** ಮಾರ್ಚ್ 13ರಂದು ತಮಿಳುನಾಡು ಸಿಎಂ ಸ್ಟಾಲಿನ್ ಅವರು 'ಎನ್ ಇಪಿ'ಯನ್ನು ವಿರೋಧಿಸಿದ್ದರು. ಇದನ್ನು ಹಿಂದಿಯನ್ನು ಉತ್ತೇಜಿಸಲು ವಿನ್ಯಾಸಗೊಳಿಸಲಾದ 'ಕೇಸರಿ ನೀತಿ' ಎಂದು ಹೇಳಿದ್ದರು. ಈ ನೀತಿಯು ತಮಿಳುನಾಡಿನ ಶಿಕ್ಷಣ ವ್ಯವಸ್ಥೆಯನ್ನು ನಾಶಮಾಡುತ್ತದೆ ಎಂದಿದ್ದರು.

'ರಾಷ್ಟ್ರೀಯ ಶಿಕ್ಷಣ ನೀತಿಯು, ಶಿಕ್ಷಣ ನೀತಿಯಲ್ಲ, ಅದು ಕೇಸರೀಕರಣದ ನೀತಿ ಆಗಿದೆ. ಈ ನೀತಿಯನ್ನು ಭಾರತದ ಅಭಿವೃದ್ಧಿಗಾಗಿ ಅಲ್ಲ, ಹಿಂದಿಯ ಅಭಿವೃದ್ಧಿಗಾಗಿ ಮಾಡಲಾಗಿದೆ. ಈ ನೀತಿಯು ತಮಿಳುನಾಡಿನ ಶಿಕ್ಷಣ ವ್ಯವಸ್ಥೆಯನ್ನು ಸಂಪೂರ್ಣವಾಗಿ ನಾಶಪಡಿಸುತ್ತದೆ ಎಂಬ ಕಾರಣಕ್ಕಾಗಿ ನಾವು ಇದನ್ನು ವಿರೋಧಿಸುತ್ತಿದ್ದೇವೆ. ಓಇಕ ಜಾರಿಗೆ ತರಲು ರಾಜ್ಯದ ಮೇಲೆ ಒತ್ತಡ ಹೇರಲು ಕೇಂದ್ರ ಸರ್ಕಾರವು ಹಣವನ್ನು ತಡೆಹಿಡಿಯುತ್ತಿದೆ' ಎಂದು ಸ್ಟಾಲಿನ್ ಆರೋಪಿಸಿದ್ದರು.

**ರೂಪಾಯಿ ಚಿಹ್ನೆ ಬದಲು:** ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್ ನೇತೃತ್ವದ ತಮಿಳುನಾಡು ಸರ್ಕಾರವು ರಾಜ್ಯ ಬಜೆಟ್‌ನ ಅಧಿಕೃತ ಲೋಗೋದಲ್ಲಿ ಭಾರತೀಯ ರೂಪಾಯಿ ಚಿಹ್ನೆಯಾದ ಬದಲಿಗೆ ತಮಿಳು ಅಕ್ಷರವಾದ ರೂ. ಬಳಸಲು ನಿರ್ಧರಿಸಿದೆ. ಈ ಬಗ್ಗೆ ಆದೇಶ ಕೂಡ ಹೊರಡಿಸಲಾಗಿದೆ.

## ಹುಷಾರಾಗಿರಿ!

ಬಗ್ಗೆ ಶಾಕಿಂಗ್ ಅಂಶಗಳನ್ನು ಹೊರ ಹಾಕಿದ್ದು, ಗೊತ್ತಿಲ್ಲದೇ ಹೊಟ್ಟೆ ಸೇರುತ್ತಿರುವ ಕ್ಯಾನ್ಸರ್ ಬಗ್ಗೆ ಬೆಳಕು ಚೆಲ್ಲುವ ಪ್ರಯತ್ನ ಮಾಡುತ್ತಿದ್ದಾರೆ. ಅದರಲ್ಲಿಯೂ ಕಿದ್ವಾಯಿ ಆಸ್ಪತ್ರೆಯ ಆರೋಗ್ಯ ತಜ್ಞರು ಪೇಪರ್ ಗ್ಲಾಸ್ ಗಳ ಅಪಾಯದ ಬಗ್ಗೆ ಗಮನ ಹರಿಸಿ, ಟೆಸ್ಟ್ ಮಾಡುವಂತೆ ಆಹಾರ ಹಾಗೂ ಗುಣಮಟ್ಟ ಇಲಾಖೆಗೆ ಮನವಿ ಮಾಡಿದ್ದಾರೆ. ಹಾಗಾದರೆ ಇದರಿಂದ ಯಾವ ರೀತಿಯ ಸಮಸ್ಯೆಗಳು ಬರಬಹುದು ತಜ್ಞರು ಈ ಬಗ್ಗೆ ಹೇಳುವುದೇನು ತಿಳಿದುಕೊಳ್ಳಿ.

**ಪೇಪರ್ ಗ್ಲಾಸ್‌ನಲ್ಲಿ ಟೀ ಕುಡಿಯುವವರ ಹೊಟ್ಟೆ ಸೇರ್ತಿದೆ ಕ್ಯಾನ್ಸರ್!:** ಕಿದ್ವಾಯಿ ಆಸ್ಪತ್ರೆ ಕ್ಯಾನ್ಸರ್ ತಜ್ಞರಾಗಿರುವ ಡಾ. ನವೀನ್ ಅವರು ಈ ಬಗ್ಗೆ ಕೆಲವು ಮಾಹಿತಿಗಳನ್ನು ಹಂಚಿಕೊಂಡಿದ್ದು, ಅವರು ಹೇಳುವ ಪ್ರಕಾರ, ''ಪೇಪರ್ ಗ್ಲಾಸ್ ನಲ್ಲಿ ಟೀ ಕುಡಿಯುವವರು ತುಂಬಾ ಹುಷಾರಾಗಿರಬೇಕು, ಏಕೆಂದರೆ ಪೇಪರ್ ಗ್ಲಾಸ್ ಬಿಸಿಗೆ ಮೆಲ್ಟ್ ಆಗುವ ಕಾರಣದಿಂದ ಕ್ಯಾನ್ಸರ್ ಬರುವ ಸಾಧ್ಯತೆ ಹೆಚ್ಚಾಗಿದೆ. ಅದಲ್ಲದೆ ಟೀ ಕಪ್ ನಲ್ಲಿನ ಮೈಕ್ರೋ ಪ್ಲಾಸ್ಟಿಕ್ ನಿಂದಲೂ ಕ್ಯಾನ್ಸರ್ ಬರುವ ಸಾಧ್ಯತೆಗಳಿವೆ. ಈ ಮೈಕ್ರೋ ಪ್ಲಾಸ್ಟಿಕ್ ಆರೋಗ್ಯಕ್ಕೆ ಹಾನಿಕಾರವಾಗಿದೆ. ಸಾಮಾನ್ಯವಾಗಿ ಪೇಪರ್ ಗ್ಲಾಸ್ ನಲ್ಲಿ ಜಲ ನಿರೋಧಕ ಶಕ್ತಿ ಇರದ ಕಾರಣ ಮೈಕ್ರೋಪ್ಲಾಸ್ಟಿಕ್ ಬಳಕೆ ಮಾಡಲಾಗುತ್ತದೆ. ಹೀಗಾಗಿ ನಮಗರಿವಿಲ್ಲದಂತೆ ಹೊಟ್ಟೆ ಸೇರುವ ಪ್ಲಾಸ್ಟಿಕ್ ಕಣಗಳು ನಿಧಾನಗತಿಯಲ್ಲಿ ಕ್ಯಾನ್ಸರ್ ಗೆ ಕಾರಣವಾಗಬಹುದು'' ಎಂದು ಅವರು ಹೇಳಿದ್ದಾರೆ.

**ಸಾರ್ವಜನಿಕರ ಅಭಿಪ್ರಾಯವೇನು?** ಪೇಪರ್ ಕಪ್ ಬಳಕೆಗೆ ಸಾರ್ವಜನಿಕ ವಲಯದಲ್ಲಿಯೂ ವಿರೋಧ ವ್ಯಕ್ತವಾಗುತ್ತಿದ್ದು ಟೀ ಕಾಫಿ ಕೇಳಿದಾಗ ಈ ಪೇಪರ್ ಗ್ಲಾಸ್ ಕೊಡುತ್ತಾರೆ. ನಮಗೆ ಈ ಕಪ್ ಗಳ ಅಪಾಯದ ಬಗ್ಗೆ ಅಷ್ಟಾಗಿ ಮಾಹಿತಿ ಇರದ ಕಾರಣ ಸರ್ಕಾರ ಈ ಬಗ್ಗೆ ಕ್ರಮ ವಹಿಸಿಬೇಕು. ಇತ್ತೀಚಿನ ದಿನಗಳಲ್ಲಿ ಆಹಾರವೂ ಅಷ್ಟಾಗಿ ಸೇಫ್ ಇರದ ಕಾರಣ ಸರಕಾರ ನಿಗಾ ವಹಿಸಿ ಜನರ ಆರೋಗ್ಯಕ್ಕೆ ಹಾನಿ ಮಾಡುವಂತಹ ವಸ್ತುಗಳ ಬಳಕೆಗೆ ಇತಿಶ್ರೀ ಹಾಡುವ ಮೂಲಕ ಈ ಪೇಪರ್ ಕಪ್ ಗಳನ್ನು ಬ್ಯಾನ್ ಮಾಡುವುದು ಒಳ್ಳೆಯದು ಎನ್ನುತ್ತಿದ್ದಾರೆ. ಆದರೆ ಸರಕಾರ ಈ ಬಗ್ಗೆ ತನಿಖೆ ನಡೆಸಿ ಯಾವ ರೀತಿಯ ಕ್ರಮ ತೆಗೆದುಕೊಳ್ಳುತ್ತದೆ ಎಂಬುದನ್ನು ಕಾದು ನೋಡಬೇಕಾಗಿದೆ.

# ಪೋಕ್ಸೋ ಕೇಸ್: ಸಮನ್ಸ್‌ಗೆ ತಡೆ ನೀಡಿದ ಹೈಕೋರ್ಟ್, ಯಡಿಯೂರಪ್ಪಗೆ ರಿಲೀಫ್

**ಬೆಂಗಳೂರು:** ಪೋಕ್ಸೋ ಪ್ರಕರಣದ ಸಂಬಂಧ ಮಾರ್ಚ್ 15 ರಂದು ಖುದ್ದು ವಿಚಾರಣೆಗೆ ಹಾಜರಾಗುವಂತೆ ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂಪ್ಪರಿಗೆ 1ನೇ ತ್ವರಿತಗತಿ ನ್ಯಾಯಾಲಯ ಜಾರಿ ಮಾಡಿದ್ದ ಸಮನ್ಸ್‌ಗೆ ಹೈಕೋರ್ಟ್ ತಡೆ ನೀಡಿದೆ. ಹಾಗೇ, ಮಾಜಿ ಸಿಎಂ ಯಡಿಯೂರಪ್ಪ ಖುದ್ದು ಹಾಜರಾತಿಗೂ ವಿನಾಯಿತಿ ನೀಡಿದೆ. ಈ ಮೂಲಕ ಬಿಎಸ್ ಯಡಿಯೂಪ್ಪ ಅವರಿಗೆ ರಿಲೀಫ್ ಸಿಕ್ಕಿದೆ.



**ವಾದ-ಪ್ರತಿವಾದ:** ಹಿರಿಯ ವಕೀಲ ಸಿ.ವಿ.ನಾಗೇಶ್: ವಿಚಾರಣೆ ವೇಳೆ ಹೈಕೋರ್ಟ್ ಮಧ್ಯಂತರ ರಿಲೀಫ್ ನೀಡಿತ್ತು. ಖುದ್ದು ಹಾಜರಾತಿಯಿಂದಲೂ ಹೈಕೋರ್ಟ್ ವಿನಾಯಿತಿ ನೀಡಿತ್ತು. 2024ರ ಫೆಬ್ರವರಿ 2ರಂದು ಅನುಚಿತವಾಗಿ ಸ್ಪರ್ಶಿಸಿದ ಆರೋಪವಿದೆ. ಒಂದು ತಿಂಗಳ ಬಳಿಕ ಪೊಲೀಸ್ ಆಯುಕ್ತರಿಗೆ ದೂರು ನೀಡಿದ್ದಾರೆ. ಸ್ಥಳದಲ್ಲಿದ್ದ ಸಾಕ್ಷಿಗಳು ಆ ರೀತಿಯ ಘಟನೆ ನಡೆದಿಲ್ಲವೆಂದಿದ್ದಾರೆ. ಬಾಲಕಿ, ಆಕೆಯ ತಾಯಿಯ ಹೇಳಿಕೆ ಮೇಲೆ ಆರೋಪಪಟ್ಟಿ ದಾಖಲಿಸಿದ್ದಾರೆ. ತಾಯಿಯ ಮೊಬೈಲ್‌ನಲ್ಲಿದ್ದ ಸಂಭಾಷಣೆ ಬಿಎಸ್ ಯಡಿಯೂರಪ್ಪ ಅಳಿಸಿಲ್ಲ. ಪೊಲೀಸರು ಹಾಕಿರುವ ಐಟಿ ಸೆಕ್ಷನ್ ದೂರುದಾರರಿಗೆ ಅನ್ವಯವಾಗುತ್ತದೆ ಎಂದು ವಾದಿಸಿದರು.

1 ತಿಂಗಳು 12 ದಿನ ತಡವಾಗಿ ಪೋಕ್ಸೋ ಕೇಸ್ ದಾಖಲಿಸಲಾಗಿದೆ. ಘಟನೆ ನಡೆದಿದ್ದರೆ ಯಾರೂ ಇಷ್ಟು ತಡವಾಗಿ ದೂರು ದಾಖಲಿಸುತ್ತಿರಲಿಲ್ಲ. ಸಮನ್ಸ್ ರದ್ದುಪಡಿಸಿ ಹೊಸದಾಗಿ ಪರಿಶೀಲನೆಗೆ ಹಿಂದೆ ಆದೇಶಿಸಲಾಗಿತ್ತು. ಈಗ ವಿಶೇಷ ಕೋರ್ಟ್ ಕಾಗ್ನಿಜೆನ್ಸ್ ಪಡೆದು ಸಮನ್ಸ್ ಜಾರಿಗೊಳಿಸಿದೆ ಎಂದು ಬಿಎಸ್ ಯಡಿಯೂರಪ್ಪ ಪರ ವಕೀಲರು ವಾದಿಸಿದರು.

ಬಿಎಸ್ ಯಡಿಯೂರಪ್ಪ ವಕೀಲರ ಮನವಿಗೆ ಅಡ್ವೋಕೇಟ್ ಜನರಲ್ ಆಕ್ಷೇಪಿಸಿದರು. ಹೈಕೋರ್ಟ್ ಸೂಚನೆಯಂತೆ ವಿಶೇಷ ಕೋರ್ಟ್ ಸಮನ್ಸ್ ಜಾರಿಗೊಳಿಸಿದೆ. ಹೀಗಾಗಿ ಸಮನ್ಸ್‌ಗೆ ತಡೆ ನೀಡದಂತೆ ಮನವಿ ಮಾಡಿದರು. ವಾದ-ಪ್ರತಿವಾದ ಆಲಿಸಿದ ನ್ಯಾ. ಪ್ರದೀಪ್ ಸಿಂಗ್ ಯೆರೂರ್ ಅವರ ಪೀಠ, ಬಿಎಸ್ ಯಡಿಯೂರಪ್ಪ ಅರ್ಜಿಯ ವಿಚಾರಣೆ ಅಗತ್ಯವಿದೆ ಎಂದು ಹೇಳಿ ನ್ಯಾ. ಪ್ರದೀಪ್ ಸಿಂಗ್ ಯೆರೂರ್ ಅವರ ಪೀಠ ಕಾಗ್ನಿಜೆನ್ಸ್, ಸಮನ್ಸ್ ಆದೇಶಕ್ಕೆ ತಡೆ ನೀಡಿದೆ. ಹಾಗೇ, ಖುದ್ದು ಹಾಜರಾತಿಯಿಂದಲೂ ಬಿಎಸ್ ಯಡಿಯೂರಪ್ಪ ಅವರಿಗೆ ವಿನಾಯಿತಿ ನೀಡಿದೆ.

**ಯಡಿಯೂರಪ್ಪ ವಿರುದ್ಧದ ಪೋಕ್ಸೋ ಪ್ರಕರಣದ ಹಿನ್ನೆಲೆ:** ಯಡಿಯೂರಪ್ಪ ಅವರು 17 ವರ್ಷದ ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದಾರೆ ಎಂಬ ಆರೋಪ 2024 ರ ಮಾರ್ಚ್‌ನಲ್ಲಿ ಕೇಳಿಬಂದಿತ್ತು. ಸಂತ್ರಸ್ತೆಯ ತಾಯಿ ಈ ಆರೋಪ ಮಾಡಿದ್ದರು. ಬಳಿಕ ಯಡಿಯೂರಪ್ಪ ವಿರುದ್ಧ ಲೈಂಗಿಕ ಅಪರಾಧಗಳಿಂದ ಮಕ್ಕಳ ರಕ್ಷಣೆ (ಪೋಕ್ಸೊ) ಕಾಯ್ದೆಯಡಿ ಬೆಂಗಳೂರಿನ ಸದಾಶಿವನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿತ್ತು.

# ನಾಪತ್ತೆಯಾಗಿದ್ದ ಚಿಕ್ಕಮಗಳೂರು ವಸತಿ ಶಾಲೆಯ ಇಬ್ಬರೂ ವಿದ್ಯಾರ್ಥಿಗಳು ಮಂಗಳೂರಿನಲ್ಲಿ ಪತ್ತೆ

**ಚಿಕ್ಕಮಗಳೂರು:** ಚಿಕ್ಕಮಗಳೂರು ಹೊರವಲಯದ ತೇಗೂರು ಗ್ರಾಮದ ಬಳಿ ಇರುವ ಡಾ. ಅಬ್ದುಲ್ ಕಲಾಂ ವಸತಿ ಶಾಲೆಯಿಂದ ನಾಪತ್ತೆಯಾಗಿದ್ದ ಇಬ್ಬರು ವಿದ್ಯಾರ್ಥಿಗಳು ಶುಕ್ರವಾರ (ಮಾ.14) ರಾತ್ರಿ ಮಂಗಳೂರಿನಲ್ಲಿ ಪತ್ತೆಯಾಗಿದ್ದಾರೆ. ಬಾಳೆಹೊನ್ನೂರು ಮೂಲದ ಯಶ್ವಿತ್ ಸಾಲಿಯಾನ್ ಮತ್ತು ಬೆಂಗಳೂರು ಮೂಲದ ತರುಣ್ ವಸತಿ ಶಾಲೆಯಲ್ಲಿ 9ನೇ ತರಗತಿ ವ್ಯಾಸಂಗ ಮಾಡುತ್ತಿದ್ದಾರೆ. ವಿದ್ಯಾರ್ಥಿಗಳು ಮಾರ್ಚ್ 3ರಂದು ವಸತಿ ಶಾಲೆಯಿಂದ ನಾಪತ್ತೆಯಾಗಿದ್ದರು. ಮಂಗಳೂರಿನ ಹೋಟೆಲ್ ವೊಂದರಲ್ಲಿ ಕೆಲಸಕ್ಕೆ ಸೇರಲು ಯತ್ನಿಸಿದ್ದರು ಎಂದು ತಿಳಿದುಬಂದಿದೆ.

**ಏನಿದು ಘಟನೆ:** ಯಶ್ವಿತ್, ತರುಣ್ ಉತ್ತಮ ಸ್ನೇಹಿತರಾಗಿದ್ದಾರೆ. ಓದಿನಲ್ಲಿ ಆಸಕ್ತಿ ಇಲ್ಲದೆ ಇದ್ದರೂ ವಸತಿ ಶಾಲೆಯಲ್ಲಿ ಒಳ್ಳೆಯ ಹೆಸರು ಪಡೆದಿದ್ದರು. 9 ನೇ ತರಗತಿ ಪರೀಕ್ಷೆ ಮುಗಿಸಿದ ಬಳಿಕ 10 ನೇ ತರಗತಿಯ ಸಿದ್ದತೆಗಾಗಿ ವಿಶೇಷ ತರಗತಿಗಳು ನಡೆಯುತ್ತಿದ್ದು, ಇದರಿಂದ ಪರೀಕ್ಷೆ ಮುಗಿದರೂ ರಜೆ ಮಾತ್ರ ಸಿಕ್ಕಿರಲಿಲ್ಲ. ವಿಶೇಷ ತರಗತಿ ಮುಗಿಸಿ ರೂಮ್ ಸೇರಿದ ಇಬ್ಬರು ಮೊದಲೇ ಮಾಡಿದ ಪ್ಲಾನ್ ನಂತೆ ವಸತಿ ಶಾಲೆಯ ಕಾಂಪೌಂಡ್ ಹಾರಿದ್ದಾರೆ. ಬಳಿಕ 5 ಕಿಮೀ ನಡೆದು ಇಬ್ಬರೂ ಚಿಕ್ಕಮಗಳೂರು ಬಸ್ ನಿಲ್ದಾಣಕ್ಕೆ ತೆರಳಿದ್ದಾರೆ. ಅಲ್ಲಿಂದ ಬಸ್ ಹತ್ತಿ ಮಂಗಳೂರಿಗೆ ತೆರಳಿದ್ದಾರೆ.



ಮಕ್ಕಳು ನಾಪತ್ತೆಯಾಗುತ್ತಿದ್ದಂತೆ ಚಿಕ್ಕಮಗಳೂರು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. ದೂರು ದಾಖಲಿಸಿಕೊಂಡ ಚಿಕ್ಕಮಗಳೂರು ಗ್ರಾಮಾಂತರ ಪೊಲೀಸರು, ವಿದ್ಯಾರ್ಥಿಗಳ ಪತ್ತೆಗಾಗಿ ವಿಶೇಷ ತಂಡ ರಚನೆ ಮಾಡಿದ್ದಾರೆ.

ವಿದ್ಯಾರ್ಥಿಗಳಿಗಾಗಿ ಹುಡುಕಾಟ ನಡೆಸಿದ ಪೊಲೀಸರು ಸಿಸಿಟಿವಿಗಳನ್ನು ಪರಿಶೀಲಿಸಿದಾಗ, ಚಿಕ್ಕಮಗಳೂರು ಕೆಎಸ್ ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ವಿದ್ಯಾರ್ಥಿಗಳು ಬಸ್ ಗಾಗಿ ಕಾಯುತ್ತಿರುವ ದೃಶ್ಯ ಕಂಡಿದೆ. ಬಳಿಕ, ಇಬ್ಬರೂ ಬೆಂಗಳೂರು ಬಸ್ ಹತ್ತಿರುವ ಮಾಹಿತಿ ಆಧಾರದ ಮೇಲೆ ಪೊಲೀಸರು ಬೆಂಗಳೂರಿನ ಹುಡುಕಾಟ ನಡೆಸಿದ್ದಾರೆ. ಅದೇರೀತಿ ಅನುಮಾನಗೊಂಡು ಮಂಗಳೂರಿನಲ್ಲೂ ಹುಡುಕಾಟ ನಡೆಸಿದಾಗ ವಿದ್ಯಾರ್ಥಿಗಳು ಪತ್ತೆಯಾಗಿದ್ದಾರೆ. ಪೊಲೀಸರು ಇಬ್ಬರೂ ವಿದ್ಯಾರ್ಥಿಗಳನ್ನು ಠಾಣೆಗೆ ಕರೆತಂದಿದ್ದಾರೆ.

# ಸುಸ್ಥಿರ, ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ನಾಗರಿಕರೆಲ್ಲರೂ ಕೈ ಜೋಡಿಸಿ

**ಚಿಕ್ಕಬಳ್ಳಾಪುರ:** ಮಾನವನ ಜೀವನವು ಬಹು ದೊಡ್ಡದು ಅದನ್ನು ದುಷ್ಚಟಗಳಿಗೆ ದಾಸರಾಗಿ ಯಾರೊಬ್ಬರೂ ಜೀವನವನ್ನು ಹಾಳುಮಾಡಿಕೊಳ್ಳಬಾರದು, ಸುಸ್ಥಿರ, ಆರೋಗ್ಯಕರ ಸಮಾಜವನ್ನು ನಿರ್ಮಿಸಲು ವ್ಯಸನ ಮುಕ್ತರಾಗುವ ಮೂಲಕ ಎಲ್ಲರೂ ಸರ್ಕಾರದ ಆಶಯಕ್ಕೆ ಕೈಜೋಡಿಸಬೇಕೆಂದು ಜಿಲ್ಲಾ ಆರೋಗ್ಯಧಿಕಾರಿ ಡಾ. ಎಸ್.ಎಸ್. ಮಹೇಶ್ ಕುಮಾರ್ ಅವರು ಮನವಿ ಮಾಡಿದರು.

ರಾಜ್ಯ ಮದ್ಯಪಾನ ಸಂಯಮ ಮಂಡಳಿ, ಬೆಂಗಳೂರು, ಚಿಕ್ಕಬಳ್ಳಾಪುರ ಜಿಲ್ಲಾಡಳಿತ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಎನ್.ಎಸ್. ಎಸ್. ಘಟಕ 1 2, ಚಿಕ್ಕಬಳ್ಳಾಪುರ ಹಾಗೂ ಗೌತಮ ಬುದ್ಧ ಸಾಮಾಜಿಕ ಮತ್ತು ಸಾಂಸ್ಕೃತಿಕ ಸಂಘ (ರಿ), ಇಡಗೂರು ಇವರ ಸಂಯುಕ್ತಾಶ್ರಯದಲ್ಲಿ ಶುಕ್ರವಾರ ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಅಂಬೇಡ್ಕರ್ ಸಂಭಾಂಗಣದಲ್ಲಿ ಆಯೋಜಿಸಿದ್ದ ''ಮದ್ಯ ಮತ್ತು ಇತರೆ ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತು ವಿಚಾರ ಸಂಕಿರಣ''ವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಾದಕ ಮತ್ತು ಮದ್ಯಪಾನ ಸೇರಿದಂತೆ ಇತರ ಕೆಟ್ಟ ವ್ಯಸನಗಳಿಗೆ ದಾಸರಾಗಲು ಯಾರು ಕಾರಣರಲ್ಲ ನಾವೇ ಕಾರಣರಾಗುವೆವು. ಯಾವುದೊ ಕೆಟ್ಟ ಪ್ರಲೋಭನೆಗಳಿಗೆ, ಸಹವಾಸ ದೋಷದಿಂದ ಅನಾರೋಗ್ಯಕರ ಕುತೂಹಲಗಳಿಗೆ ಮನಸ್ಸು ನೀಡಿ ವ್ಯಸನಗಳಿಗೆ ಬಲಿಯಾಗುತ್ತಿರುವುದು ಕಂಡುಬರುತ್ತಿದೆ.ಅದರ ಪರಿಣಾಮವು ವಯಸ್ಸಾದಂತೆ ದೈಹಿಕ ಮತ್ತು ಮಾನಸಿಕ ರೋಗಗಳಿಗೆ ತುತ್ತಾಗಬೇಕಾಗುತ್ತದೆ. ಕೆಲವೊಮ್ಮೆ ಮಾರಣಾಂತಿಕ ಕಾಯಿಲೆಗೂ ಒಳಗಾಗುವುದು ಕಾಣುತ್ತಿದ್ದೇವೆ ಇಂತಹ ಘಟನೆಯನ್ನ ಗಮನಿಸಿದ ಡಾ. ಮಹಾಂತಾ ಶಿವಯೋಗಿ ಅಜ್ಜನವರು ವ್ಯಸನ ಮುಕ್ತ ಸಮಾಜ ನಿರ್ಮಾಣಕ್ಕೆ ಬಹು ವರ್ಷಗಳ ಹಿಂದೆಯೇ ಕೈಗೊಂಡ ಮಹಾಂತ ಜೋಳಿಗೆ ಕಾರ್ಯಕ್ರಮ ಅತ್ಯಂತ ವಿಶಿಷ್ಟವಾದುದು.ಕುಡಿತದ ಚಟದಿಂದ ಹಿಂದುಳಿದ ವರ್ಗದ ಯುವಕನೊಬ್ಬ ನಿಧನ ಹೊಂದಿದ ಸುದ್ದಿ ಕೇಳಿ ಅವನ ಕೇರಿಗೆ ಸಾಂತ್ವನ ಹೇಳಲು ತೆರಳಿದ್ದ ಸ್ವಾಮಿಗಳಿಗೆ ಆತನ ಪತ್ನಿ ಮತ್ತು ಮಕ್ಕಳು ಉಪವಾಸದಿಂದ ದು:ಖಿಸುವುದನ್ನು ಕಂಡರು. ಇಂತಹ ಸಾವಿರಾರು ಕುಟುಂಬಗಳು ಕುಡಿತ ಮತ್ತು ಇತರ ದುಷ್ಚಟಗಳಿಂದ ಹಾಳಾಗಿರುವುದನ್ನು ಅರಿತ ಶಿವಯೋಗಿಗಳು ದುಷ್ಚಟಗಳಿಗೆ ಒಳಗಾಗಿರುವವನ್ನು ಮುಕ್ತಿಗೊಳಿಸುವ ಉದ್ದೇಶದಿಂದ ಮಹಾಂತ ಜೋಳಿಗೆ ಯೋಜನೆ ಆರಂಭಿಸಿ ಪಾನ್ ಬೀಡಾ,ಮದ್ಯಪಾನ,ಮಾದಕ ವಸ್ತು, ತಂಬಾಕು ವ್ಯಸನಗಳನ್ನು ತನ್ನ ಜೋಳಿಗೆಗೆ ನೀಡಿ ವ್ಯಸನ ಮುಕ್ತ ರಾಗಲು ಅಭಿಯಾನ ಆರಂಭಿಸಿ ಸ್ವಾಸ್ಥ್ಯ ಮತ್ತು ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಶ್ರಮಿಸಿದರು. ಕುಡಿತ ಚಟದಿಂದ ನಿಧನನಾದ ಯುವಕನ ಕೇರಿಗೆ ಹಾಗೂ ಅಲ್ಲಿನ ಗುಡಿಸಲು ಮನೆಗಳಿಗೆ ತೆರಳಿ ದುಷ್ಚಟಗಳ ದುಷ್ಪರಿಣಾಗಳ ಬಗ್ಗೆ ಅಲ್ಲಿನ ಜನತೆಗೆ ಮನ ಮುಟ್ಟುವಂತೆ ತಿಳುವಳಿಕೆ ನೀಡಿ ಮನಪರಿವರ್ತನೆ ಮಾಡಿದರು. ಆ ದಿಸೆಯಲ್ಲಿ ನಾವಿಂದು ಎಲ್ಲರೂ ಕಾರ್ಯೋನ್ಮುಖರಾಗಬೇಕಿದೆ ಎಂದರು.

ಕಾರ್ಯಕ್ರಮದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಪ್ರೊ. ಮುನಿರಾಜು ರವರು ಮಾತನಾಡಿ, ಇಂದು ಸಮಾಜದಲ್ಲಿ ಮದ್ಯ ಹಾಗೂ ಮಾದಕ ವ್ಯಸನಗಳು ಹೆಚ್ಚಾಗಿ ಕಂಡುಬರುತ್ತಿವೆ. ಒಮ್ಮೆ ವ್ಯಸನಗಳಿಗೆ ಒಳಗಾದವರು ಮತ್ತೆ ಅದರಿಂದ ಹೊರಬರುವುದು ಬಹಳ ಕಷ್ಟಸಾಧ್ಯವಾಗಿರುತ್ತದೆ. ಯುವ ಸಮುದಾಯ ಇದರ ಸೂಕ್ಷ್ಮತೆಯನ್ನು ಅರಿತು ಕೆಟ್ಟ ದುಷ್ಚಟಗಳಿಂದ ದೂರವಿರಬೇಕು, ಸಕಾರಾತ್ಮಕ ಗುರಿಯನ್ನು ಜೀವನದಲ್ಲಿ ನಿಗದಿಪಡಿಸಿಕೊಂಡು ಆ ನಿಟ್ಟಿನಲ್ಲಿ ಪರಿಶ್ರಮ ಪಟ್ಟು ತಮ್ಮ ಬದುಕನ್ನು ಕಟ್ಟಿಕೊಳ್ಳಬೇಕು. ಇತ್ತೀಚಿಗೆ ಮೊಬೈಲ್ ಬಳಕೆಯು ಸಹ ಯುವ ಸಮುದಾಯದ ಮೇಲೆ ಅತಿ ಹೆಚ್ಚಿನ ದುಷ್ಪರಿಣಾಮ ಬೀರುತ್ತಿದೆ. ಕೆಲವರು ಈ ಗೀಳಿನಿಂದ ಪ್ರಾಣವನ್ನೆ ಕಳೆದುಕೊಂಡಿದ್ದಾರೆ. ಮಾಹಿತಿ ಹಾಗೂ ಜ್ಞಾನ ಸಂಗ್ರಹಕ್ಕಾಗಿ ಅಥವಾ ಇತರ ಅತ್ಯಗತ್ಯ ಉದ್ದೇಶಕ್ಕಷ್ಟೆ ಮೊಬೈಲ್ ಅನ್ನು ಬಳಸಬೇಕು ಎಂದು ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮದ ಮನೋವೈದ್ಯರಾದ ಡಾ.ಜಿ. ಹೇಮಂತ್ ಕುಮಾರ್ ಅವರು ತಂಬಾಕು, ಮಾದಕ ಹಾಗೂ ಮದ್ಯ ವ್ಯಸನದ ದುಷ್ಚಟಗಳ ಅಡ್ಡ ಪರಿಣಾಮಗಳ ಬಗ್ಗೆ ಶಕ್ತಿ ಬಿಂದು ಪ್ರದರ್ಶನ (ಠಿಠಿಣ)ನೀಡಿ ವಿದ್ಯಾರ್ಥಿಗಳಲ್ಲಿ ಹಾಗೂ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿದರು. ಮದ್ಯ ಹಾಗೂ ಇತರ ಮಾದಕ ವ್ಯಸನದಿಂದ ಒಬ್ಬ ವ್ಯಕ್ತಿಯ ಮಾನಸಿಕ ಹಾಗೂ ದೈಹಿಕವಾಗಿ ಹಾನಿಯಾಗುವುದರ ಜೊತೆಗೆ ಆತನು ಸಾಮಾಜಿಕವಾಗಿ, ಆರ್ಥಿಕವಾಗಿ ಹಾಗೂ ಕೌಟುಂಬಿಕವಾಗಿ ಬಹಳ ಸಂಕಷ್ಟಕ್ಕೆ ತಲುಪುತ್ತಾನೆ. ಯಾವುದೋ ಖುಷಿ ಹಾಗೂ ಒತ್ತಡಕ್ಕೋ ಒಳಗಾಗಿ ಒಮ್ಮೆ ಮಾತ್ರ ದುಷ್ಚಟಗಳನ್ನು ಮಾಡಿ ಮತ್ತೆ ಬಿಡುತ್ತೇನೆ ಎಂಬ ಆತ್ಮವಿಶ್ವಾಸದಿಂದ ಸೇವನೆ ಮಾಡಿದವರಲ್ಲಿ ಶೇ. 70 ರಷ್ಟು ಜನರು ವ್ಯಸನಿಗಳಾಗಿ ಹಾಗೂ ಮಾನಸಿಕ ರೋಗಿಗಳಾಗಿದ್ದಾರೆ. ಈ ರೀತಿಯ ಯಾವುದೇ ವ್ಯಕ್ತಿಗಳು ವ್ಯಸನಗಳಿಗೆ ಒಳಗಾಗಿ ಅನಾರೋಗ್ಯ ಪೀಡಿತರಾಗಿದ್ದಲ್ಲಿ ಟೆಲಿಮಾನಸ್ ಸಹಾಯವಾಣಿ 14416 ನ್ನು ಸಂಪರ್ಕಿಸಿ ಚಿಕಿತ್ಸೆಯನ್ನು ಪಡೆದುಕೊಳ್ಳಬಹುದು ಅಥವಾ ಅಂತಹ ರೋಗಿಗಳು ತಮ್ಮ ಕುಟುಂಬಗಳಲ್ಲಿ ಅಥವಾ ಸುತ್ತ ಮುತ್ತಲ ಸಮಾಜದಲ್ಲಿ ಕಂಡು ಬಂದರೆ ಕರೆ ಮಾಡಿ ಸಾಮಾಜಿಕ ಜವಾಬ್ದಾರಿ ಮೆರೆಯಿರಿ ಎಂದು ಮನವಿ ಮಾಡಿದರು. ಜಿಲ್ಲಾ ಕುಷ್ಟ ರೋಗ ನಿಯಂತ್ರಣಾಧಿಕಾರಿ ಡಾ. ಶಿವಕುಮಾರ್, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮದ ಮನೋವೈದ್ಯರಾದ ಡಾ.ಜಿ. ಹೇಮಂತ್ ಕುಮಾರ್, ಎನ್.ಎಸ್.ಎಸ್ ಘಟಕದ ಸಂಯೋಜನಾಧಿಕಾರಿ ಹಾಗೂ ಸಹ ಪ್ರಾಧ್ಯಾಪಕರಾದ ಡಾ. ನಾಗರಾಜ್, ಡಾ. ನಾಗೇಂದ್ರ ಭಾಗವಹಿಸಿದ್ದರು.



ವಿಜಯಪುರದ ವಿಜಯಪುರ ಪಟ್ಟಣದಲ್ಲಿ ಹಿರಿಯರು ಕಿರಿಯರನ್ನದೆ ಎಲ್ಲರೂ ಸೇರಿಕೊಂಡು ಬಣ್ಣದೋಕುಳಿಯಾಡುತ್ತಿರುವುದು.

## ವಿವಿಧೆಡೆ ವಿದ್ಯುತ್ ವ್ಯತ್ಯಯ

**ಚಾಮರಾಜನಗರ:** ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದಿಂದ ಚಾಮರಾಜನಗರ, ಹರದನಹಳ್ಳಿ ಹಾಗೂ ಸಂತೇಮರಹಳ್ಳಿ ಉಪವಿಭಾಗ ವ್ಯಾಪ್ತಿಯಲ್ಲಿ ನಾಲ್ಕನೇ ತ್ರೈಮಾಸಿಕ ನಿರ್ವಹಣೆ ಕಾಮಗಾರಿಯನ್ನು ಮಾರ್ಚ್ 15ರಂದು ಹಮ್ಮಿಕೊಂಡಿರುವುದರಿಂದ ಅಂದು ಬೆಳಿಗ್ಗೆ 9 ರಿಂದ ಸಂಜೆ 6 ಗಂಟೆಯವರೆಗೆ ವಿವಿಧೆಡೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ. ಗಾಳಿಪುರ, ಮೆಡಿಕಲ್ ಕಾಲೇಜು, ಮೂಡಲಪುರ, ಮೂಡಲಪುರ ಸಣ್ಣ ಕೈಗಾರಿಕಾ ಇಲಾಖೆ, ಸಿದ್ದಯ್ಯನಪುರ, ಹೊಂಗಲವಾಡಿ, ಕೋಳಿಪಾಳ್ಯ, ಬಂಧಿಗೌಡನಹಳ್ಳಿ, ಅಟ್ಟುಗೂಳಿಪುರ, ಕೊತ್ತಲವಾಡಿ, ಅರಕಲವಾಡಿ, ಯರಗನಹಳ್ಳಿ, ಸುವರ್ಣನಗರ, ಫ್ಯಾಕ್ಟರಿ, ಬಿಸಿಲವಾಡಿ, ಪುಣಜನೂರು, ಡೊಳ್ಳಿಪುರ, ಚನ್ನಪನಪುರ, ಅಮಚವಾಡಿ, ಮಾದಲವಾಡಿ, ಕಿಲಿಗೆರೆ, ಯನಗುಂಬ, ಯರಗನಹಳ್ಳಿ, ಅಚ್ಚಟ್ಟಿಪುರ, ಯಾನಗಳ್ಳಿ, ಹೊನ್ನೂರು, ಕುದೇರು, ಉಮ್ಮತ್ತೂರು, ಸಂತೇಮರಹಳ್ಳಿ, ಕೆಂಪನಪುರ, ನವಿಲೂರು, ದುಗ್ಗಟ್ಟಿ, ಆಲ್ದೂರು, ಅಂಬಳೆ, ಮಂಗಲ ವಾಟರ್ ಸಪ್ಲೈ, ಚುಂಗಡಿಪುರ, ಅವಿತ್ ಗ್ರೀನ್ ಸೋಲಾರ್, ಮೂಡಲ ಅಗ್ರಹಾರ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಸಾರ್ವಜನಿಕರು ನಿಗಮದ ಜೊತೆ ಸಹಕರಿಸಬೇಕು. ವಿದ್ಯುತ್ ಸಂಬಂಧಿತ ದೂರು ಮತ್ತು ಸಹಾಯಕ್ಕಾಗಿ ಗ್ರಾಹಕರು ಉಚಿತ ದೂ.ಸಂ 1912 ಸಂಪರ್ಕಿಸುವಂತೆ ನಿಗಮದ ಕಾರ್ಯನಿರ್ವಾಹಕ ಎಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 17, 18ರಂದು ದೈಹಿಕ ಶಿಕ್ಷಣ ಶಿಕ್ಷಕರಿಗೆ ಜಿಲ್ಲಾಮಟ್ಟದ ಕ್ರೀಡಾಕೂಟ

**ಚಾಮರಾಜನಗರ:** ಚಾಮರಾಜನಗರ ತಾಲೂಕಿನ ದೈಹಿಕ ಶಿಕ್ಷಣ ಶಿಕ್ಷಕರಿಗೆ 2024-25ನೇ ಸಾಲಿನ ಜಿಲ್ಲಾಮಟ್ಟದ ಕ್ರೀಡಾಕೂಟವನ್ನು ಮಾರ್ಚ್ 17 ಮತ್ತು 18 ರಂದು ನಗರದ ಡಾ. ಬಿ.ಆರ್. ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆಯ ಪ್ರಕಟಣೆ ತಿಳಿಸಿದೆ.

## ಕದಳಿ ಬಳಗ ವತಿಯಿಂದ ಮಹಿಳಾ ದಿನಾಚರಣೆ, ಸಾಧಕಿಯರಿಗೆ ಸನ್ಮಾನ

**ತಿಪಟೂರು:** ನಗರದ ಸಂತೆಪೇಟೆ ಬಸವೇಶ್ವರ ದೇವಸ್ಥಾನದ ಕದಳಿ ಬಳಗ ಮಹಿಳಾ ಸಂಘದ ವತಿಯಿಂದ ಮಹಿಳಾ ದಿನಾಚರಣೆ ಅಂಗವಾಗಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕಿಯರನ್ನು ಸನ್ಮಾನಿಸಲಾಯಿತು. ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯಿಂದ ಸಾಲವನ್ನು ಪಡೆದು ಮೊದಲು ಗಾಡಿಯ ಮೂಲಕ ತರಕಾರಿ ಮಾರಾಟ ಮಾಡುತ್ತಾ, ನಂತರ ದ್ವಿಚಕ್ರ ವಾಹನ ಮೂಲಕ, ನಾಲ್ಕು ಚಕ್ರದ ವಾಹನ ಖರೀದಿ ಮಾಡಿ ಹಳ್ಳಿ ಹಳ್ಳಿಗೆ ತೆರಳಿ ಸ್ವಾವಲಂಬಿ ವ್ಯಾಪಾರ ಮಾಡುತ್ತಿರುವ ತರಕಾರಿ ಗಂಗಮ್ಮ ಹಾಗೂ ಗಾಯನದಲ್ಲಿ ಕರೋಗಿಗಾನಶ್ರೀ ರಾಜ್ಯೋತ್ಸವ ಪ್ರಶಸ್ತಿ ವಿಜೇತೆ ಪುಷ್ಪಮೂರ್ತಿ ಮತ್ತು ರಾಜೀವ್ ಗಾಂಧೀ ವಿಶ್ವವಿದ್ಯಾಲಯದಲ್ಲಿ ವೈದ್ಯಕೀಯ ಶಿಕ್ಷಣದ ಎಂ.ಡಿ.ಎಸ್ ಸ್ನಾತಕೋತ್ತರ ಪದವಿ ಪರೀಕ್ಷೆಯಲ್ಲಿ ಚಿನ್ನದ ಪದಕ ಪಡೆದ ಡಾ.ಪ್ರಗತಿಸಂಗಮೇಶ್ ಸಾಧನೆ ಮಾಡಿದವರಿಗೆ ಬಳಗದ ವತಿಯಿಂದ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಕದಳಿ ಬಳಗದ ಪ್ರಭಾವಿಶ್ವನಾಥ್, ಅನು, ಮಂಜುಳತಿಮ್ಮೇಗೌಡ, ರೇಖಾಅನೂಪ್, ಆಶಾ ಮಂಜುನಾಥ್, ಕ್ಯಾತ್ಯಾಯಿನಿ, ಹೇಮಾಕಿಟ್ಟಿ, ಉಮಾನಾರಾಯಣಗೌಡ, ಅನುಸಂಗಮೇಶ್, ರೇವತಿಉಮೇಶ್, ಸುಮನಾ, ಜಯಮ್ಮ, ಸ್ವಪ್ನರೇಣು, ಮಮತ ಪಟೇಲ್, ಮಂಜಮ್ಮ, ರೇಣುಕ, ಮಮತರಾಜು, ಆರತಿಮಲ್ಲಿಕಾರ್ಜುನ, ಶರಾವತಿಪ್ರಕಾಶ್, ನಾಗರತ್ನಬೆಣ್ಣೆನಹಳ್ಳಿ, ಪ್ರೇಮಾವಿಶ್ವನಾಥ್, ಜಗದಾಂಬ, ಸುನೀತಪ್ರವೀಣ, ಸ್ವರ್ಣಷಡಾಕ್ಷರಿ, ಮಮತನಿರಂಜನ, ಸುಕನ್ಯಬಿಂದೇಗೌಡ, ಚಂದ್ರಮತಿವಿಜಯಣ್ಣ, ಸಾವಿತ್ರಿಹೊಸಮನಿ, ನಂದಿನಿಶಶಿ, ಸಿದ್ದಗಂಗ, ಲೋಹಿತಾಮೋಜಂದಾರ ಮತ್ತಿತ್ತರು ಹಾಜರಿದ್ದರು.



ಶಾಸಕ ಪ್ರದೀಪ್ ಈಶ್ವರ್ ಹೇಳಿಕೆ

# 2ಎ ಮೀಸಲಾತಿ ದೊರಕಿಸಿಕೊಡಲು ಅಗತ್ಯ ಕ್ರಮ

**ಚಿಕ್ಕಬಳ್ಳಾಪುರ:** ಉದ್ಯೋಗದಲ್ಲಿಯೂ ಸಮುದಾಯಕ್ಕೆ 2ಎ ಮೀಸಲಾತಿ ದೊರಕಿಸಿ ಕೊಡುವ ನಿಟ್ಟಿನಲ್ಲಿ ಸರ್ಕಾರದ ಮಟ್ಟದಲ್ಲಿ ಕ್ರಮವಹಿಸುವಂತಾಗಲು ಎಲ್ಲ ರೀತಿಯ ಪ್ರಯತ್ನಗಳನ್ನು ಮಾಡಲಾಗುವುದು ಎಂದು ಶಾಸಕ ಪ್ರದೀಪ್ ಈಶ್ವರ್ ಅವರು ತಿಳಿಸಿದರು.ಅವರು ಶುಕ್ರವಾರ ನಗರದ ಶ್ರೀ ಯೋಗಿ ನಾರೇಯಣ ದೇವಾಲಯದ ಆವರಣದಲ್ಲಿ ಜಿಲ್ಲಾಡಳಿತ ಹಾಗೂ ಸಮುದಾಯದ ವತಿಯಿಂದ ಆಯೋಜಿಸಿದ್ದ ಶ್ರೀ ಯೋಗಿ ನಾರೇಯಣ ಯತೀಂದ್ರ ಜಯಂತಿಯ (ಕೈವಾರ ತಾತಯ್ಯನವರ) ಕಾರ್ಯಕ್ರಮದಲ್ಲಿ ಮಾತನಾಡಿದರು.ಬಲಿಜ ಸಮುದಾಯಕ್ಕೆ ಜನಸಂಖ್ಯೆ ಆಧಾರದಲ್ಲಿ 2ಎ ಮೀಸಲಾತಿ ನೀಡುವುದು ನ್ಯಾಯವಾಗಿದೆ.ಈ ನಿಟ್ಟಿನಲ್ಲಿ ಪ್ರಾಮಾಣಿಕವಾಗಿ ಪ್ರಯತ್ನಪಟ್ಟು ಮೀಸಲಾತಿಯನ್ನು ದೊರಕಿಸಿಕೊಡಲು ಎಲ್ಲಾ ರೀತಿಯ ಅಗತ್ಯ ಕ್ರಮಗಳನ್ನು ಕೈಗೊಳ್ಳುತ್ತೇನೆ ಈ ಸಂಬಂಧ ಈಗಾಗಲೇ ಮಾನ್ಯ ಮುಖ್ಯಮಂತ್ರಿಗಳ ಗಮನಕ್ಕೂ ಸಹ ತಂದಿದ್ದೇನೆ. ಮೀಸಲಾತಿ ಸಿಗುವ ಎಲ್ಲಾ ಸಾಧ್ಯತೆಗಳಿವೆ ಎಂದು ಭರವಸೆ ನೀಡಿದರು.ಸಮುದಾಯದ ಅಭಿವೃದ್ಧಿಗಾಗಿ ಜಿಲ್ಲಾ ಕೇಂದ್ರದಲ್ಲಿ ಸಮುದಾಯ ಭವನ ನಿರ್ಮಿಸಲು ಸರ್ಕಾರ ಜಾಗನೀಡಿದೆ,ಸಮುದಾಯದವರ ಸಹಕಾರ ಮತ್ತು



ಸರ್ಕಾರದ ಅನುದಾನ ಪಡೆದು ಸಮುದಾಯ ಭವನವನ್ನು ನಿರ್ಮಿಸಲಾಗುವುದು. ರಾಜಕೀಯವಾಗಿ ಮತ್ತು ಶೈಕ್ಷಣಿಕವಾಗಿ ಸಮುದಾಯದವರು ಮುಂದೆ ಬರಲು ಪ್ರಯತ್ನಿಸಬೇಕು. ಸಮಾಜಕ್ಕೆಸಮುದಾಯದಿಂದ ಒಳ್ಳೆಯ ಕೊಡುಗೆ ನೀಡುವಂತಹ ಆಸ್ತಿಯಾಗಿ ಎಲ್ಲರೂ ಬೆಳೆಯಬೇಕು ಎಂದು ಸಲಹೆ ನೀಡಿದರು. ಕಾರ್ಯಕ್ರಮದಲ್ಲಿ ಹಿರಿಯ ವಕೀಲರಾದ ಎಸ್ಎನ್ ಅಶ್ವಥ್ ನಾರಾಯಣ ಅವರು ಕೈವಾರ ತಾತಯ್ಯನವರ ಜೀವನ ಚರಿತ್ರೆ ಹಾಗೂ ಅವರ ವಿಚಾರಧಾರೆಗಳ ಕುರಿತು ತಿಳಿಸಿಕೊಟ್ಟರು.

ಕಾರ್ಯಕ್ರಮಕ್ಕೂ ಮುನ್ನ ನಗರದಲ್ಲಿ ಕೈವಾರ ತಾತಯ್ಯನವರ ಹೂವಿನ ಪಲ್ಲಕ್ಕಿಗಳೊಂದಿಗೆ ಅದ್ದೂರಿ ಮೆರವಣಿಗೆಯನ್ನು ನಡೆಸಲಾಯಿತು.ಮೆರವಣಿಗೆಯು ವಾಪಸಂದ್ರದ ಶ್ರೀ ರಂಗನಾಥ ಸ್ವಾಮಿ ದೇವಾಲಯದಿಂದ ಚಾಲನೆಗೊಂಡು ಬಿಬಿ ರಸ್ತೆಯ ಮೂಲಕ ಶ್ರೀ ಯೋಗಿ ನಾರೇಯಣ ಯತೀಂದ್ರರ ದೇವಾಲಯದವರೆಗೆ ಮೆರವಣಿಗೆ ಸಾಗಿತು. ಜಾನಪದ ಕಲಾತಂಡಗಳು ಮೆರವಣಿಗೆಗೆ ವಿಶೇಷ ಮೆರುಗು ನೀಡಿದವು.ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರ, ಅಪರ ಜಿಲ್ಲಾಧಿಕಾರಿ ಡಾ. ಎನ್ ಭಾಸ್ಕರ್,ನಗರಸಭೆ ಉಪಾಧ್ಯಕ್ಷ ಎನ್ ನಾಗರಾಜ್,ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ನಾರಾಯಣಸ್ವಾಮಿ,ನಗರ ಸಭೆ ಸದಸ್ಯ ನರಸಿಂಹಮೂರ್ತಿ,ಅಂಬರೀಶ್,ನಾಮ ನಿರ್ದೇಶನ ಸದಸ್ಯರಾದ ಡೈರಿ ಗೋಪಿ,ಅಣ್ಣೆಮ್ಮ,

ಸಮುದಾಯದ ಮುಖಂಡರಾದ ಮಂಜುನಾಥ್,ಎಸ್ ವಿ ಲೋಕೇಶ್,ಗಡ್ಡಂ ನಾಗರಾಜು,ಡ್ಯಾನ್ಸ್ ಶ್ರೀನಿವಾಸ್ ,ನಾಗಭೂಷಣ್,ಮಂಡಿಕಲ್ ಕುಪೇಂದ್ರ,ಜಿ. ವಿ ಮಂಜುನಾಥ್ ,ಎಸ್ ಎನ್ ಅಶ್ವಥ್ ನಾರಾಯಣ್,ಮೊಬೈಲ್ ಬಾಬು,ಅನು ಆನಂದ್,ಉಪಸ್ಥಿತರಿದ್ದರು.

# ಸಡಗರ-ಸಂಭ್ರಮಗಳ ನಡುವೆ ಬ್ರಹ್ಮರಥೋತ್ಸವ

**ವಿಜಯಪುರ:** ಇಲ್ಲಿನ ಕೋಟೆ ಬೀದಿಯಲ್ಲಿನೆಲೆಸಿ, ಅರ್ಜುನನಿಂದ ಪ್ರತಿಷ್ಠಾಪನೆಗೊಂಡ ಶ್ರೀ ಚನ್ನಕೇಶವ ಸ್ವಾಮಿ ದೇವಾಲಯದಲ್ಲಿ ಜಾತ್ರಾ ಮಹೋತ್ಸವ ಕಾರ್ಯಕ್ರಮಗಳು ಅದ್ದೂರಿಯಾಗಿ ನಡೆದವು.

ಹೋಳಿ ಹಬ್ಬದ ದಿನದಂದು ರಥೋತ್ಸವ ನಡೆಯುವುದು ವಿಶೇಷವಾಗಿದ್ದು, ಬೆಳಗ್ಗೆಯಿಂದಲೇ ದೇವಾಲಯದಲ್ಲಿ ಸುಪ್ರಭಾತ ಸೇವೆ, ವಿಶೇಷ ಹೂವಿನ ಅಲಂಕಾರ, ಅಭಿಷೇಕ, ಮಹಾಮಂಗಳಾರತಿ ಏರ್ಪಡಿಸಲಾಗಿತ್ತು.

ಸಾವಿರಾರು ಭಕ್ತ ಜನರ ಜಯ ಘೋಷದ ಮಧ್ಯೆ ಗಾಂಧಿಚೌಕದಿಂದ ಹೊರಟ ದೇವರ ಬ್ರಹ್ಮರಥವು ಶ್ರೀ ನಗರೇಶ್ವರಸ್ವಾಮಿ ದೇವಾಲಯದ ಮುಂಭಾಗದಿಂದ ಹಾದು ಹೋಗಿ, ಗಂಗಾತಾಯಿ ದೇವಾಲಯ ವೃತ್ತವನ್ನು ಸೇರಿತು.

ರಥೋತ್ಸವದ ಅಂಗವಾಗಿ ಮಹಂತಿನ ಮಠ, ಹಾಗೂ ಶ್ರೀ ಚನ್ನಕೇಶವ ಸ್ವಾಮಿ ದೇವಾಲಯದ ಬಳಿ ಸೇರಿದಂತೆ ಅನೇಕ ಕಡೆಗಳಲ್ಲಿ ಪಾನಕ, ಪಣ್ಯಾರ, ಕೋಸಂಬರಿ ವಿತರಣೆ, ಮಂಟಪ ಪಡಿಸೇವೆ ಜರುಗಿದವು.

ಸಂಜೆಯವರೆಗೆ ಗಂಗಾತಾಯಿ ಸರ್ಕಲ್‌ನಲ್ಲಿ ಭಕ್ತರು ನೆರೆದು, ಪೂಜೆ ಸಲ್ಲಿಸಿದ ನಂತರ ಬಜಾರ್ ರಸ್ತೆ ಮೂಲಕ ಶ್ರೀ ರುದ್ರದೇವರ ದೇವಾಲಯದ ಮುಂಭಾಗದಿಂದ ಗಾಂಧಿಚೌಕದವರೆಗೆ ರಥವನ್ನು ಎಳೆದು ಧೂಳೋತ್ಸವವನ್ನು ಹಮ್ಮಿಕೊಳ್ಳಲಾಗಿತ್ತು.



# ದೇವಾಲಯದ ವಾರ್ಷಿಕೋತ್ಸವ

**ಮಡಿವಾಳ :** ಮಿಂಡಹಳ್ಳಿ ಗ್ರಾಮದಲ್ಲಿ ನಿರ್ಮಾಣವಾಗಿರುವ ಮುನೇಶ್ವರಸ್ವಾಮಿ ದೇವಾಲಯದ 2ನೇ ವಾರ್ಷಿಕೋತ್ಸವ ಪೂಜಾ ಕಾರ್ಯಕ್ರಮಗಳು ನಡೆಯಿತು.

ವಾರ್ಷಿಕ ಮಹೋತ್ಸವ ಅಂಗವಾಗಿ ಗಣಪತಿ ಪೂಜೆ, ನಾಂದಿ, ಪಂಚಗವ್ಯ, ರಕ್ಷಾಬಂಧನ, ಅಂಕುರಾರ್ಪಣೆ, ವೃತ್ತಿಕರಣ, ಕಳಶ ಸ್ಥಾಪನೆ, ಮಹಾರುದ್ರ ಹೋಮ, ನವಗ್ರಹ ಪೂಜೆ, ಪೂರ್ಣಾಹಿತಿ, ವಿಶೇಷ ಹೂವಿನ ಅಲಂಕಾರ ಮಹಾಮಂಗಳಾರತಿ ತಿರ್ಥಪ್ರಸಾದ ವಿನಿಯೋಗ ನಡೆಯಿತು.

ಕಾರ್ಯಕ್ರಮದಲಿ ಮಾಜಿ ಸಚಿವ ಎಸ್.ಎನ್.ಕೃಷ್ಣಯ್ಯಶೆಟ್ಟಿ ಭಾಗವಹಿಸಿ ವಿಶೇಷ ಪೂಜೆಯನ್ನು ಸಲ್ಲಿಸಿ ದೀಪೋತ್ಸವದಲ್ಲಿ ಭಾಗವಹಿಸಿದ ಮಹಿಳೆಯರಿಗೆ ಭಾಗಿನವನ್ನು ವಿತರಿಸಿದರು. ಮಾತನಾಡಿ ಗ್ರಾಮದಲ್ಲಿ ದೇವಾಲಯಗಳ ನಿರ್ಮಾಣಗಳಿಂದ ಶ್ರದ್ದೆ ಭಕ್ತಿ, ನೆಮ್ಮದಿ, ಮಾನಸಿಕ ನೆಮ್ಮದಿ ನೀಡುತ್ತದೆ ಎಂದರು. ಕಾರ್ಯಕ್ರಮದಲ್ಲಿ ಪುರಸಭಾ ಸದಸ್ಯ ಭಾನುತೇಜ, ಮಿಂಡಹಳ್ಳಿ ಮುನಿರಾಜು, ರಾಘವೇಂದ್ರ, ಸತ್ಯನಾರಾಯಣ, ನಿಖಿಲ್, ತಿಮ್ಮರಾಯಪ್ಪ, ಗಜೇಂದ್ರ, ಗ್ರಾಮಸ್ಥರು ಭಾಗವಹಿಸಿದ್ದರು.



# ಮೈದಾ, ಸಕ್ಕರೆ ಮುಕ್ತ ಬೇಕರಿ ಪದಾರ್ಥ ತಯಾರಿಸಲು ಸಂಶೋಧನೆ

**ಬೆಂಗಳೂರು:** ನಮ್ಮ ದೇಶದಲ್ಲಿ ಅತಿಯಾದ ಮೈದಾ ಹಿಟ್ಟು ಹಾಗೂ ಸಕ್ಕರೆ ಬಳಕೆಯಿಂದ ಶೇಕಡಾ 13.85 ಜನರಲ್ಲಿ ಸ್ಥೂಲಕಾಯ, ಶೇಕಡಾ 8.3 ರಷ್ಟು ಜನರಿಗೆ ಸಕ್ಕರೆ ಕಾಯಿಲೆ ಹಾಗೂ ಶೇಕಡಾ 7.4 ರಷ್ಟು ಜನರಿಗೆ ಹೃದಯ ಸಂಬಂಧಿ ಕಾಯಿಲೆಗಳು ಕಂಡು ಬರುತ್ತಿವೆ. ಈ ನಿಟ್ಟಿನಲ್ಲಿ ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು ಮೈದಾ ಹಾಗೂ ಸಕ್ಕರೆ ಮುಕ್ತ ಬೇಕರಿ ಪದಾರ್ಥಗಳನ್ನು ತಯಾರಿಸಲು ಸಂಶೋಧನೆಗಳನ್ನು ಕೈಗೊಳ್ಳುತ್ತಿದೆ, ಬೇಕರಿ ಉತ್ಪನ್ನಗಳಲ್ಲಿ ಸಕ್ಕರೆಯ ಬದಲಿಗೆ ಜೇನುತುಪ್ಪವನ್ನು ಬಳಸುವಂತಾಗಬೇಕು ಎಂದು ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಕುಲಪತಿ ಡಾ.ಎಸ್.ವಿ.ಸುರೇಶ ತಿಳಿಸಿದರು.

ಇಂದು ಕೃಷಿ ವಿಶ್ವವಿದ್ಯಾನಿಲಯ ಜಿ.ಕೆ.ವಿ.ಕೆ. ಆವರಣದಲ್ಲಿ ಆಯೋಜಿಸಿದ್ದ ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು, ಬೇಕಿಂಗ್ ತಂತ್ರಜ್ಞಾನ ಮತ್ತು ಮೌಲ್ಯವರ್ಧನಾ ಸಂಸ್ಥೆಯಿಂದ 14 ವಾರದ ಬೇಕರಿ ತಂತ್ರಜ್ಞಾನ ಕುರಿತು ಸರ್ಟಿಫಿಕೇಟ್ ಕೋರ್ಸ್‌ನ ಪದವಿ ಪಡೆದ ಶಿಬಿರಾರ್ಥಿಗಳಲ್ಲಿ ಆತ್ಮವಿಶ್ವಾಸ ಹೆಚ್ಚಿಸಲು, ಬೇಕರಿ ಆಧಾರಿತ ನವೀನ ಉತ್ಪನ್ನಗಳ ತಯಾರಿಕೆ, ಕೇಕ್ ತಯಾರಿಕೆ ಹಾಗೂ ಪ್ರದರ್ಶನ ಮತ್ತು ಮಾರಾಟ ಮೇಳವನ್ನು ಉದ್ಘಾಟಿಸಿ ಮಾತನಾಡಿದರು.

ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು ಸಿರಿಧಾನ್ಯಗಳಿಂದ ತಯಾರಿಸಬಹುದಾದ ಬೇಕರಿ ಪದಾರ್ಥಗಳಿಗೆ ಹೆಚ್ಚಿನ ಆದ್ಯತೆಯನ್ನು ನೀಡುತ್ತಿದ್ದು, ಈ ನಿಟ್ಟಿನಲ್ಲಿ ಗ್ರಾಮೀಣ ಪ್ರದೇಶದ ಅದರಲ್ಲೂ ಮಹಿಳೆ ಹಾಗೂ ಮಕ್ಕಳಲ್ಲಿ ಪೌಷ್ಠಿಕಾಂಶದ ಕೊರತೆಯನ್ನು ನೀಗಿಸಲು ಪೌಷ್ಠಿಕ ಲಡ್ಡನ್ನು ತಯಾರು ಮಾಡಲಾಗಿದೆ. ಬೇಕರಿ ಪದಾರ್ಥಗಳು ನಮ್ಮ ದೈನಂದಿನ ಬದುಕಿನಲ್ಲಿ ಉಪಯೋಗಿಸುವ ಪದಾರ್ಥಗಳಲ್ಲಿ ಅವಿಭಾಜ್ಯ ಅಂಗವಾಗಿದೆ. ಇದಕ್ಕೆ ಮುಖ್ಯ ಉದಾಹರಣೆಯೆಂದರೆ ಮೆಡಿಕಲ್ ಸ್ಟೋರ್ ಹಾಗೂ ಬೇಕರಿಯಲ್ಲಿ ಮಾತ್ರ ನಾವು ಯಾವುದೇ ಚೌಕಾಸಿ ಮಾಡದೆ ಉತ್ಪನ್ನಗಳನ್ನು ಕೊಂಡುಕೊಳ್ಳುತ್ತಿದ್ದೇವೆ ಎಂದರು.

ಇತ್ತೀಚಿನ ದಿನಗಳಲ್ಲಿ ಮಹಿಳೆಯರು ಆರ್ಥಿಕವಾಗಿ ಸ್ವಾವಲಂಬಿಗಳಾಗಲು ಬೇಕರಿ ಉದ್ಯಮವು ಉತ್ತಮ ವೇದಿಕೆಯಾಗಿದ್ದು ಕ್ಲೌಡ್ ಕಿಚನ್ ರೀತಿಯ ಹಾಗೆ ಕ್ಲೌಡ್ ಬೇಕರಿಯನ್ನು ನಿರ್ಮಿಸಿ ನವೋದ್ಯಮಕ್ಕೆ ನಾಂದಿಯಾಡಬಹುದಾಗಿದೆ. ಸುಸ್ಥಿರ ಉದ್ದಿಮೆಗಾಗಿ ಮೊದಲು ಸಣ್ಣ ಪ್ರಮಾಣದಲ್ಲಿ ಪ್ರಾರಂಭಿಸಿ ಅನುಭವವನ್ನು ಪಡೆದುಕೊಂಡ ನಂತರ ದೊಡ್ಡ ಪ್ರಮಾಣದಲ್ಲಿ ಆರಂಭಿಸುವುದು ಒಳಿತು ಎಂದು ತಿಳಿಸಿದರು.

ಈ ಮೇಳದಲ್ಲಿ ಬೇಕಿಂಗ್ ತಂತ್ರಜ್ಞಾನ ಮತ್ತು ಮೌಲ್ಯವರ್ಧನಾ ಸಂಸ್ಥೆಯಿಂದ 14 ವಾರದ ಬೇಕರಿ ತಂತ್ರಜ್ಞಾನ ಕುರಿತು ಸರ್ಟಿಫಿಕೇಟ್ ಪಡೆದ 32 ವಿದ್ಯಾರ್ಥಿಗಳಿಂದ ಸುಮಾರು 80ಕ್ಕೂ ಹೆಚ್ಚು ವಿವಿಧ ನವೀನ ಉತ್ಪನ್ನಗಳನ್ನು ಮತ್ತು 30ಕ್ಕೂ ಹೆಚ್ಚು ಅಲಂಕರಿಸಿದ ಕೇಕ್‌ಗಳು ಮಾರಾಟ ಮಾಡಲಾಗಿದೆ. ಆರೋಗ್ಯದ ಮಹತ್ವವನ್ನು ಮನಗಂಡು ಮೈದಾ ರಹಿತ ವಿವಿಧ ನವೀನ ಉತ್ಪನ್ನಗಳಾದ ಚಾಕೊಲೇಟ್ ಬೆಣ್ಣೆ ಬಿಸ್ಕತ್ತು, ತೆಂಗಿನಕಾಯಿ ಸ್ಟಫ್ ಬಿಸ್ಕತ್ತು, ಚೋಕೋ ಚಿಪ್ ಬಿಸ್ಕತ್ತು, ಖರ್ಜೂರ ಕೇಕ್, ದಿಲ್ ಕುಶ್, ರವಾಕೇಕ್, ಖರ್ಜೂರ ಮತ್ತು ಕಡಲೆಕಾಯಿ ಕುಕೀಸ್, ಮ್ಯಾಟರ್ ಸ್ಟಫ್ ಮಿನಿ ಸ್ನ್ಯಾಕ್, ರಸ್ಮಲೈ ಕಪ್‌ಕೇಕ್, ಮಿಶ್ರ ವೆಜ್ ಸ್ಟಫ್‌ರೋಲ್, ಡ್ರೈ ಫ್ರೂಟ್ ಸ್ಟಫ್‌ರೋಲ್, ಮಾರ್ಬಲ್ ಬಿಸ್ಕತ್ತುಗಳು, ರೆಡ್ ವೆಲ್ವೆಟ್ ಸ್ವಿಸ್ ರೋಲ್, ತಾಜಾ ತೆಂಗಿನಕಾಯಿ ಡಿಲ್ ಪಸಾಂಡ್, ಪನೀರ್ ಬನ್, ಸ್ಟ್ರಾಬೆರಿ ಕುಕೀಸ್, ಸೆನಿಮನ್ ರೋಲ್, ಮ್ಯಾಕ್ರಾನ್ಸ್, ಪನೀರ್ ಪಫ್, ಕ್ರಂಚಿ ಬಿಸ್ಕತ್ತುಗಳು, ರಾಗಿ ಬೀಟ್ರೂಟ್ ಕೇಕ್, ರಾಗಿ ಜಾಗರಿ ಬಿಸ್ಕತ್ತು, ಬೀಟ್ರೂಟ್ ಕುಕೀಸ್, ಇತ್ಯಾದಿಗಳು ಗ್ರಾಹಕರ ಮನಸೆಳೆದವು.

ಮೇಳದಲ್ಲಿ ಡಾ: ಕೆ.ಸಿ.ನಾರಾಯಣಸ್ವಾಮಿ, ಕುಲಸಚಿವರು, ಡಾ: ವೈ.ಎನ್. ಶಿವಲಿಂಗಯ್ಯ, ವಿಸ್ತರಣಾ ನಿರ್ದೇಶಕರು, ಡಾ: ಹೆಚ್.ಎಸ್. ಶಿವರಾಮು, ಸಂಶೋಧನಾ ನಿರ್ದೇಶಕರು, ಡಾ: ಕೆ.ಪಿ. ರಘುಪ್ರಸಾದ್, ಸಹ ವಿಸ್ತರಣಾ ನಿರ್ದೇಶಕರು ಹಾಗೂ ಕೃಷಿ ವಿಶ್ವವಿದ್ಯಾನಿಲಯದ ಅಧಿಕಾರಿಗಳು, ಶಿಕ್ಷಕರು, ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಗ್ಲಾಕೋಮಾ ಮುಕ್ತ ಜಿಲ್ಲೆಗೆ ಕೈ ಜೋಡಿಸಿ

**ಚಿಕ್ಕಬಳ್ಳಾಪುರ:** ದೀರ್ಘಕಾಲದ ದೃಷ್ಟಿ ನಷ್ಟ ಅನುಭವಿಸುವ ಮೊದಲು ಗ್ಲಾಕೋಮಾವನ್ನು ಪರೀಕ್ಷಿಸಿಕೊಂಡು ಸೂಕ್ತ ಚಿಕಿತ್ಸೆಯನ್ನು ನೇತ್ರ ತಜ್ಞರಿಂದ ಪರೀಕ್ಷಿಕೊಂಡು ಕಣ್ಣುಗಳನ್ನು ರಕ್ಷಿಸಿಕೊಳ್ಳಬೇಕು. ಜಿಲ್ಲೆಯಾದ್ಯಂತ ವಿಶ್ವ ಗ್ಲಾಕೋಮಾ ಸಪ್ತಾಹ ಮಾರ್ಚ್ 9 ರಿಂದ 15 ರವರೆಗೆ ಹಮ್ಮಿಕೊಳ್ಳಲಾಗಿದೆ.

ಗ್ಲಾಕೋಮಾ ಕಾಯಿಲೆ ಯಾವುದೇ ರೋಗ ಲಕ್ಷಣಗಳಿಲ್ಲದ ದೃಷ್ಟಿ ಕದಿಯುವ ಕಾಯಿಲೆ ಆಗಿದೆ. 40 ವರ್ಷ ವಯಸ್ಸಿನ ನಂತರ ಪ್ರತಿಯೊಬ್ಬರೂ ವರ್ಷಕ್ಕೊಮ್ಮೆ ಕಣ್ಣನ್ನು ಪರೀಕ್ಷಿಸಿಕೊಳ್ಳಬೇಕು. ಮಧುಮೇಹ, ರಕ್ತದೊತ್ತಡ ಹಾಗೂ ದೃಷ್ಟಿ ದೋಷವಿರುವವರಲ್ಲಿ ಗ್ಲಾಕೋಮಾ ಆಗುವ ಸಲಭವ ಹೆಚ್ಚಾಗಿರುತ್ತದೆ. ಸಾರ್ವಜನಿಕರು ಗ್ಲಾಕೋಮಾ ಕಾಯಿಲೆ ಬಗ್ಗೆ ತಿಳಿದುಕೊಂಡು ಇತರರಿಗೂ ತಿಳಿಸಬೇಕು. ವೈದ್ಯರು ನೀಡಿದ ಸಲಹೆ ತಪ್ಪದೇ ಪಾಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ ಮಾಹಿತಿ ಪಡೆದುಕೊಳ್ಳಬಹುದು.

ಕಣ್ಣುಗಳನ್ನು ಪರೀಕ್ಷೆ ಮಾಡಿಸಿಕೊಳ್ಳದೇ ತೀರ ದೃಷ್ಟಿ ಮಂದವಾದಾಗ ಮಾತ್ರವೇ ವೈದ್ಯರ ಸಲಹೆ ಪಡೆಯಲು ಮುಂದಾಗುತ್ತಾರೆ, ಶೇಕಡಾ 50 ರಷ್ಟು ದೃಷ್ಟಿ ಮಾಂದತೆಯು ಕಣ್ಣಿನ ಪೊರೆ ಕಾಯಿಲೆಯಿಂದ ಆಗುವುದರಿಂದ ಕಣ್ಣಿನ ಪೊರೆಯ ಶಸ್ತ್ರ ಚಿಕಿತ್ಸೆಯ ಮೂಲಕ ಮರಳಿ ದೃಷ್ಟಿ ಪಡೆಯಲು ಸಾಧ್ಯವಿದೆ. ಆದರೆ ಶೇಕಡಾ 20 ರಷ್ಟು ಮಂದಿಗೆ ತಾವು ಗ್ಲಾಕೋಮಾ ಕಾಯಿಲೆಯಿಂದ ದೃಷ್ಟಿ ಕಳೆದುಕೊಳ್ಳುತ್ತಿರುವುದು ಗಮನಕ್ಕೆ ಬಂದಿರುವುದಿಲ್ಲ. ಇವರು ಕ್ರಮೇಣವಾಗಿ ಮತ್ತು ಶಾಶ್ವತವಾಗಿ ದೃಷ್ಟಿ ಕಳೆದುಕೊಳ್ಳುವ ಸಂಭವವಿದ್ದು ಸೂಕ್ತ ಸಮಯದಲ್ಲಿ ತಜ್ಞರ ಸಲಹೆ - ಸೂಚನೆ ಪಡೆಯುವ ಅಗತ್ಯವಿರುತ್ತದೆ, ಅರಿವಿಗೆ ಬಾರದಂತೆ ವ್ಯಕ್ತಿಯ ದೃಷ್ಟಿ ಕಡೆಯುವ ಸಂಬಂವವಿರುವುದರಿಂದ ಈ ಕಾಯಿಲೆಗೆ ''ದೃಷ್ಟಿ ಕಳ್ಳ'' ಎಂದು ಕರೆಯುತ್ತಾರೆ.

## ಅದೃಶ್ಯ ಗ್ಲಾಕೋಮಾವನ್ನು ಮೆಟ್ಟಿ ನಿಲ್ಲಿ

**ಯಾವುದೇ ರೋಗ ಲಕ್ಷಣಗಳಿಲ್ಲದೆ ದೃಷ್ಠಿ ಕದಿಯುವ ಕಾಯಿಲೆ ಗ್ಲಾಕೋಮಾ, ಗ್ಲಾಕೋಮಾದಲ್ಲಿ ನೇರ ದೃಷ್ಟಿಯು ಸರಿಯಾಗಿದ್ದರೂ ದೃಷ್ಠಿ ವಲಯವು ಕುಗ್ಗುತ್ತಾ ಬರುತ್ತವೆ. 40 ವಯಸ್ಸಿನ ನಂತರ ಪ್ರತಿಯೊಬ್ಬರೂ ವರ್ಷಕ್ಕೊಮ್ಮೆ ಕಣ್ಣಿನ ಒತ್ತಡ ಪರೀಕ್ಷಿಸಿಕೊಳ್ಳಿ, ಮಧುಮೇಹ, ರಕ್ತದೊತ್ತಡ ಹಾಗೂ ಸಮೀಪ ದೃಷ್ಠಿ ದೋಷವಿರುವವರಲ್ಲಿ ಗ್ಲಾಕೋಮಾ ಆಗುವ ಸಂಭವ ಹೆಚ್ಚು ಪದೇ ಪದೇ ಕನ್ನಡಕದ ಸಂಖ್ಯೆ ಬದಲಾಯಿಸಬೇಕಾದಲ್ಲಿ ಕಡ್ಡಾಯವಾಗಿ ಕಣ್ಣಿನ ಒತ್ತಡ ಪರೀಕ್ಷೆ ಮಾಡಿಸಿಕೊಳ್ಳಿ ಸೂಕ್ತ ಚಿಕಿತ್ಸೆ ಪಡೆಯದಿದ್ದಲ್ಲಿ ಶಾಶ್ವತ ಅಂಧತ್ವ ಉಂಟಾಗುತ್ತದೆ. ಸರಿಯಾದ ಸಮಯದಲ್ಲಿ ಸೂಕ್ತ ಚಿಕಿತ್ಸೆ ಅತ್ಯಗತ್ಯ ''ನಿಮ್ಮ ದೃಷ್ಠಿ ಮತ್ತು ಜೀವನವನ್ನು ಕತ್ತಲಾಗಿಸಲು ಬಿಡಬೇಡಿ'' ಹೆಚ್ಚಿನ ಮಾಹಿತಿಗಾಗಿ ಉಚಿತ ಆರೋಗ್ಯ ಸಹಾಯವಾಣಿ 104ಕ್ಕೆ ಕರೆಮಾಡಬಹುದೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಮಹೇಶ್ ಕುಮಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.**

# ಟ್ರಾನ್ಸ್‌ಜೆಂಡರ್ ಮಕ್ಕಳಿಗಾಗಿ ಬಾಲಮಂದಿರ: ಜಿ.ಜಗದೀಶ

**ಬೆಂಗಳೂರು:** ಮಿಷನ್ ವಾತ್ಸಲ್ಯ ಯೋಜನೆಯಡಿ ರಕ್ಷಣೆ ಮತ್ತು ಪೋಷಣೆ ಅಗತ್ಯವಿರುವ ಮಕ್ಕಳಿಗಾಗಿ ದೇಶದಲ್ಲೇ ಮೊದಲ ಬಾರಿಗೆ ರಾಜ್ಯದ, ಬೆಂಗಳೂರು ನಗರ ಜಿಲ್ಲೆಯಲ್ಲಿ ಲಿಂಗತ್ವ ಅಲ್ಪಸಂಖ್ಯಾತ (ಟ್ರಾನ್ಸ್ ಜೆಂಡರ್) ಮಕ್ಕಳಿಗಾಗಿ ಎರಡು ಬಾಲಮಂದಿರಗಳನ್ನು ಪ್ರಾರಂಭಿಸಲಾಗಿದೆ ಎಂದು ಬೆಂಗಳೂರು ನಗರ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕಗಳ ಅಧ್ಯಕ್ಷರಾದ ಜಿ.ಜಗದೀಶ ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಜಿಲ್ಲಾ ಮಟ್ಟದ ಮಕ್ಕಳ ಸಂರಕ್ಷಣೆ ಮತ್ತು ಸಮನ್ವಯ ಸಮಿತಿ (ಡಿಸಿಪಿಸಿ) ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ, ಮಕ್ಕಳ ರಕ್ಷಣಾ ನಿರ್ದೇಶನಾಲಯವು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಸಹಯೋಗದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕಗಳ ಮುಖಾಂತರ ಮಿಷನ್ ವಾತ್ಸಲ್ಯ ಯೋಜನೆಯಡಿಯಲ್ಲಿ ರಕ್ಷಣೆ ಮತ್ತು ಪೋಷಣೆ ಅಗತ್ಯವಿರುವ ಮಕ್ಕಳಿಗಾಗಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುತ್ತಿದೆ. ಮಕ್ಕಳ ಸರ್ವಾಂಗೀಣ ಅಭಿವೃದ್ಧಿ ಹಾಗೂ ಬೆಳವಣಿಗೆ ಹಿತದೃಷ್ಟಿಯಿಂದ ಬೆಂಗಳೂರು ನಗರ ಜಿಲ್ಲೆಯಲ್ಲಿ ಟ್ರಾನ್ಸ್ ಜೆಂಡರ್ ಮಕ್ಕಳಿಗಾಗಿ ಎರಡು ಬಾಲಮಂದಿರಗಳನ್ನು ಪ್ರಾರಂಭಿಸಲು ಸರ್ಕಾರವು ಅನುಮೋದನೆ ನೀಡಿರುತ್ತದೆ. ಅದರಂತೆ ದೇಶದಲ್ಲೇ ಮೊದಲ ಬಾರಿಗೆ ರಾಜ್ಯದ, ಬೆಂಗಳೂರು ನಗರ ಜಿಲ್ಲೆಯಲ್ಲಿ ಪ್ರಥಮವಾಗಿ ಚಾಲಗೊಳಿಸಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ಲಿಂಗತ್ವ ಅಲ್ಪಸಂಖ್ಯಾತ (ಟ್ರಾನ್ಸ್ ಜೆಂಡರ್) ಮಕ್ಕಳಿಗೆ ಪಾಲನೆ ಮತ್ತು ಪೋಷಣೆ ಹಾಗೂ ಪುನರ್ವಸತಿ ಅವಶ್ಯಕತೆ ಇರುವಂತಹವರು ಸರ್ಕಾರದಿಂದ ಅನುಷ್ಠಾನಗೊಳಿಸುತ್ತಿರುವ ಟ್ರಾನ್ಸ್ಜೆಂಡರ್ ಬಾಲಕರ ಮತ್ತು ಟ್ರಾನ್ಸ್ಜೆಂಡರ್ ಬಾಲಕಿಯರ ಬಾಲಮಂದಿರಗಳಿಗೆ ಮಕ್ಕಳನ್ನು ದಾಖಲಿಸಿದ್ದಲ್ಲಿ, ಅಂತಹ ಮಕ್ಕಳಿಗೆ ಪುನರ್ವಸತಿ ಕಲ್ಪಿಸಲಾಗುವುದು, ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಬೆಂಗಳೂರು ನಗರ ಕೇಂದ್ರ, ಕಿದ್ವಾಯಿ ಆಸ್ಪತ್ರೆ, ಹಿಂಭಾಗ, ಡಾ. ಎಮ.ಹೆಚ್ ಮಲಗೌಡ ರಸ್ತೆ, ಬೆಂಗಳೂರು 580029, ದೂರವಾಣಿ ಸಂಖ್ಯೆ: 080-29523458 ಅನ್ನು ಸಂಪರ್ಕಿಸಬಹುದಾಗಿದೆ. ಈ ಬಾಲ ಮಂದಿರಗಳ ಉಪಯೋಗವನ್ನು ಪಡೆದುಕೊಳ್ಳುವಂತೆ ಜಿಲ್ಲಾಧಿಕಾರಿಗಳು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕಗಳ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಹಾಗೂ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಆರಾಧನ ಗುರುಪೂಜಾ ಬಾಲ ಪೂರ್ಣಮ ಮಹೋತ್ಸವ

**ಮಡಿವಾಳ :** ಮಡಿವಾಳ ಗ್ರಾ.ಪಂ.ನ ಮಾಲೂರು ಹೊಸಕೋಟೆ ರಸ್ತೆಯ ಚೊಕ್ಕಂಡಹಳ್ಳಿ ಗ್ರಾಮದ ವೇಮನ ಆಶ್ರಮದಲಿ ಮಹಾಯೋಗಿ ವೇಮನ, ಯೋಗಿನಾರಾಯಣ ಕೈವಾರ ತಾತಯ್ಯನವರ 9ನೇ ವರ್ಷದ ವಾರ್ಷಿಕೋತ್ಸವ ಹಾಗೂ ಬ್ರಹ್ಮಶ್ರೀ ಯರಪ್ಪಸ್ವಾಮಿ, ಚಿನ್ನಮ್ಮ ಸ್ವಾಮಿರವರ 28ನೇ ಆರಾಧನ ಗುರುಪೂಜಾ ಬಾಲ ಪೂರ್ಣಮ ಮಹೋತ್ಸವ ನಡೆಯಿತು.

ಆಶ್ರಮದಲ್ಲಿ ಮುಂಜಾನೆಯಿಂದಲೇ ಹೋಮ, ಹವನ, ಪೂಜೆ ಅಲಂಕಾರ ಆಶ್ರಮದ ಅಧ್ಯಕ್ಷರಾದ ಮುನಿಯಮ್ಮ ರಾಮಕೃಷ್ಣಪ್ಪ ಅವರ ನೇತೃತ್ವದಲ್ಲಿ ನಡೆಯಿತು, ಮುತ್ತೈದೆಯರಿಗೆ ಬಳಿಯನ್ನು ತೊಡಿಸಲಾಯಿತು, ಪಂಡಿ ಭಜನೆ, ಕೋಲಾಟ, ಕೀರ್ಥನೆ, ಕಾರ್ಯಕ್ರಮಗಳು ನಡೆಯಿತು. ಆಶ್ರಮಕ್ಕೆ ಆಗಮಿಸಿದ ಭಕ್ತರಿಗೆ ಪ್ರಸಾದ ವ್ಯವಸ್ಥೆಯನ್ನು ಮಾಡಲಾಗಿತ್ತು.

ಕಾರ್ಯಕ್ರಮದಲ್ಲಿ ಸೀತಾರಾಮಪುರ ವೆಂಕಟರಮಣಪ್ಪ ಹಾಗೂ ಕಲಾವಿದರಿಂದ ಹರಿಕಥೆ ಕಾಲಕ್ಷೇಪ ನಡೆಯಿತು. ಬಂಡಿ ನಾರಾಯಣಪ್ಪ, ನಾರಾಯಣಮ್ಮ, ನಂದಕುಮಾರ್ ಜಿ ವಿ, ಸುಮಮ್ಮ, ಚನ್ನಾಚಾರಿ, ನೀಲಮ್ಮ,ಶ್ರೀಧರ್, ನಂಜಪ್ಪ, ಪಟೇಲ್ ವೆಂಕಟರೋಣಪ್ಪ, ಪ್ರದೀಪ್ ಇನ್ನಿತರರು ಭಾಗವಹಿಸಿದ್ದರು.



ಸಂಜೆ ಮುಗಿಲು
ಶನಿವಾರ
15.3.2025



# ನಾಗಮಂಗಲದಲ್ಲಿ ಸೌಮ್ಯಕೇಶವ ಸ್ವಾಮಿ ರಥೋತ್ಸವ

**ನಾಗಮಂಗಲ:** ಪಟ್ಟಣದ ಅನಂತ ಕ್ಷೇತ್ರವೆಂದು ಪ್ರಸಿದ್ಧ ವಾಗಿರುವ ಶ್ರೀ ಸೌಮ್ಯ ನಾಯಕಿ ಸಮೇತ ಶ್ರೀ ಸೌಮ್ಯಕೇಶವ ಸ್ವಾಮಿ ರಥೋತ್ಸವವು ಸಾವಿರಾರು ಭಕ್ತರ ಸಮ್ಮುಖದಲ್ಲಿ ಶುಕ್ರವಾರ ಪೂರ್ಣಿಮಾ ಫುಬ್ಬಾ ನಕ್ಷತ್ರದಲ್ಲಿ ಬಹಳ ವಿಜೃಂಭಣೆಯಿಂದ ನೆರವೇರಿತು.

ಬ್ರಹ್ಮ ರಥೋತ್ಸವದ ಅಂಗವಾಗಿ ಶುಕ್ರವಾರ ಬೆಳಿಗ್ಗೆಯಿಂದಲೇ ದೇವರಿಗೆ ಹೂವಿನ ಅಲಂಕಾರ, ಪಂಚಾಮೃತ ಕ್ಷೀರ, ಅಭಿಷೇಕ, ಮಹಾಮಗಳಾರತಿ ಸೇರಿದಂತೆ ಅನೇಕ ಪೂಜಾ ಕೈಂಕರ್ಯಗಳು ಪ್ರಧಾನ ಅರ್ಚಕರಾದ ಶ್ರೀ ತಿರುನಾರಾಯಣ್ ಹಾಗೂ ಕೇಶವ ರವರ ತಂಡದಿಂದ ನೆರವೇರಿದವು.

ನಾಗಮಂಗಲ ಶಿರಸ್ತಾರ್ ಮಲ್ಲಿಕಾರ್ಜುನ್ ಹಾಗೂ ಚಂದ್ರಶೇಖರ್ ರಥೋತ್ಸವಕ್ಕೆ ಚಾಲನೆ ನೀಡಿದರು.

ಈ ವೇಳೆ ಗೋವಿಂದ ನಾಮಸ್ಮರಣೆ, ಜೈ ಘೋಷ ಕೂಗುತ್ತಾ ಬಿಸಿಲಿನ ತಾಪವನ್ನು ಲೆಕ್ಕಿಸದೆ ಭಕ್ತಾದಿಗಳು ರಥೋತ್ಸವವನ್ನು ಬಹಳ ಉತ್ಸವದಿಂದ ಎಳದರು.

ಶ್ರೀ ಸೌಮ್ಯ ಕೇಶವ ಸ್ವಾಮಿ ಬ್ರಹ್ಮ ರಥೋತ್ಸವ ಮಹಾನ್ ನಿವೇದನ ಸೇವಾ ಸಮಿತಿ ವತಿಯಿಂದ ಸಾವಿರಾರು ಭಕ್ತರಿಗೆ ಅನ್ನದಾನವನ್ನು ಏರ್ಪಡಿಸಿದ್ದರು.

ಬ್ರಹ್ಮ ರಥೋತ್ಸವ ಕಾರ್ಯಕ್ರಮದಲ್ಲಿ ಅಧ್ಯಕ್ಷ ಸಿ ಕುಮಾರ್, ಶಿವೇಗೌಡ್ರು ಖಜಾಂಚಿ ರುದ್ರೇಶ್, ಲಕ್ಷ್ಮಿ ರಂಗಪ್ಪ ಹಾಗೂ ಸಾವಿರಾರು ಭಕ್ತಾದಿಗಳು ಉಪಸ್ಥಿತರಿದ್ದರು.

### ಆದಿಚುಂಚನಗಿರಿಯಲ್ಲಿ ಸರ್ವ ಧರ್ಮ ಸಮ್ಮೇಳನದಲ್ಲಿ ವಿವಿಧ ಧರ್ಮದ ಧರ್ಮ ಗುರುಗಳು ಭಾಗಿ

# ಸರ್ವಧರ್ಮದ ಸಮನ್ವತೆಯ ಮೂಲ ಮಂತ್ರ




**ನಾಗಮಂಗಲ:** ಧರ್ಮಗಳ ಸೌಮ್ಯತೆ ಸಾಮರಸ್ಯ ನಮ್ಮ ಧರ್ಮ ಬಗ್ಗೆ ಸ್ವಾಭಿಮಾನವಿದ್ದು ಬೇರೆ ಧರ್ಮಗಳ ಬಗ್ಗೆ ಅಸಮಾನತೆ ಬೇಡವೆಂದು ಆದಿಚುಂಚನಗಿರಿ ಮಠದ ಪ್ರಧಾನ ಕಾರ್ಯದರ್ಶಿ ಶ್ರೀ ಪ್ರಸನ್ನಾಥ ಸ್ವಾಮೀಜಿ ಹೇಳಿದರು.

ನಾಗಮಂಗಲ ತಾಲೂಕಿನ ಆದಿಚುಂಚನಗಿರಿ ಮಹಾಸಂಸ್ಥಾನ ಮಠದಲ್ಲಿ ಜಾತ್ರಾ ಮಹೋತ್ಸವದ ಪ್ರಯುಕ್ತ ಬಿಜಿಎಸ್ ಸಭಾಂಗಣದಲ್ಲಿ ಗುರುವಾರ ಆಯೋಜಿಸಿದ ಸರ್ವಧರ್ಮ ಸಮ್ಮೇಳನದಲ್ಲಿ ಹಿಂದೂ ಧರ್ಮ ಕುರಿತು ಮಾತನಾಡಿದರು.

ಹಿಂದೂ ಧರ್ಮಗಳ ಸಮನ್ವಯದಿಂದ ಎಲ್ಲರೂ ಶಾಂತಿಯುತ ಬದುಕು ನಡೆಸಬೇಕು ಎಂಬ ಆಶಯ ಶ್ರೀ ಬಾಲಗಂಗಾಧರನಾಥ ಸ್ವಾಮಿಗಳ ಸರ್ವಧರ್ಮ ಸಮ್ಮೇಳನ ಆರಂಭಿಸಿದ್ದರು. ಆ ಹಾದಿಯಲ್ಲಿ ಇಂದು ಧರ್ಮ ಸಮ್ಮೇಳನ ವಿವಿಧ ಧರ್ಮ ಗುರುಗಳು ಭಾಗಿಯಾಗಿ ಧರ್ಮ ಶ್ರೇಷ್ಠ ದ ಮೂಲ ಮಂತ್ರ ಶಾಂತಿ ಸಂದೇಶ ಎಂಬ ಘೋಷಣೆ ನಿತ್ಯ ನಿರಂತರವಾಗಿದೆ ಎಂದು ಮಾತನಾಡಿದರು.

ಧರ್ಮಗಳ ಸಮನ್ವಯದಿಂದ ಬದುಕಬೇಕೆಂಬ ಗುರಿ ಹಾಗೂ ಉದ್ದೇಶದಿಂದ ಸರ್ವಧರ್ಮ ಸಮ್ಮೇಳನ ನಡೆಯುತ್ತದೆ ಹಿಂದೂ ಧರ್ಮದ ಸಾಮರಸ್ಯವು ಬೃಹತ್ ಗ್ರಂಥಗಳಲ್ಲಿಯೂ ಉಲ್ಲೇಖನ ದಲ್ಲಿ ತಿಳಿಸಿದೆ.

ನಮ್ಮ ಚಿಂತನೆಗಳು ಸರ್ವಕಾಲಿಕ ಸರ್ವ ದೃಷ್ಟಿಯಿಂದ ಯೋಚನೆ ಮಾಡಿದಾಗ ಆತ್ಮ ಚಿಂತನೆಯಿಂದ ಮಾಡುವ ಕೆಲಸ ಹಿಂದೂ ಧರ್ಮದಲ್ಲಿಯೂ ಶ್ರೇಷ್ಠ ಸ್ಥಾನವಿದ್ದು ಇಂತಹ ಹಿಂದೂ ಧರ್ಮದಕ್ಕೆ ಶ್ರೇಷ್ಠತೆ ಇದೆ. ಇದೇ ಸಂದರ್ಭದಲ್ಲಿ ಬೆಂಗಳೂರಿನ ಮಹಾಭೂತಿ ಸಂಶೋಧನಾ ಕೇಂದ್ರದ ಮಾರ್ಗದರ್ಶಕರಾದ ರಾಜೇಂದ್ರಸಪನೋ ಮಾತನಾಡಿ ಅಜ್ಞಾನಿಗಳನ್ನು ಜ್ಞಾನಿಗಳನ್ನಾಗಿಸುವುದು ಎಲ್ಲಾ ಧರ್ಮ ಗುರುಗಳ ಕಾಯಕ ವಾಗಿದ್ದು ಆಗಾಗಿ ಎಲ್ಲರನ್ನು ಒಟ್ಟಿಗೆ ಕರೆದುಯುವ ಪ್ರಯತ್ನ ಪಾಲ್ಗೊಳ್ಳುವಿಕೆ ಶಾಂತಿ ಧರ್ಮ ನೆಲೆಸುವ ಪ್ರಯತ್ನ ವಾಗಲಿದೆ ಎಂದರು. ಜೈನ ಧರ್ಮ ಬಗ್ಗೆ ಶ್ರವಣಬೆಳಗೊಳದ ದಿಗಂಬರ ಮಠದ ಚಾರುಕೀರ್ತಿ ಭಟ್ಟಾರಕ ಸ್ವಾಮೀಜಿ ಕ್ರೈಸ್ತ ಧರ್ಮದ ಕುರಿತು ರೆವೆನ್ಡ್ ಫಾದರ್ ಸ್ಟ್ಯಾನಿ ಡಿಸೋಜ ಮತ್ತು ಇಸ್ಲಾಂ ಧರ್ಮದ ಬಗ್ಗೆ ಉಡುಪಿಯ ಉಪನ್ಯಾಸಕ ಮಹಮ್ಮದ್ ಸಾಧಿಕ್ ಧರ್ಮಗಳ ಬಗ್ಗೆ ತಿಳಿಸಿದರು.

ಆದಿಚುಂಚನಗಿರಿ ಮೈಸೂರು ಶಾಖ ಮಠದ ಸೋಮನಾಥ ಸ್ವಾಮೀಜಿ ಪ್ರಾಥಮಿಕ ಭಾಷಣ ಮಾಡಿದರು. ಶ್ರೀ ನಿರ್ಮಾಲಾ ನಂದನಾಥ ಸ್ವಾಮೀಜಿ ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಪುರುಷೋತ್ತಮಾನಂದ ಸ್ವಾಮೀಜಿ. ಸೋಮೇಶ್ವರನಾಥ ಸ್ವಾಮೀಜಿ. ಶೇಖರ್ ನಾಥ ಸ್ವಾಮೀಜಿ.ಧರ್ಮಪಾಲನಾಥ ಸ್ವಾಮೀಜಿ.ಹಾಗೂ ಶಾಖ ಮಠಗಳ ಸ್ವಾಮೀಜಿಗಳು ಇದ್ದರು.

# ಮಹಿಳೆಯರು ಮುಖ್ಯವಾಹಿನಿಗೆ ಬರಲಿ

**ಚಾಮರಾಜನಗರ :** ಮಹಿಳೆಯರು ಮುಖ್ಯ ವಾಹಿನಿಗೆ ಬರಬೇಕು ಎಂದು ಜೆಎಸ್ಎಸ್ ಮಹಿಳಾ ಕಾಲೇಜು ಸಹಾಯಕ ಪ್ರಾಧ್ಯಾಪಕಿ ಡಾ ಎಆರ್ ಸುಷ್ಮಾ ಕರೆ ನೀಡಿದರು.

ನಗರ ಶ್ರೀ ಮಹರ್ಷಿ ವಾಲ್ಮೀಕಿ ಭವನದಲ್ಲಿ ಮ್ಯಾಜಿಕ್ ಬಸ್ ಇಂಡಿಯಾ ಫೌಂಡೇಶನ್ ವತಿಯಿಂದ ಏರ್ಪಡಿಸಿದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಭಾಷಣ ಮಾಡಿ ಸರ್ಕಾರ ಮಹಿಳೆಯರ ಅಭಿವೃದ್ಧಿಗಾಗಿ ಹಲವಾರು ಜನಪರ ಕಾರ್ಯಕ್ರಮಗಳನ್ನು ಜಾರಿ ಮಾಡಿದ್ದಾರೆ ಅದನ್ನು ಬಳಸಿಕೊಂಡು ಮುಖ್ಯವಾಹಿನಿಗೆ ಮಹಿಳೆಯರು ಬರಬೇಕು ಎಂದು ಹೇಳಿದೆ ಅವರು ಸಂವಿಧಾನ ಶಿಲ್ಪಿ ಬಾಬಾ ಸಾಹೇಬ್ ಅಂಬೇಡ್ಕರ್ ಶಿಕ್ಷಣಕ್ಕೆ ಹೆಚ್ಚಿನ ಅದ್ಯತೆ ನೀಡಿದ್ದಾರೆ ಪುರತನ ಕಾಲದಲ್ಲಿ ಹೆಣ್ಣು ಮಕ್ಕಳ ಕಡ್ಡಾಯ ಶಿಕ್ಷಣಕ್ಕೆ ಹೋರಾಟ ಮಾಡಿ ವಿದ್ಯಾಭ್ಯಾಸಕ್ಕೆ ಹೆಚ್ಚಿನ ಆದ್ಯತೆ ನೀಡಿದ್ದಾರೆ ಎಂದು ಮೆಚ್ಚಿಗೆ ವ್ಯಕ್ತಪಡಿಸಿದರು.

ಪೋಷಕರು ತಮ್ಮ ಮಕ್ಕಳಿಗೆ ಕಡ್ಡವಾಗಿ ಶಿಕ್ಷಣ ಕಲಿಸಿ ಅವರ ಭವಿಷ್ಯ ಉಜ್ವಲ ಮಾಡಿ ಎಂದು ಕರೆ ನೀಡಿದರು. ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಆಶಾ ಕಾರ್ಯಕರ್ತೆಯರ ಸಂಘದಜಿಲ್ಲಾಧ್ಯಕ್ಷ ಕವಿತಾ ಮಾತನಾಡಿ ಮ್ಯಾಜಿಕ್ ಬಸ್ ಇಂಡಿಯಾ ಫೌಂಡೇಶನ್ ವತಿಯಿಂದ ಹಲವಾರು ಜನಪರ ಕೆಲಸಗಳನ್ನು ಮಾಡುತ್ತಿದೆ ಇದರಿಂದ ಗ್ರಾಮೀಣ ಭಾಗದ ಮಕ್ಕಳಿಗೆ ಕ್ರೀಡೆ ಆರೋಗ್ಯ ,ಶಿಕ್ಷಣದಲ್ಲಿ ಸೇವೆ ಮಾಡುತ್ತಿರುವುದು ಮೆಚ್ಚುಗೆ ವ್ಯಕ್ತಪಡಿಸಿದರು.

ಶ್ರೀ ವರಮಹಾಲಕ್ಷ್ಮಿ ಸಂಸ್ಥೆ ವತಿಯಿಂದ ಹಲವಾರು ಜನಪರ ಕಾರ್ಯಕ್ರಮಗಳನ್ನು ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಮಹಿಳೆಯರು ಹಾಗೂ ವಿದ್ಯಾರ್ಥಿನಿಯರ ಪ್ರಗತಿಗಾಗಿ ಸೇವೆ ಮಾಡಿಕೊಂಡು ಬರುತ್ತಿದೆ ಎಂದು ತಿಳಿಸಿದರು.

ಮ್ಯಾಜಿಕ್ ಬಸ್ ಇಂಡಿಯಾ ಫೌಂಡೇಶನ್ ಡಿಜಿಎಂ ಎನ್ಟಿ ವೆಂಕಟೇಶ್ ಮಾತನಾಡಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಪ್ರಮುಖವಾಗಿ ಕ್ರೀಡೆ ಕಲೆ ಸಾಹಿತ್ಯ ಸಂಸ್ಕೃತಿ ಪರಿಸರ ಸಂರಕ್ಷಣೆ ಭಾರತೀಯ ಸಂಸ್ಕೃತಿಯ ಬಿಂಬಿಸುವ ಹಲವಾರು ಕಾರ್ಯಕ್ರಮಗಳನ್ನು ನಮ್ಮ ಸಂಸ್ಥೆಯಿಂದ ಮಾಡುತ್ತಿದೆ ಸಾರ್ವಜನಿಕರು ಇದನ್ನು ಬಳಸಿಕೊಳ್ಳಬೇಕು ಮನವಿ ಮಾಡಿದರು.

ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷ ಲತಾ ಮಾತನಾಡಿ ಇವಾಗ ದ್ವಿತೀಯಪಿಯುಸಿ ಹಾಗೂ ಎಸ್ ಎಸ್ ಎಲ್ ಸಿ ಪರೀಕ್ಷೆ ಪ್ರಾರಂಭವಾಗಿದೆ ಆದ್ದರಿಂದ ಮಕ್ಕಳು ಹೆಚ್ಚಾಗಿ ಆತ್ಮವಿಶ್ವಾಸದಿಂದ ಪರೀಕ್ಷೆ ಬರೆದರೆ ಪರೀಕ್ಷೆಯಲ್ಲಿ ಉತ್ತಮ ಅಂಕ ಬರೆದು ಗ್ಯಾರೆಂಟಿ ಯಾವುದೇ ಭಯ ಕೊಡು ಅಗತ್ಯ ಇಲ್ಲ ಎಂದು ಧೈರ್ಯ ತುಂಬಿದರು. ತಾಲೂಕು ಪಂಚಾಯಿತಿ ಕ್ಲಸ್ಟರ್ ಸೂಪರ್ ವೈ ಸರ್, ರಾಜಮ್ಮ ಅಧ್ಯಕ್ಷತೆ ವಹಿಸಿ ಮಾತನಾಡಿ ತಾಲೂಕು ಪಂಚಾಯತಿ ವತಿಯಿಂದ ಮಹಿಳಾ ಅಭಿವೃದ್ಧಿ ಗಾಗಿ ಹಲವಾರು ಸ್ವಯಂ ಉದ್ಯೋಗ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಅದನ್ನು ಬಳಸಿಕೊಂಡು ತಮ್ಮ ಜೀವನವನ್ನು ರೂಪಿಸಿಕೊಂಡಿದ್ದಾರೆ ಎಂದು ಅಭಿಪ್ರಾಯಪಟ್ಟರು. ಚಾಮರಾಜನಗರ ತಾಲೂಕು ಪ್ರೋಗ್ರಾಮ್ ಮೆನೇಜರ್ ವೇಣುಗೋಪಾಲ್. ಅಂಗನವಾಡಿ ಕಾರ್ಯಕರ್ತೆ ಲಕ್ಷ್ಮಿ, ಮ್ಯಾಜಿಕ್ ಬಸ್ ಸಂಸ್ಥೆಯ ಟಿ ಎಂ ಓ ಚಂದ್ರು, ಪದ್ಮಿನಿ, ರಂಜನ್, ಚೇತನ್, ಪ್ರಮೋದ್, ತುಳಸಮ್ಮ, ರವಿ ಹಾಜರಿದ್ದರು.



# ಗಂಗಾಧರೇಶ್ವರ ರಥೋತ್ಸವ ವೈಭವ



**ನಾಗಮಂಗಲ:** ಇತಿಹಾಸ ಪ್ರಸಿದ್ಧ, ಪುಣ್ಯಕ್ಷೇತ್ರ ತಾಲೂಕಿನ ಆದಿಚುಂಚನಗಿರಿಯಲ್ಲಿ ಗುರುವಾರ ಮುಂಜಾನೆ ಬ್ರಾಹ್ಮೀ ಮುಹೂರ್ತದಲ್ಲಿ ಶ್ರೀ ಗಂಗಾಧರೇಶ್ವರ ಸ್ವಾಮಿ ಮಹಾ ರಥೋತ್ಸವ ಹಾಗೂ ಡಾ. ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಅಡ್ಡಪಲ್ಲಕ್ಕಿ ಉತ್ಸವ ಲಕ್ಷಾಂತರ ಭಕ್ತರ ನಡುವೆ ಬಹಳ ವಿಜೃಂಭಣೆಯಿಂದ ನೆರವೇರಿತು.

ಬ್ರಾಹ್ಮೀ ಮುಹೂರ್ತ 4ಗಂಟೆಗೆ ಸರಿಯಾಗಿ ಶ್ರೀಮಠದ ಶ್ರೀ ಪೀಠಾಧ್ಯಕ್ಷ ಡಾ.ನಿರ್ಮಲಾನಂನಾಥ ಸ್ವಾಮೀಜಿ ಅವರು ಆದಿಚುಂಚನಗಿರಿಯ ರಥ ಬೀದಿಯಲ್ಲಿ ಸರ್ವಾಲಂಕಾರಗೊಂಡಿದ್ದ ರಥಕ್ಕೆ ಪೂಜೆ ಸಲ್ಲಿಸುವ ಮೂಲಕ ಲಕ್ಷಾಂತರ ಭಕ್ತರ ಹರ್ಷೋದ್ಗಾರದ ನಡುವೆ ಮಹಾ ರಥೋತ್ಸವಕ್ಕೆ ಚಾಲನೆ ನೀಡಿದರು. ರಥೋತ್ಸವದ ಅಂಗವಾಗಿ ಗುರುವಾರ ಇಡೀ ರಾತ್ರಿ ಶ್ರೀ ಕ್ಷೇತ್ರದಲ್ಲಿ ತಿರುಗಣಿ ಉತ್ಸವ ಸೇರಿದಂತೆ ನಾನಾ ಪೂಜಾ ಕೈಂಕರ್ಯಗಳು ನಡೆದವು. ಶ್ರೀ ಕ್ಷೇತ್ರದ ಶ್ರೀ ಗಂಗಾಧರೇಶ್ವರ ಸ್ವಾಮಿಯನ್ನು ಅಲಂಕೃತಗೊಂಡಿದ್ದ ರಥದಲ್ಲಿ ಕೂರಿಸಲಾಗಿತ್ತು. ರಥೋತ್ಸವಕ್ಕೆ ಚಾಲನೆ ನೀಡುತ್ತಿದ್ದಂತೆ ನೆರೆದಿದ್ದ ಲಕ್ಷಾಂತರ ಭಕ್ತರು ರಥವನ್ನು ಎಳೆದರು. ಮಂಗಳ ವಾದ್ಯಗಳ ವಾದ್ಯದೊಂದಿಗೆ ರಥೋತ್ಸವ ಆರಂಭವಾಗುತ್ತಿದ್ದಂತೆ ಭಕ್ತರು ಹಣ್ಣು, ಜವನಗಳನನ್ನು ಅರ್ಪಿಸಿ ಭಕ್ತಿ ಭಾವವನ್ನು ಮೆರೆದರು. ರಥೋತ್ಸವಕ್ಕೆ ಚಾಲನೆ ಸಿಗುತ್ತಿದ್ದಂತೆ ಶ್ರೀ ಡಾ. ನಿರ್ಮಲಾನಂದನಾಥ ಸ್ವಾಮೀಜಿ ಅವರ ಅಡ್ಡ ಪಲ್ಲಕ್ಕಿ ಉತ್ಸವವೂ ಕೂಡ ಪ್ರಾರಂಭವಾಯಿತು. ಒಂದೆಡೆ ಭಕ್ತರು ರಥವನ್ನು ಎಳೆದು ಧನ್ಯರಾಗುತ್ತಿದ್ದರೆ ಇನ್ನೊಂದೆಡೆ ಸರ್ವಾಲಂಕಾರ ಭೂಷಿತರಾಗಿ ಚಿನ್ನದ ಕಿರೀಟವನ್ನು ಧರಿಸಿ ಪಲ್ಲಕ್ಕಿಯಲ್ಲಿ ಕುಳಿತು ಭಕ್ತಾದಿಗಳಿಗೆ ದರ್ಶನ ನೀಡುತ್ತಿದ್ದ ಶ್ರೀಗಳನ್ನು ನೋಡಿ ಕಣ್ತುಂಬಿಕೊಂಡರು. ಶ್ರೀಗಳು ಹಸನ್ಮುಖಿಯಾಗಿ ಎಲ್ಲರಿಗೂ ದರ್ಶನ ನೀಡಿದರು.

ರಥೋತ್ಸವ ಮತ್ತು ಅಡ್ಡ ಪಲ್ಲಕಿ ಉತ್ಸವ ರಥಬೀದಿಯಲ್ಲಿ ಸಂಚರಿಸಿ ರಥಬೀದಿ ದಕ್ಷಿಣ ದಿಕ್ಕಿನಲ್ಲಿರುವ ಗಣಪತಿ ದೇವಸ್ಥಾನದವರೆಗೆ ಚಲಿಸಿತು. ಶ್ರೀಗಣಪತಿಗೆ ಪೂಜೆ ಸಲ್ಲಿಸಿದ ನಂತರ ವಾಪಸ್ ರಥಬೀದಿಯಲ್ಲೇ ಬಂದ ರಥೋತ್ಸವ ಮೂಲ ಸ್ಥಾನದಲ್ಲಿ ನಿಂತಿತು. ಅಷ್ಟರಲ್ಲಾಗಲೇ ಬೆಳಕು ಮೂಡಿತ್ತು. ನೆರಿದ್ದಿದ್ದ ಲಕ್ಷಾಂತರ ಮಂದಿ ಭಕ್ತರ ನಡುವೆ ರಥೋತ್ಸವ ಬಹಳ ವಿಜೃಂಭಣೆಯಿಂದ ನೆರವೇರಿತು, ರಥೋತ್ಸವದ ಹಿನ್ನೆಲೆಯಲ್ಲಿ ಪೊಲೀಸ್ ಬಂದೂಬಸ್ತ್ ಅನ್ನು ಜಿಲ್ಲಾಡಳಿತ ಆಯೋಜಿಸಿತು.

## ರಥೋತ್ಸವಕ್ಕೆ ಜನಸಾಗರ

**ಆದಿಚುಂಚನಗಿರಿ ಜಾತ್ರಾ, ಮಹೋತ್ಸವಕ್ಕೆ ನಾಡಿನ ವಿವಿಧೆಡೆಗಳಿಂದ ಲಕ್ಷಾಂತರ ಮಂದಿ ಭಕ್ತರು ಶ್ರೀಕ್ಷೇತ್ರಕ್ಕೆ ಆಗಮಿಸಿದ್ದರು. ರಾತ್ರಿಯಿಡೀ ಸಹಸ್ರ ಸಹಸ್ರ ಸಂಖ್ಯೆಯಲ್ಲಿ ಆಗಮಿಸಿದ ಭಕ್ತರು ರಥದ ಬೀದಿ, ಕಲ್ಯಾಣಿ ಬೀದಿ ಸೇರಿದಂತೆ ಮಠದ ಬೆಟ್ಟದ ತಪ್ಪಲಿನ ಇಕ್ಕೆಲಗಳಲ್ಲಿ ಭಕ್ತರು ತುಂಬಿ ತುಳುಕಿತ್ತಿದ್ದರು. ಶ್ರೀರಂಗಪಟ್ಟಣ-ಬೀದರ್ ಹೆದ್ದಾರಿಯಲ್ಲಿರುವ ಕ್ಷೇತ್ರದ ಮುಖ್ಯದ್ವಾರದಿಂದ ತುಮಕೂರು ಹಾಗೂ ಮೈಸೂರು ಮಾರ್ಗಗಳ ಎರಡೂ ಬದಿಯಲ್ಲಿ ಕಿಲೋಮೀಟವರೆಗೆ ವಾಹನಗಳು ನಿಂತಿದ್ದವು. ಬೆಟ್ಟದ ಬಂಡೆಯ ಮೇಲೆ ಪ್ರದರ್ಶನಗೊಂಡ ವಿದ್ಯುತ್ ದೀಪಗಳ ಅಲಂಕೃತ ನೋಡುಗರನ್ನು ಆಕರ್ಷಿಸಲು ಕಾಣುತ್ತಿತ್ತು.**

## ಪುಷ್ಕರಣಿಯಲ್ಲಿ ತೆಪ್ಪೋತ್ಸವ

**ಆದಿಚುಂಚನಗಿರಿ ರಥೋತ್ಸವ ಮುನ್ನ ಗುರುವಾರ ರಾತ್ರಿ ಆದಿಚುಂಚನಗಿರಿಯ ಪುಷ್ಕರಣಿಯಲ್ಲಿ ತೆಪ್ಪೋತ್ಸವ ನಡೆಯಿತು. ಇದೇ ಸಂದರ್ಭದಲ್ಲಿ ಬೈರವೇಶ್ವರ ಸ್ವಾಮಿ ದ ದಸರಿಘಟ್ಟದ ಶ್ರೀ ಚೌಡೇಶ್ವರಿ ವಿಗ್ರಹಗಳನ್ನು ಪ್ರತಿಷ್ಠಾಪಿಸಲಾಗಿದ್ದು ಭೈರವಾಕ್ಯ ಶ್ರೀ ಬಾಲಗಂಗಾಧರನಾಥ ಸ್ವಾಮಿಗಳ ಪುತ್ಥಳಿಯನ್ನುಇಟ್ಟು ಶ್ರೀ ನಿರ್ಮಾಲಾನಂದ ನಾಥ ಮಹಾಸ್ವಾಮಿಜಿ ಸೇರಿದಂತೆ ತೆಪ್ಪೋತ್ಸವದಲ್ಲಿ ಭಾಗಿಯಾದರು.**



## ಅನ್ನಪ್ರಸಾದ ಕೇಂದ್ರಗಳಿಗೂ ಚಾಲನೆ

**ರಥೋತ್ಸವಕ್ಕೆ ಆಗಮಿಸಿದ ಲಕ್ಷಾಂತರ ಭಕ್ತರಿಗೆ ಊಟಕ್ಕೆ ಯಾವುದೇ ತೊಂದರೆ ಆಗದಂತೆ ಗಿರಿಯ ಐದಾರು ಕಡೆ ಊಟದ ವ್ಯವಸ್ಥೆಯನ್ನು ಮಾಡಲಾಗಿದ್ದು ಈ ಕೇಂದ್ರಗಳಿಗೆ ಶ್ರೀಗಳು ಅನ್ನಪ್ರಸಾದ ಕೇಂದ್ರಗಳಿಗೆ ಭೇಟಿ ನೀಡಿ ಚಾಲನೆ ನೀಡಿದರು.**

## ನುಡಿನಮನ

**ಚಾಮರಾಜನಗರದ ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಪ್ರಕಾಶ ಭವನದಲ್ಲಿ ದಿ ಪೂಜ್ಯ ಆದರಣೀಯ ರಾಜಯೋಗಿನಿ ಬ್ರಹ್ಮಾಕುಮಾರಿ ಗುಲ್ಜಾರ್ ದಾದೀಜೀಯವರ ಭಾವಚಿತ್ರಕ್ಕೆ ಭಾವಪೂರ್ಣ ಶ್ರದ್ಧಾಸುಮನ ನುಡಿನಮನಗಳನ್ನು ಅರ್ಪಿಸಲಾಯಿತು. ಪುಷ್ಪ ನಮನವನ್ನು ಸಲ್ಲಿಸಿ ಮಾತನಾಡಿದ ಸಂಚಾಲಕಿ ರಾಜಯೋಗಿನಿ ಬ್ರಹ್ಮಾಕುಮಾರಿ ದಾನೇಶ್ವರೀಜೀ, ದಾದೀಜೀಯವರು ಸರಳ ಶಾಂತ ಸ್ವರೂಪದ ವ್ಯಕ್ತಿತ್ವ ಉಳ್ಳವರಾಗಿದ್ದರು. ಚಿಕ್ಕ ವಯಸ್ಸಿನಲ್ಲೇ ಓ ಮಂಡಳಿ ಸೇರಿದ ದಾದೀಜೀಯವರ ಆಧ್ಯಾತ್ಮಿಕ ಸಾಧನೆರ ಜೀವನ ಅವರ ಉತ್ತಮ ವ್ಯಕ್ತಿತ್ವ ಪರಮಾತ್ಮನ ಮಾಧ್ಯಮವಾಗಿ ಇಡೀ ವಿಶ್ವದಲ್ಲೇ ಈಶ್ವರಿಯ ವಿಶ್ವವಿದ್ಯಾಲಯವನ್ನು ವಟ ವೃಕ್ಷದಂತೆ ಬೆಳೆಯಲು ಸಹಕಾರಿಯಾಯಿತು. ಅವರು ಹೆಚ್ಚು ವಿದ್ಯಾಭ್ಯಾಸ ಮಾಡಲಿಲ್ಲವಾದವರು ಇವರ ಅನರ್ಘ ಸಾಧನೆ ಲಕ್ಷಾಂತರ ಬ್ರಹ್ಮಾಕುಮಾರ ಬ್ರಹ್ಮಾಕುಮಾರಿಯರ ಆಧ್ಯಾತ್ಮಿಕ ಸಾಧನೆಗೆ ದೀವಿಗೆಯಾದರು ಎಂದರು. ಗೃಹಸ್ಥಿಗಳೂ ಸಹ ಕಮಲ ಪುಷ್ಪ ಸಮಾನ ಜೀವನ ನಡೆಸಲು ರಾಜಯೋಗ ಶಿಕ್ಷಣ ದಿಂದ ಸಾಧ್ಯ ಎಂದು ತೋರಿಸಿಕೊಟ್ಟರು ಎಂದರು. ಕಾರ್ಯಕ್ರಮದಲ್ಲಿ ಓಂ ಶಾಂತಿ ನ್ಯೂಸ್ ಸರ್ವಿಸ್ ನ ಬಿಕೆ ಆರಾಧ್ಯ ಆರೋಗ್ಯ ಇಲಾಖೆಯ ಗೀತಾ ನಗರಸಭೆಯ ಪುಷ್ಪ ಶಿರಸ್ತೇದಾರ್ ವಿನೋದ್ ಪುಟ್ಟ ಶೇಖರ ಮೂರ್ತಿ ಶೋಭಾ ಸಿದ್ದಯ್ಯ ಮರಗತ್ತಕ್ಕ ವಿದ್ಯಾ ನಾಗರತ್ನ ನಾರಾಯಣ ಶ್ರೀನಿವಾಸ್ ಪೂಜಾ ಪ್ರಮಿಳಾ ಊದಗಟ್ಟೆ ಹಾಜರಿದ್ದರು.**



## "ಶುಲ್ಕ ಮರುಪಾವತಿ" ಅರ್ಜಿ ಸಲ್ಲಿಕೆಯ ಅವಧಿ ವಿಸ್ತರಣೆ

**ಮೈಸೂರು:** 2024–2025 ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಮೆಟ್ರಿಕ್ ನಂತರದ ಕೋರ್ಸುಗಳಾದ ಸ್ನಾತಕೋತ್ತರ ಪದವಿ, ವೃತ್ತಿಪರ ಪದವಿ ಮತ್ತು ವೃತ್ತಿಪರ ಸ್ನಾತ್ತಕೋತ್ತರ ಪದವಿ ಕೋರ್ಸುಗಳ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ–1 ರ ಅಲೆಮಾರಿ/ಅರೆ ಅಲೆಮಾರಿ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ "ಶುಲ್ಕ ಮರುಪಾವತಿ" ಕಾರ್ಯಕ್ರಮದ ಸೌಲಭ್ಯಕ್ಕೆ ಅರ್ಜಿ ಸಲ್ಲಿಸುವ ಅವಧಿಯನ್ನು ಮಾರ್ಚ್ 30 ರವರೆಗೆ ವಿಸ್ತರಿಸಲಾಗಿದೆ. ಅರ್ಹ ಅಭ್ಯರ್ಥಿಗಳು ಆನ್ಲೈನ್ https://ssp.postmatric.karnataka.gov.in/ ಮೂಲಕ ಅರ್ಜಿ ಸಲ್ಲಿಸಬಹುದಾಗಿದ್ದು, ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ ವಿಳಾಸ www.https:bcwd.karnataka.gov.in ವೆಬ್ಸೈಟ್ ಅನ್ನು ಸಂಪರ್ಕಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಇಲಾಖಾ ಸಹಾಯವಾಣಿ ದೂ.ಸಂ. 8050770005, ಇ–ಮೇಲ್ bcwdhelpline@gmail.com ಹಾಗೂ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ ಇಮೇಲ್ postmatrichelp@karanataka.gov.in ದೂ.ಸಂ: 1902 ನ್ನು ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೈಸೂರು ಜಿಲ್ಲೆಯ ಜಿಲ್ಲಾ ಅಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೆಟ್ರಿಕ್ ನಂತರದ ಶುಲ್ಕ ವಿನಾಯಿತಿಗೆ ಅರ್ಜಿ ಸಲ್ಲಿಕೆಯ ಅವಧಿ ವಿಸ್ತರಣೆ

**ಮೈಸೂರು:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಮೆಟ್ರಿಕ್ ನಂತರದ ಕೋರ್ಸ್‌ಗಳಾದ ಸ್ನಾತಕೋತ್ತರ ಪದವಿ, ವೃತ್ತಿಪರ ಪದವಿ ಮತ್ತು ವೃತ್ತಿಪರ ಸ್ನಾತಕೋತ್ತರ ಪದವಿ ಹಾಗೂ ನರ್ಸಿಂಗ್ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ 2024–25ನೇ ಸಾಲಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ "ಶುಲ್ಕ ವಿನಾಯಿತಿ" ಸೌಲಭ್ಯಕ್ಕಾಗಿ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಕೆ ಅವಧಿಯನ್ನು ಮಾರ್ಚ್ 31 ರವರೆಗೆ ವಿಸ್ತರಿಸಲಾಗಿದೆ. ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು https://ssp.postmatric.karnataka.gov.in ವೆಬ್ಸೈಟ್ ಮೂಲಕ ಸಲ್ಲಿಸಬೇಕು. ಕಾರ್ಯಕ್ರಮಗಳ ವಿವರ ಅರ್ಹತೆ ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿ ವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ https://bcwd.karnataka.gov.in ವೆಬ್ಸೈಟ್ ಅಥವಾ ಸಹಾಯವಾಣಿ ಸಂ:8050770005, ಇಮೇಲ್ ವಿಳಾಸ bcwdhelpline@gmail.com ಅಥವಾ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ದೂ.ಸಂ: 1902, ಇಮೇಲ್ ವಿಳಾಸ postmatrichelp@karnataka.gov.inಅನ್ನು ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ತಿಳಿಸಿದ್ದಾರೆ.

## ಧರ್ಮರಾಜ್ಯ ಸ್ಥಾಪನೆ ಪೌರಾಣಿಕ ನಾಟಕ ಪ್ರದರ್ಶನ

**ತಿಪಟೂರು:** ನಗರದ ಉಪವಿಭಾಗ ಪೋಲೀಸ್ ಇಲಾಖೆಯ ವತಿಯಿಂದ ಶ್ರೀ ಮಾರುತಿ ಕೃಪಾಪೋಷಿತ ನಾಟಕ ಮಂಡಳಿವತಿಯಿಂದ ನಗರದ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜು ಆವರಣದಲ್ಲಿ ಮಾರ್ಚ್ 15 ಶನಿವಾರದಂದು ರಾತ್ರಿ 8.30 ಕ್ಕೆ ದಿ.ಪುಟ್ಟಸ್ವಾಮಯ್ಯ ವಿರಚಿತ ಕುರುಕ್ಷೇತ್ರ ಅಥವಾ ಧರ್ಮರಾಜ್ಯ ಸ್ಥಾಪನೆ ಎಂಬ ಪೌರಾಣಿಕ ನಾಟಕವನ್ನು ಪ್ರದರ್ಶನ ನೀಡಲಿದ್ದಾರೆ. ಹಾಗೂ ವಾದ್ಯಗೋಷ್ಠಿ ವೃಂದದವರಾಗಿ ನಟರಾಜು ಕ್ಯಾಸಿಯೋ, ಮಂಜುನಾಥ್ ತಬಲ, ನವೀನ್ ಕ್ಲಾರಿಯೋನೆಟ್ ಮತ್ತು ಹನುಮಂತರಾಜು ಕಡೆಯಿಂದ ಎಲ್.ಇ.ಡಿ. ಸ್ಕೀನ್ ಡ್ರಾಮಾ ಸೀನರಿ ವ್ಯವಸ್ಥೆ ಮಾಡಲಾಗಿದೆ.

## ಗ್ರಾಮ ಪಂಚಾಯಿತಿಗಳಲ್ಲಿ ಗ್ರಾಮ ಒನ್ ಕೇಂದ್ರ ತೆರೆಯಲು ಅರ್ಜಿ

**ಚಾಮರಾಜನಗರ:** ಜಿಲ್ಲೆಯ ಹನೂರು ತಾಲೂಕಿನ ಮಾರ್ಟಳ್ಳಿ ಹಾಗೂ ಸೂಳೇರಿಪಾಳ್ಯ ಗ್ರಾಮ ಪಂಚಾಯಿತಿ ಮತ್ತು ಗುಂಡ್ಲುಪೇಟೆ ತಾಲೂಕಿನ ಕೂತನೂರು ಗ್ರಾಮ ಪಂಚಾಯಿತಿಯಲ್ಲಿ ತಲಾ ಒಂದು ಗ್ರಾಮ ಒನ್ ಕೇಂದ್ರಗಳನ್ನು ತೆರೆಯಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ಅರ್ಜಿಗಳನ್ನು ವೆಬ್‌ಸೈಟ್ https://kal-mys.gramaone.karnataka.gov.in ಮೂಲಕ ಮಾರ್ಚ್ 15ರೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ 9148712473 ಸಂಪರ್ಕಿಸಬಹುದು.

## ವಿದ್ಯುತ್ ಕಂಬಗಳಲ್ಲಿರುವ ಡಿಶ್ ಕೇಬಲ್‌ಗಳು ನಿಗದಿತ ಮೊತ್ತ ಪಾವತಿಸಲು ಸೂಚನೆ

**ಚಾಮರಾಜನಗರ:** ಚಾಮರಾಜನಗರ ತಾಲೂಕು ವ್ಯಾಪ್ತಿಯಲ್ಲಿ ಡಿಶ್ ಕೇಬಲ್ ಆಪರೇಟರ್‌ಗಳು ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದ ವಿದ್ಯುತ್ ಕಂಬಗಳನ್ನು ಬಳಸಿಕೊಂಡಿರುವ ಡಿಶ್ ಕೇಬಲ್‌ಗಳಿಗೆ ನಿಗಮದ ನಿಯಮಾನುಸಾರ ನಿಗದಿಗೊಳಿಸಿದ ಮೊತ್ತವನ್ನು ಪಾವತಿಸಲು ಚೆಸ್ಕಾಂ ಸೂಚಿಸಿದೆ. ಪ್ರತಿ ವಿದ್ಯುತ್ ಕಂಬಕ್ಕೆ ವಾರ್ಷಿಕವಾಗಿ ನಗರ ವ್ಯಾಪ್ತಿಯಲ್ಲಿ 150 ರೂ. ಮತ್ತು ಗ್ರಾಮಾಂತರ ವ್ಯಾಪ್ತಿಯಲ್ಲಿ 100 ರೂ. ರಂತೆ 2021–22ನೇ ಸಾಲಿನಿಂದ 2024–25ನೇ ಸಾಲಿನವರೆಗಿನ ಮೊತ್ತವನ್ನು ನಿಗಮದ ಉಪವಿಭಾಗ ಕಚೇರಿಗೆ 7 ದಿನದೊಳಗೆ ಪಾವತಿಸಬೇಕು. ತಪ್ಪಿದ್ದಲ್ಲಿ ಯಾವುದೇ ಮುನ್ಸೂಚನೆ ನೀಡದೆ ವಿದ್ಯುತ್ ಕಂಬದಲ್ಲಿರುವ ಡಿಶ್ ಕೇಬಲ್ ಅನ್ನು ತೆರವುಗೊಳಿಸಲಾಗುವುದು ಎಂದು ನಿಗಮದ ಸಹಾಯಕ ಕಾರ್ಯಪಾಲಕ ಎಂಜನಿಯರ್ ಕೋರಿದ್ದಾರೆ.

### ಸಾಮಾಜಿಕ ಭದ್ರತಾ ಪಿಂಚಣಿ ಖಜಾನೆ 2

# ಡಿಬಿಟಿ ಇಂಟಿಗ್ರೇಷನ್ ಮೂಲಕ ಪಾವತಿ

**ಬೆಂಗಳೂರು:** ಪ್ರಸ್ತುತ ಸಾಮಾಜಿಕ ಭದ್ರತಾ ಪಿಂಚಣಿಗಳನ್ನು ಖಜಾನೆ 2 ಡಿಬಿಟಿ ಇಂಟಿಗ್ರೇಷನ್ ಮೂಲಕವೇ ಪಾವತಿ ಮಾಡಲಾಗುತ್ತಿದೆ ಇದು 38 ವ್ಯಾಲಿಡೇಷನ್ ಗೆ ಒಳಪಡುವುದರಿಂದ ಒಂದಕ್ಕಿಂತ ಹೆಚ್ಚು ಬಾರಿ ಪಾವತಿಯಾಗುವುದಿಲ್ಲ ಎಂದು ಮುಖ್ಯಮಂತ್ರಿಗಳ ಪರವಾಗಿ ಸಣ್ಣ ನೀರಾವರಿ ಹಾಗೂ ವಿಜ್ಞಾನ ತಂತ್ರಜ್ಞಾನ ಸಚಿವರು ಹಾಗೂ ಸಭಾನಾಯಕರಾದ ಎನ್.ಎಸ್. ಭೋಸರಾಜು ಅವರು ತಿಳಿಸಿದರು.

ಇಂದು ವಿಧಾನ ಪರಿಷತ್ತಿನ ಪ್ರಶ್ನೋತ್ತರ ಕಲಾಪದ ವೇಳೆ ಪರಿಷತ್ ಸದಸ್ಯ ಡಿ.ಎಸ್. ಅರುಣ್ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಸಚಿವರು, ವಿವಿಧ ಯೋಜನೆಗಳಡಿಯಲ್ಲಿ ಸಂಬಂಧಪಟ್ಟ ಇಲಾಖೆಗಳು ಆಯ್ಕೆಗೊಂಡ ಫಲಾನುಭವಿಗಳಿಗೆ ವಿವರಗಳನ್ನು ಅಗತ್ಯ ಪರಿಶೀಲನೆಯ ನಂತರ ಇ-ಆಡಳಿತ ಇಲಾಖೆಯ ಡಿಬಿಟಿ ಪೋರ್ಟಲ್ ಮೂಲಕ ಪಾವತಿಗಾಗಿ ಖಜಾನೆ – 2 ಕ್ಕೆ ಬಿಲ್ಲು ಸಲ್ಲಿಸುತ್ತಾರೆ. ಇಲಾಖಾ ಡಿ.ಡಿ.ಓಗಳು ಖಜಾನೆ – 2 ರಲ್ಲಿ ಸೃಜಿಸಿ ಖಜಾನೆಗೆ ಸಲ್ಲಿಸಲಾದ ಬಿಲ್ಲುಗಳನ್ನು ಪರಿಶೀಲಿಸಿ ತೀರ್ಣಗೊಳಿಸಲಾಗುತ್ತದೆ. ಒಂದು ಯೋಜನೆಯ ಫಲಾನುಭವಿಗೆ ಒಂದೇ ಮಾಹೆಗೆ ಒಂದಕ್ಕಿಂತ ಹೆಚ್ಚು ಬಾರಿಗೆ ಪಾವತಿಯಾಗದಂತೆ ಕ್ರಮ ವಹಿಸಲಾಗಿದೆ. ಖಜಾನೆ ? 2 ತಂತ್ರಾಂಶದ ಮೂಲಕ ಇಲಾಖೆಯು ಸಾರ್ವಜನಿಕರು / ನೌಕರರಿಗೆ ಮತ್ತು ಇತರೆ ವ್ಯಕ್ತಿಗಳಿಗೆ ಯಾವುದೇ ಮೊತ್ತವನ್ನು ಉಚಿತವಾಗಿ ಪಾವತಿಸುತ್ತಿಲ್ಲ ಎಂದು ತಿಳಿಸಿದರು.

ಸಾಮಾಜಿಕ ಭದ್ರತಾ ಪಿಂಚಣಿಗಳನ್ನು ನಾಡಕಛೇರಿಗಳಲ್ಲಿ ಮಂಜೂರು ಮಾಡುವ ಸಂದರ್ಭದಲ್ಲಿ ಒಂದಕ್ಕಿಂತ ಹೆಚ್ಚು ಫಲಾನುಭವಿಗಳಿಗೆ ಒಂದೇ ಬ್ಯಾಂಕ್ ಖಾತೆ ಸಂಖ್ಯೆಯನ್ನು ನಮೂದಿಸಲಾಗಿದ್ದ ಕಾರಣ ಒಂದೇ ಖಾತೆಗೆ ಹಲವು ಪಿಂಚಣಿದಾರರ ಪಿಂಚಣಿ ಖಜಾನೆ ಮುಖಾಂತರ ಜಮೆ ಆಗಿರುವುದನ್ನು ದಿನಾಂಕ: 27-03-2019 ರಂದು ನಡೆದ ಸಭೆಯಲ್ಲಿ ಗಮನಿಸಲಾಗಿದೆ. ಈ ರೀತಿ ವಿವಿಧ ಜಿಲ್ಲೆಗಳ ಒಟ್ಟು 7371 ಫಲಾನುಭವಿಗಳಿಗೆ ಪಾವತಿಯಾಗಿದ್ದ ಹೆಚ್ಚುವರಿ ಮೊತ್ತ ರೂ 3,01,31,291/– ಗಳನ್ನು ವಸೂಲಿ ಮಾಡಿ ಸಂಚಿತ ನಿಧಿಗೆ ಜಮೆ ಮಾಡಲಾಗಿದೆ. ಇದಲ್ಲದೆ ಖಜಾನೆ ? 1 ರಿಂದ ಖಜಾನೆ ? 2 ಕ್ಕೆ ಪಿಂಚಣಿ ದಾಖಲೆಗಳ ವರ್ಗಾವಣೆ ಸಂದರ್ಭದಲ್ಲಿ ತುಮಕೂರು ಜಿಲ್ಲೆಗೆ ಸಂಬಂಧಿಸಿದ 44964 ಫಲಾನುಭವಿಗಳಿಗೆ ಅಕ್ಟೋಬರ್ 2018 ರಿಂದ ಡಿಸೆಂಬರ್ 2018ರ ವರೆಗೆ ಖಜಾನೆ – 1 ಮತ್ತು ಖಜಾನೆ – 2 ಎರಡೂ ಕಡೆ ಪಾವತಿಯಾಗಿದ್ದು, ಅಂತಹ ಹೆಚ್ಚುವರಿ ಪಾವತಿಗಳನ್ನು ಸದರಿ ಫಲಾನುಭವಿಗಳಿಗೆ ಮುಂದಿನ ಮೂರು ತಿಂಗಳುಗಳ ಪಿಂಚಣಿ ಪಾವತಿಯನ್ನು ಸ್ಥಗಿತಗೊಳಿಸುವ ಮೂಲಕ ಸಂಪೂರ್ಣವಾಗಿ ವಸೂಲಿ ಮಾಡಲಾಗಿರುತ್ತದೆ ಎಂದು ತಿಳಿಸಿದರು. ಯಾವುದೇ ಯೋಜನೆಯ ಫಲಾನುಭವಿಗಳನ್ನು ನಿಗದಿತ ಮಾನದಂಡಗಳ ಪ್ರಕಾರ ಆಯ್ಕೆ ಮಾಡುವ ಹಾಗೂ ಮಂಜೂರಾತಿ ನೀಡುವ ಪ್ರಕ್ರಿಯೆ ಸಂಬಂಧಪಟ್ಟ ಇಲಾಖೆ ಹಂತದಲ್ಲಿಯೇ ನಡೆಯುತ್ತದೆ. ಈ ರೀತಿ ಆಯ್ಕೆಗೊಂಡ ಫಲಾನುಭವಿಗಳ ವಿವರಗಳನ್ನು ಅಗತ್ಯ ಪರಿಶೀಲನೆಯ ನಂತರ ಇ–ಆಡಳಿತ ಇಲಾಖೆಯ ಡಿ.ಬಿ.ಟಿ ಪೋರ್ಟಲ್ ಮೂಲಕ ಪಾವತಿಗಾಗಿ ಖಜಾನೆ ? 2ಕ್ಕೆ ರವಾನಿಸಲಾಗುತ್ತದೆ. ಆದ್ದರಿಂದ ಅರ್ಹರಲ್ಲದ ಫಲಾನುಭವಿಗಳಿಗೆ ಹಣ ಪಾವತಿಸುವ ಪ್ರಮೇಯ ಉದ್ಭವಿಸುವುದಿಲ್ಲ ಎಂದು ತಿಳಿಸಿದರು.

## ಕಾಗದ ಪತ್ರಗಳ ಮಂಡನೆ

**ಬೆಂಗಳೂರು:** ಇಂದು ವಿಧಾನಸಭೆಯ ಅಧಿವೇಶನದ ಸಮಯದಲ್ಲಿ ವಿಧಾನಮಂಡಲದ ಜಂಟಿ ಪರಿಶೀಲನಾ ಸಮಿತಿಯ ಶಿಫಾರಸ್ಸಿನಂತೆ, ಕರ್ನಾಟಕ ವಿಧಾನಸಭೆಯಿಂದ ತಿದ್ದುಪಡಿಗಳೊಂದಿಗೆ ಅಂಗೀಕಾರವಾದ ರೂಪದಲ್ಲಿ ಮತ್ತು ಕರ್ನಾಟಕ ವಿಧಾನ ಪರಿಷತ್ತಿನಿಂದ ತಿದ್ದುಪಡಿಯೊಂದಿಗೆ ಅಂಗೀಕಾರವಾದ ರೂಪದಲ್ಲಿರುವ 2024ನೇ ಸಾಲಿನ ಗ್ರೇಟರ್ ಬೆಂಗಳೂರು ಆಡಳಿತ ವಿಧೇಯಕವನ್ನು (2024ರ ವಿಧಾನಸಭೆಯ ವಿಧೇಯಕ ಸಂಖ್ಯೆ–34) ಕಾಗದ ಪತ್ರವನ್ನು ವಿಧಾನಸಭೆಯ ಕಾರ್ಯದರ್ಶಿಗಳಾದ ಎಂ.ಕೆ.ವಿಶಾಲಾಕ್ಷಿ ಅವರು ಸದನದಲ್ಲಿ ಮಂಡಿಸಿದರು.

**ವಿಧಾನಸಭೆಯ ಉಪಸಭಾಧ್ಯಕ್ಷರುಗಳಿಂದ ವರದಿ ಒಪ್ಪಿಸುವುದು:** ರುದ್ರಪ್ಪ ಮಾನಪ್ಪ ಲಮಾಣಿ, ವಿಧಾನಸಭೆಯ ಉಪ ಸಭಾಧ್ಯಕ್ಷರು ಹಾಗೂ ಅಧ್ಯಕ್ಷರು, ಕರ್ನಾಟಕ ವಿಧಾನಸಭೆಯ ಸದಸ್ಯರುಗಳ ಖಾಸಗಿ ವಿಧೇಯಕಗಳ ಮತ್ತು ನಿರ್ಣಯಗಳ ಸಮಿತಿ ಇವರು ಕರ್ನಾಟಕ ವಿಧಾನಸಭೆಯ ಸದಸ್ಯರುಗಳು ಖಾಸಗಿ ವಿಧೇಯಕಗಳ ಮತ್ತು ನಿರ್ಣಯಗಳ ಸಮಿತಿಯ 2024–25ನೇ ಸಾಲಿನ ಐದನೇ ವರದಿಯನ್ನು ವಿಧಾನಸಭೆಯಲ್ಲಿ ಒಪ್ಪಿಸಿದರು.

# ಯುರೋಕಿಡ್ಸ್‌ನಲ್ಲಿ ವಾರ್ಷಿಕೋತ್ಸವ




**ಮೈಸೂರು:** ಮೈಸೂರಿನ ಆಲನಹಳ್ಳಿಯಲ್ಲಿರುವ ಡಾಕ್ಟರ್ಸ್‌ಕಾರ್ನರ್‌ನಯುರೋಕಿಡ್ಸ್ ಪೂರ್ವ ಶಾಲೆಯಲ್ಲಿವಾರ್ಷಿಕೋತ್ಸವ ಹಾಗೂ ಮಹಿಳಾ ದಿನಾಚರಣೆಯನ್ನು ಜಗನ್ಮೋಹನ ಅರಮನೆಯಲ್ಲಿ ಏರ್ಪಡಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಮಹಾಜನ ಪ್ರಥಮದರ್ಜೆಕಾಲೇಜಿನ ಪ್ರಾಧ್ಯಾಪಕರು ಹಾಗೂ ಲೇಖಕಿಯಾದಡಾ. ವಿನೋದಮ್ಮರವರುಜ್ಯೋತಿ ಬೆಳಗಿಸಿ ಮಾತನಾಡುತ್ತಾ ಪೋಷಕರು ಮಕ್ಕಳ ಕಲಿಕೆಯಲ್ಲಿ ಪ್ರೋತ್ಸಾಹ ತುಂಬುವ ಕೆಲಸ ಮಾಡಬೇಕುಜೊತೆಗೆ ಶಾಲೆಗಳಲ್ಲಿ ಶಿಕ್ಷಕರು ವಿದ್ಯಾರ್ಥಿಗಳ ಮನಸ್ಸನ್ನು ಅರಿತು ಪಾಠ ಹೇಳಿಕೊಟ್ಟು ವಿದ್ಯೆ ನೀಡಬೇಕೆಂದರು.

ಮಹಾಭಾರತದಲ್ಲಿ ಹೇಗೆ ಸುಭದ್ರೆಯಗ 'ರ್ಭದಲ್ಲಿರುವಾಗಲೇಅಭಿಮನ್ಯುಚಕ್ರವ್ಯೂಹ ಭೇದಿಸಿರುವುದನ್ನು ಶ್ರೀ ಕೃಷ್ಣನಿಂದಕಲಿತನೋ ಹಾಗೇಯೇ ಮಗುವು ತನ್ನತಾಯಿಯಗ ರ್ಭದಲ್ಲಿರುವಾಗಲೇಕಲಿಯಲುಆರಂಭಿಸ 'ತ್ತದೆಎಂದರು. ಮಗುವು ಜನನ ನಂತರ 3-4 ವರ್ಷಗಳ ಕಾಲ ಮನೆಯಲ್ಲಿಯೇ ಬೆಳೆಯುವುದರಿಂದ ಅಲ್ಲಿತಾಯಿಯೇ ಮೊದಲ ಶಿಕ್ಷಕಿ ಹಾಗೂ ಪೋಷಕಿಯಾಗಿರುತ್ತಾಳೆ ಎಂದು ಅಭಿಪ್ರಾಯಿಸಿದರು. ಮಕ್ಕಳಉತ್ಸಾಹ ಮತ್ತು ಕ್ರಿಯಾಶೀಲತೆಗೆ ಪೂರ್ವ ಪ್ರಾಥಮಿಕ ಶಾಲೆಗಳೇ ಅಡಿಪಾಯವಾಗಿರುತ್ತದೆ. ಇದನ್ನಅರಿತು ಪೋಷಕರು ಸರಿಯಾದ ಸಮಯಕ್ಕೆ ಮಕ್ಕಳನ್ನು ಶಾಲೆಗಳಿಗೆ ಸೇರಿಸುವುದುಅಗತ್ಯವಾಗಿದೆಎ ಂದರಲ್ಲದೆ ಮಹಿಳೆಯರು ಸಮಾಜದಎಲ್ಲಾ ಕ್ಷೇತ್ರಗಳಲ್ಲೂ ಮುಂದೆ ಬರಬೇಕು, ಹೆಣ್ಣು ಮಕ್ಕಳು ಶಿಕ್ಷಣವನ್ನು ಕಲಿತಾಗಕುಟುಂಬ ಮತ್ತುದೇಶ ಮುಂದುವರಿಯಲು ನೆರವಾಗುತ್ತದೆ ಇದಕ್ಕೆ ಸಾಕ್ಷಿಯಾಗಿ ಅನೇಕ ಜನ ಹೆಸರು ಮಾಡಿದ, ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಮಹಿಳೆಯರು ನಮ್ಮ ಮುಂದಿದ್ದಾರೆಂದು ತಿಳಿಸಿದರು. ಅಧ್ಯಕ್ಷತೆ ವಹಿಸಿ ಮಾತನಾಡಿದ ಯುರೋಕಿಡ್ಸ್‌ನ ಮಾಲೀಕರಾದ ಹೆಚ್.ಸಿ.ಕೃಷ್ಣೇಗೌಡ ರವರು ಮಾತನಾಡಿ ಇಂದಿನ ಮಕ್ಕಳೇ ನಾಳೆಯ ದೇಶದ ಪ್ರಜೆಗಳು ಆದರಿಂದ ಪ್ರತಿಯೊಬ್ಬರು ಶಿಕ್ಷಣವನ್ನು ಕಲಿತು ವಿದ್ಯಾವಂತರಾಗಿಜೀವನ ನಡೆಸಬೇಕೆಂದು ಹೇಳಿದರು. ವೇದಿಕೆಯಲ್ಲಿ ಮುಖ್ಯ ಶಿಕ್ಷಕಿ ಚೈತ್ರಾ, ಯುರೋಕಿಡ್ಸ್‌ನ ಶ್ರೀಮತಿ ಶಿಲ್ಪಾ ಕೃಷ್ಣೇಗೌಡರವರು ಉಪಸ್ಥಿತರಿದ್ದರು. ವಿದ್ಯಾರ್ಥಿ ಸೂರ್ಯಎಸ್ ವಂದನಾರ್ಪಣೆ ಸಲ್ಲಿಸಿದರೆ, ನರ್ಸರಿ ವಿದ್ಯಾರ್ಥಿ ಮಹತಿ ಎಂ ಪುಟ್ಟ ಪ್ರವಾಸದ ಅನುಭವಗಳನ್ನು ಹಂಚಿಕೊಂಡರು.ವೇದಿಕೆ ಕಾರ್ಯಕ್ರಮದ ನಂತರಯುರೋಕಿಡ್ಸ್‌ನ ಮಕ್ಕಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಯಶಸ್ವಿಯಾಗಿ ನೆರವೇರಿತು.

# ಸಂಜೆ ಟಿಪ್ಸ್

## ಕೈಜೆನ್ ಇನ್ಸ್ಟಿಟ್ಯೂಟ್ ಇಂಡಿಯಾ ಮತ್ತು AFCOM ಹೋಲ್ಡಿಂಗ್ಸ್ ಆಪರೇಶನಲ್ ಎಕ್ಸಲೆನ್ಸ್ ಅನ್ನು ಚಾಲನೆ ಮಾಡಲು ಪಾಲುದಾರಿಕೆ

ಲೀನ್ ಮತ್ತು ಕೈಜೆನ್ ವಿಧಾನಗಳಲ್ಲಿ ಪರಿಣತಿ ಹೊಂದಿರುವ ಪ್ರಮುಖ ಸಲಹಾ ಸಂಸ್ಥೆಯಾದ ಕೈಜೆನ್ ಇನ್ಸ್ಟಿಟ್ಯೂಟ್ ಇಂಡಿಯಾ, ಕಾರ್ಯಾಚರಣೆಯ ದಕ್ಷತೆಯನ್ನು ಹೆಚ್ಚಿಸಲು ಮತ್ತು ನಿರಂತರ ಸುಧಾರಣೆಯ ಸಂಸ್ಕೃತಿಯನ್ನು ಹುದುಗಿಸಲು ಂಈಅಔಒ ಹೋಲ್ಡಿಂಗ್ಸ್ ಲಿಮಿಟೆಡ್‌ನೊಂದಿಗೆ ಕಾರ್ಯತಂತ್ರದ ಪಾಲುದಾರಿಕೆಯನ್ನು ಘೋಷಿಸಿದೆ. ಈ ಸಹಯೋಗವು ಕೈಜೆನ್ ತತ್ವಗಳನ್ನು AFCOMನ ಕಾರ್ಯಾಚರಣೆಗಳಲ್ಲಿ ಸಂಯೋಜಿಸುವ ಗುರಿಯನ್ನು ಹೊಂದಿದೆ, ಸುವ್ಯವಸ್ಥಿತ ಪ್ರಕ್ರಿಯೆಗಳು, ವರ್ಧಿತ ಉತ್ಪಾದಕತೆ ಮತ್ತು ದೀರ್ಘಕಾಲೀನ ವ್ಯವಹಾರ ಸ್ಥಿತಿಸ್ಥಾಪಕತ್ವವನ್ನು ಖಚಿತಪಡಿಸುತ್ತದೆ. ಕೈಜೆನ್ ಇನ್ಸ್ಟಿಟ್ಯೂಟ್ ಇಂಡಿಯಾ ಸಂಸ್ಥೆಗಳು ತ್ಯಾಜ್ಯವನ್ನು ತೆಗೆದುಹಾಕುವ ಮೂಲಕ, ಕೆಲಸದ ಹರಿವುಗಳನ್ನು ಉತ್ತಮಗೊಳಿಸುವ ಮೂಲಕ ಮತ್ತು ಶ್ರೇಷ್ಠತೆ-ಚಾಲಿತ ಮನಸ್ಥಿತಿಯನ್ನು ಬೆಳೆಸುವ ಮೂಲಕ ಸುಸ್ಥಿರ ಬೆಳವಣಿಗೆಯನ್ನು ಸಾಧಿಸಲು ಸಹಾಯ ಮಾಡುವಲ್ಲಿ ಹೆಸರುವಾಸಿಯಾಗಿದೆ. ಕೈಗಾರಿಕೆಗಳಾದ್ಯಂತ ಬಲವಾದ ಉಪಸ್ಥಿತಿಯೊಂದಿಗೆ, ಸಹ-ಸಂಸ್ಥಾಪಕ ಮತ್ತು ಜಂಟಿ ವ್ಯವಸ್ಥಾಪಕ ನಿರ್ದೇಶಕರಾದ ಜಯಂತ್ ಮೂರ್ತಿ ಅವರ ನೇತೃತ್ವದಲ್ಲಿ ಸಂಸ್ಥೆಯು ಭಾರತದಾದ್ಯಂತ ವ್ಯವಹಾರ ರೂಪಾಂತರದಲ್ಲಿ ಪ್ರಮುಖ ಪಾತ್ರ ವಹಿಸಿದೆ. ಲಾಜಿಸ್ಟಿಕ್ಸ್ ಮತ್ತು ಸರಕು ಪರಿಹಾರಗಳಲ್ಲಿ ಪ್ರಮುಖ ಪಾತ್ರ ವಹಿಸುವ AFCOM ಹೋಲ್ಡಿಂಗ್ಸ್ ಲಿಮಿಟೆಡ್, ನಾವೀನ್ಯತೆ ಮತ್ತು ಕಾರ್ಯಾಚರಣೆಯ ಶ್ರೇಷ್ಠತೆಯ ಮೂಲಕ ವಿಶ್ವ ದರ್ಜೆಯ ಸೇವೆಗಳನ್ನು ತಲುಪಿಸಲು ಬದ್ಧವಾಗಿದೆ.

## ನಿಮಗಿದು ಗೊತ್ತೇ?

ಎಂ. ವೆಂಕಟೇಶ್ ಶೇಷಾದ್ರಿ

65.ಮಲೈ ಮಹದೇಶ್ವರ ಬೆಟ್ಟವು ಯಾವ ಜಿಲ್ಲೆಯಲ್ಲಿದೆ?

[illegible]

## ನುಗ್ಗೆಕಾಯಿ ಸಾಂಬಾರು

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

5-7ಡ್ರಮ್‌ಸ್ಟಿಕ್,ಮೃದು, 2ಮಧ್ಯಮ ಗಾತ್ರದಈರುಳ್ಳಿ,ಕತ್ತರಿಸಿದ್ದು, 1ಮಧ್ಯಮ ಗಾತ್ರದಟೊಮೆಟೊ,ಕತ್ತರಿಸಿದ್ದು, 1ಟೀಸ್ಪೂನ್‌ಶುಂಠಿ-ಬೆಳ್ಳುಳ್ಳಿ ಪೇಸ್ಟ್,ಐಚ್ಛಿಕ, 2-4ಹಸಿರು ಮೆಣಸಿನಕಾಯಿಗಳು,ಸೀಳುಗಳು, 1ಕಪ್‌ತೆಂಗಿನಕಾಯಿ, 1ಟೀಸ್ಪೂನ್‌ಹುಣಸೆಹಣ್ಣು, ಸಣ್ಣ ತುಂಡುಬೆಲ್ಲ, ರುಚಿಗೆ ತಕ್ಕಷ್ಟು ಉಪ್ಪು, 2-3ಚಮಚತೆಂಗಿನ ಎಣ್ಣೆ, 1ಟೀಸ್ಪೂನ್‌ಸಾಸಿವೆ, 1/2ಟೀಸ್ಪೂನ್‌ಮೆಂತ್ಯ ಬೀಜಗಳು / ಮೆಂತ್ಯ ಬೀಜಗಳು, ಕೆಲವುಕರಿಬೇವು ಎಲೆಗಳು, 1ಟೀಸ್ಪೂನ್‌ಮೆಣಸಿನ ಪುಡಿ, 1/2ಟೀಸ್ಪೂನ್‌ಕಾಳು ಮೆಣಸಿನ ಪುಡಿ, 1ಟೀಸ್ಪೂನ್‌ಕೊತ್ತಂಬರಿ ಪುಡಿ, ಧನಿಯಾ ಪುಡಿ, 1/2ಟೀಸ್ಪೂನ್‌ಅರಿಶಿನ / ಹಲ್ದಿ ಪುಡಿ

### ಮಾಡುವ ವಿಧಾನ

ಡ್ರಮ್ ಸ್ಟಿಕ್ ಅನ್ನು 2 ಇಂಚಿನ ತುಂಡುಗಳಾಗಿ ಕತ್ತರಿಸಿ. ಕತ್ತರಿಸುವಾಗ .. ಹೊರಗಿನ ದಾರಗಳನ್ನು ಲಘುವಾಗಿ ಸಿಪ್ಪೆ ತೆಗೆದು ತ್ಯಜಿಸಿ.

ತೆಂಗಿನ ಎಣ್ಣೆಯಲ್ಲಿ ಸಾಸಿವೆ ಮತ್ತು ಮೆಂತ್ಯೆಯನ್ನು ಚೆನ್ನಾಗಿ ಉದುರಿಸಿ. ನಂತರ ಕರಿಬೇವು, ಕತ್ತರಿಸಿದ ಹಸಿರು ಮೆಣಸಿನಕಾಯಿ, ಕತ್ತರಿಸಿದ ಈರುಳ್ಳಿ, ಶುಂಠಿ ಬೆಳ್ಳುಳ್ಳಿ ಪೇಸ್ಟ್ ಸೇರಿಸಿ. ಅರೆಪಾರದರ್ಶಕವಾಗುವವರೆಗೆ ಹುರಿಯಿರಿ. ಟೊಮ್ಯಾಟೊ ಸೇರಿಸಿ.. ಮೆತ್ತಗಾಗುವವರೆಗೆ ಹುರಿಯಿರಿ. ಮತ್ತು ಉಪ್ಪು ಸೇರಿಸಿ ಒಂದು ನಿಮಿಷ ಕಡಿಮೆ ಉರಿಯಲ್ಲಿ ಹುರಿಯಿರಿ. ಡ್ರಮ್ ಸ್ಟಿಕ್ ತುಂಡುಗಳನ್ನು ಸೇರಿಸಿ .. 1-2 ನಿಮಿಷ ಹುರಿಯಿರಿ. ನುಣ್ಣಗೆ ರುಬ್ಬಿದ ತೆಂಗಿನಕಾಯಿ/ತೆಂಗಿನ ಹಾಲು, ಹುಣಸೆ ನೀರು, ಸ್ವಲ್ಪ ಬೆಲ್ಲ ಮತ್ತು ರುಚಿಗೆ ತಕ್ಕಷ್ಟು ಉಪ್ಪು ಸೇರಿಸಿ ಮಿಶ್ರಣ ಮಾಡಿ. ಅಗತ್ಯವಿರುವಷ್ಟು ನೀರು ಸೇರಿಸಿ.. ಮಿಶ್ರಣ ಮಾಡಿ. ಕುದಿಯಲು ಪ್ರಾರಂಭಿಸಿದಾಗ.. 2 ಸೀಟಿ ಬರುವವರೆಗೆ ಪ್ರೆಶರ್ ಕುಕ್ ಮಾಡಿ. ಒತ್ತಡ ಕಡಿಮೆಯಾದಾಗ, ಒಂದು ಚಮಚ ತೆಂಗಿನ ಎಣ್ಣೆಯನ್ನು ಸೇರಿಸಿ ಮಿಶ್ರಣ ಮಾಡಿ.

## ಮೊಟ್ಟೆಯ ಗುಟ್ಟು



ಹೆಲ್ತ್ ಟಿಪ್ಸ್

ಮೊಟ್ಟೆಯಲ್ಲಿರುವ ಪೌಷ್ಟಿಕಾಂಶಗಳು ಮನುಷ್ಯನಿಗೆ ಎಷ್ಟು ಉಪಯೋಗ ಅಥವಾ ಎಷ್ಟು ಹಾನಿಕರ ಎಂಬುದರ ಬಗ್ಗೆ ಒಂದು ನೋಟ.

ಮೊಟ್ಟೆಯಲ್ಲಿ ಸ್ಯಾಚುರೇಟೆಡ್ ಕೊಬ್ಬಿಗಿಂಡ್ ಅನ್‌ಸ್ಯಾಚುರೇಟೆಡ್ ಕೊಬ್ಬಿನ ಪ್ರಮಾಣವೇ ಹೆಚ್ಚು. ಅತಿ ಹೆಚ್ಚಾದ ಸ್ಯಾಚುರೇಟೆಡ್ ಕೊಬ್ಬಿನ ಪ್ರಮಾಣ ಹೃದಯಾಘಾತ ಅಥವ ರಕ್ತದ ಒತ್ತಡಕ್ಕೆ ಒಂದು ಕಾರಣ. ಆದರೆ ಹೃದಯಾಘಾತಕ್ಕೆ ಇದಲ್ಲದೆ ನೂರಾರು ಕಾರಣಗಳಿವೆ. ಕ್ಯಾನ್ಸರ್ ಸಂಶೋಧನೆ, ಸಂಗ್ರಹಿಸಿದ ವೀರ್ಯಾಣುಗಳನ್ನು ಶೇಖರಿಸಲು, ಕಾಂತಿವರ್ಧಕಗಳ ತಯಾರಿಕೆ, ಔಷಧಗಳ ತಯಾರಿಕೆ, ಬೇಕರಿ ತಿನಿಸುಗಳ ತಯಾರಿಕೆ, ಕೆಲವು ಪ್ರಾಣಿ ಆಹಾರಗಳ ತಯಾರಿಕೆ, ಚರ್ಮ ಹದ ಮಾಡಲು ಹೀಗೆ ಹತ್ತು ಹಲವಾರು ಬೇರೆ ಬೇರೆ ಉದ್ಯಮಗಳಲ್ಲಿ ಮೊಟ್ಟೆಯನ್ನು ಉಪಯೋಗಿಸಲಾಗುತ್ತಿದೆ.

ಬೆಳಿಗ್ಗೆ ಬ್ರೇಕ್‌ಫಾಸ್ಟ್‌ಗೆ ಮೊಟ್ಟೆ ಸೇವಿಸುವುದರಿಂದ ದೇಹದ ತೂಕವನ್ನು ಇಳಿಸಬಹುದು ಎಂದು ಇತ್ತೀಚಿನ ಸಂಶೋಧನೆ ತಿಳಿಸಿದೆ. ಮೊಟ್ಟೆ ಸೇವನೆಯಿಂದ ದಿನವಿಡೀ ಹಸಿವು ಕಡಿಮೆಯಾಗುವುದು. ಇದರಿಂದ ಮಧ್ಯದಲ್ಲಿ ಬಿಸ್ಕಿಟ್, ಚಿಪ್ಸ್ ಇತರ ಜಂಕ್ ಫೂಡ್‌ಗಳನ್ನು ತಿನ್ನುವುದು ತಪ್ಪಿಸಬಹುದು. ಇದರಿಂದ ಇತರೇ ಆರೋಗ್ಯ ಸಮಸ್ಯೆಗಳಿಂದಲೂ ಪಾರಾಗಬಹುದು. ಹೆಚ್ಚಿನ ಪ್ರೋಟೀನ್ ಇರುವ ಅಂಶ ಇದರಲ್ಲಿ ಇರುವುದರಿಂದ ಆಗಾಗ ಹಸಿವು ಆಗುವುದಿಲ್ಲ. ಇದರಲ್ಲಿರುವ ಕಾರ್ಬೋಹೈಡ್ರೇಟ್ ಕೊಬ್ಬಿನ ಅಂಶವನ್ನು ಹೆಚ್ಚಾಗಿ ಸೇವಿಸಿದರೆ ಉತ್ತಮ. ದಿನಕ್ಕೆ 4 ಮೊಟ್ಟೆ ಸೇವಿಸಬಹುದು. ಮೊಟ್ಟೆಯ ಬಿಳಿ ಭಾಗವನ್ನು ಹೆಚ್ಚಾಗಿ ಸೇವಿಸಬಹುದು.

ಮೊಟ್ಟೆಯ ಹಳದಿ ಬಿಸಾಡಬೇಡಿ

ಹೆಚ್ಚಿನವರು ಮೊಟ್ಟೆಯ ಬಿಳಿ ಮಾತ್ರ ತಿಂದು ಅದರ ಹಳದಿಯನ್ನು ಬಿಸಾಡುತ್ತಾರೆ. ಈ ರೀತಿ ಮೊಟ್ಟೆಯ ಹಳದಿ ತಿನ್ನದಿದ್ದರೆ ಅದರಲ್ಲಿರುವ ಪೋಷಕಾಂಶಗಳು ಸುಮ್ಮನೆ ವ್ಯರ್ಥ ಮಾಡಬೇಡಿ . ಹಳದಿಯಲ್ಲಿರುವ ಕೊಬ್ಬಿನಂಶ ಸಕ್ಕರೆ ಪ್ರಮಾಣವನ್ನು ನಿಯಂತ್ರಣದಲ್ಲಿಡುವುದು. ವಾರದಲ್ಲಿ 2 ಬಾರಿ ಇದರ ಹಳದಿ ತಿಂದರೆ ದೇಹಕ್ಕೆ ಉತ್ತಮ ಪೋಷಕಾಂಶ ದೊರಕಿದಂತೆ ಆಗುತ್ತದೆ. ಹಳದಿಯಲ್ಲಿ ಉತ್ತಮ ಕೊಲೆಸ್ಟ್ರಾಲ್ ಮತ್ತು ಕ್ಯಾಲೋರಿ ಹೃದಯದ ಆರೋಗ್ಯವನ್ನು ಹೆಚ್ಚಿಸುತ್ತದೆ.

## ಕೂದಲ ರಕ್ಷಣೆಗೆ ಟಿಪ್ಸ್

### ಬ್ಯೂಟಿ ಟಿಪ್ಸ್



ಚಳಿಗಾಲದಲ್ಲಿ ಶೀತ ಗಾಳಿಯಿಂದ ಕೂದಲು ಬಹಳ ಒರಟಾಗಿರುತ್ತದೆ. ಈ ಸಮಯದಲ್ಲಿ ನೀವು ನಿಮ್ಮ ಕೂದಲಿಗೆ ಹೇರಳವಾದ ಪೌಷ್ಟಿಕಾಂಶಗಳನ್ನು ಒದಗಿಸುವ ಮೂಲಕ ಕೂದಲನ್ನು ರಕ್ಷಿಸಬೇಕು. ಇದಕ್ಕಾಗಿ ಆಮ್ಲಾ ರಸ ನಿಮಗೆ ಸಹಾಯಕವಾಗಿದೆ. ಕೂದಲಿಗೆ ಆಮ್ಲಾ ರಸ ಲೇಪಿಸಿ, ಸ್ವಲ್ಪ ಸಮಯದ ನಂತರ ಅದನ್ನು ಶುಚಿಗೊಳಿಸುವುದರಿಂದ ಕೂದಲು ಆರೋಗ್ಯಕರವಾಗಿರುತ್ತದೆ. ಇದರಲ್ಲಿ ರಾಸಾಯನಿಕಗಳ ಪ್ರಮಾಣ ಕಡಿಮೆಯಿರುವುದರಿಂದ ಇದು ಕೂದಲ ಸಮಸ್ಯೆ ಬಗೆಹರಿಸುವುದರ ಜೊತೆಗೆ ಕೂದಲನ್ನು ಹೊಳಪಾಗಿಸುತ್ತದೆ. ಅಲೋವೆರಾ ಗುಣಲಕ್ಷಣ ಯಾರಿಗೆ ತಾನೇ ಗೊತ್ತಿಲ್ಲ ಹೇಳಿ... ಅಲೋವೆರಾವು ಆರೋಗ್ಯಕ್ಕೆ ಮಾತ್ರವಲ್ಲದೆ ಮುಖ ಮತ್ತು ಕೂದಲಿನ ಆರೋಗ್ಯಕ್ಕೂ ಒಳ್ಳೆಯ ಮನೆ ಮದ್ದು. ಹಾಗಾಗಿ ನಿಮ್ಮ ಕೂದಲಿನ ಸರಿಯಾದ ಕಾಳಜಿಯನ್ನು ನೀವು ಬಯಸುವುದಾದರೆ ಕೂದಲಿಗೆ ಅಲೋವೇರಾ ಜೆಲ್ ಅನ್ನು ಲೇಪಿಸಿ, ಇದು ಕೂದಲು ಒರಟಾಗಿರುವುದರಿಂದ ರಕ್ಷಿಸಿ ಹೊಳೆಯುವಂತೆ ಮಾಡುತ್ತದೆ. ನಿಂಬೆಹಣ್ಣಿನ ರಸ ಮತ್ತು ಮೊಸರು ಕೂದಲಿಗೆ ಪ್ರಯೋಜನಕಾರಿ. ಇದಕ್ಕಾಗಿ, ಎರಡು ಮೂರು ಸ್ಪೂನ್ ನಿಂಬೆ ರಸವನ್ನು ಅರ್ಧ ಬೌಲ್ ಮೊಸರಿನೊಂದಿಗೆ ಸೇರಿಸಿ ಕೂದಲಿಗೆ ಹಚ್ಚಿ. ಅರ್ಧ ಗಂಟೆ ಬಳಿಕ ಕೂದಲನ್ನು ತೊಳೆಯಿರಿ. ಇದರಿಂದ ಡ್ಯಾಂಡ್ರಫ್ ಸಮಸ್ಯೆ ದೂರವಾಗುತ್ತದೆ. ಕೂದಲಿಗೆ ಈರುಳ್ಳಿ ರಸವು ಪ್ರಯೋಜನಕಾರಿಯಾಗಿದೆ. ಕೂದಲಿಗೆ ಅದನ್ನು ಅನ್ವಯಿಸುವುದರಿಂದ ಕೂದಲು ಉದುರುವುದನ್ನು ತಪ್ಪಿಸುವುದು ಮಾತ್ರವಲ್ಲ, ಜೊತೆಗೆ ಹೊಸ ಕೂದಲು ಬೆಳೆಯಲು ಸಹಾಯ ಮಾಡುತ್ತದೆ. ಅದೇ ಸಮಯದಲ್ಲಿ ತಲೆಯಲ್ಲಿ ತುರಿಕೆ(ತಲೆಕಡಿತ) ಸಮಸ್ಯೆಯಿದ್ದರೆ ಈರುಳ್ಳಿ ಅದನ್ನು ನಿವಾರಿಸುತ್ತದೆ. ಆದ್ದರಿಂದ, ವಾರದಲ್ಲಿ ಕನಿಷ್ಠ ಎರಡು ಬಾರಿ ನಿಮ್ಮ ಕೂದಲಿಗೆ ಈರುಳ್ಳಿ ರಸ ಹಚ್ಚಿ ಸ್ವಲ್ಪ ಸಮಯದ ನಂತರ ತೊಳೆಯಿರಿ.

## 3ನೇ ಪ್ರೇಯಸಿ ಬಗ್ಗೆ ಸತ್ಯ ಬಿಚ್ಚಿಟ್ಟ ಅಮೀರ್ ಖಾನ್



ಆಗಾಗ ಟೀಕೆಗೆ ಒಳಗಾಗುತ್ತಿದ್ದಬಾಲಿವುಡ್ ನಟ ಅಮೀರ್ ಖಾನ್‌ತಮ್ಮ 60ನೇ ವರ್ಷದ ಜನ್ಮದಿನಾಚರಣೆಯ ಹಿಂದಿನ ದಿನ ಅಭಿಮಾನಿಗಳಿಗೆ ಶಾಕ್ ನೀಡಿದ್ದಾರೆ. ತಮ್ಮ ಹುಟ್ಟುಹಬ್ಬಕ್ಕೆ ಸರ್ಪ್ರೈಸ್ ನೀಡಿರುವ ಅಮಿರ್ ಖಾನ್ ತಮ್ಮ ಮೂರನೇ ಪ್ರೇಮಿಯನ್ನು ಮಾಧ್ಯಮಕ್ಕೆ ಪರಿಚಯಿಸಿದ್ದಾರೆ. ಸದ್ಯಕ್ಕೆ ಅಮೀರ್ ಖಾನ್ ಹುಡುಗಿ ಫೋಟೋ ಎಲ್ಲೆಡೆ ವೈರಲ್ ಆಗುತ್ತಿದೆ.

ಅಷ್ಟಕ್ಕು ಯಾರು ಈ ಹುಡುಗಿಅಮೀರ್ ಖಾನ್‌ಮನಸ್ಸು ಕದ್ದವಳು ಎಂಬುವುದು ಎಲ್ಲರಲ್ಲೂ ಮೂಡಿರುವ ಪ್ರಶ್ನೆಯಾಗಿದೆ. ಬಾಲಿವುಡ್ ಪರ್ಫೆಕ್ಷನಿಸ್ಟ್ ಅಮಿರ್ ಖಾನ್ ರವರನ್ನು ಮೂರನೆ ಬಾರಿ, ಅದು ಈ ವಯಸ್ಸಿನಲ್ಲಿ ಪೀತಿಯಲ್ಲಿ ಬೀಳಿಸಿರುವ ಪೋರಿಯನ್ನು ನೋಡಲು ಅಭಿಮಾನಿಗಳೆಲ್ಲ ಕಾತುರದಿಂದ ಕಾಯುತ್ತಿದ್ದರು.

ಇದಕ್ಕೆ ಕೊನೆಗೂ ಅಮೀರ್ ಖಾನ್ ಪ್ರತಿಕ್ರಿಯಿಸಿದ್ದಾರೆ. ಇಂದು (ಮಾರ್ಚ್ 14) ಅಮಿರ್ ಖಾನ್ ರವರ 60ನೇ ಹುಟ್ಟುಬ್ಬವನ್ನು ಆಚರಿಸಿಕೊಳ್ಳುತ್ತಿದ್ದಾರೆ. ಆದರೆ ಹಿಂದಿನ ದಿನವೇ ಅಮಿರ್‌ಖಾನ್ ಅಭಿಮಾನಿಗಳಿಗೆ ಗುಡ್ ನ್ಯೂಸ್ ನೀಡಿದ್ದಾರೆ. ಒಂದು ದಿನ ಮುಂಚಿತವಾಗಿಯೇ ಅಭಿಮಾನಿಗಳ ಜೊತೆ ಬರ್ತ್ ಡೇ ಸೆಲಬ್ರೇಟ್ ಮಾಡಿಕೊಂಡಿರುವ ಅಮೀರ್ ಖಾನ್ ಈ ಸಂದರ್ಭದಲ್ಲಿ ಫ್ಯಾನ್ಸ್ ಗೆ ತಮ್ಮ ಪ್ರೀತಿಯ ಬಗ್ಗೆ ಕನ್ಫರ್ಮೇಷನ್ ಕೊಟ್ಟಿದ್ದಾರೆ. ಅಮಿರ್ ಖಾನ್ ಪ್ರೀತಿ ಮಾಡಿರುವ ಮಹಿಳೆ ಹೆಸರು ಗೌರಿ ಅಂತ. ಬೆಂಗಳೂರು ಮೂಲದವರಾದ ಗೌರಿಯವರೊಂದಿಗೆ ಅಮಿರ್ ಖಾನ್ ಅವರದ್ದು ಬಹಳ ದಿನಗಳ ಸ್ನೇಹ. ಖಾನ್ ರವರ ಪ್ರೊಡಕ್ಷನ್ ಹೌಸ್ ನಲ್ಲಿ ಕೆಲಸ ಮಾಡುತ್ತಿದ್ದ ಗೌರಿ ಅಲ್ಲಿಂದಲೇ ಇವರ ಒಡನಾಟ ಶುರುವಾಗಿ ಪ್ರೇಮಕ್ಕೆ ತಿರುಗಿದೆ. ಕಳೆದ 25 ವರ್ಷಗಳಿಂದ ಪರಸ್ಪರ ಒಬ್ಬರನ್ನೊಬ್ಬರು ಬಲ್ಲ ಈ ಜೋಡಿ ನಡುವೆ ಕಳೆದ 18 ತಿಂಗಳಿಂದ ಪ್ರೇಮಾಂಕುರವಾಗಿದೆ ಎಂದು ಹೇಳಲಾಗುತ್ತಿದೆ.

ಗಮನಾರ್ಹವಾಗಿ, ಈಗಾಗಲೇ ಅಮೀರ್ ಖಾನ್ ಎರಡು ಮದುವೆಯಾಗಿದ್ದಾರೆ. 1986ರಲ್ಲಿ ರೀನಾ ದತ್ತ ಅವರನ್ನು ಮದುವೆಯಾಗಿದ್ದ ಅಮಿರ್ ಖಾನ್ ಇವರಿಬ್ಬರಿಗೆ ಇಬ್ಬರು ಮಕ್ಕಳಿದ್ದಾರೆ. 2002ರಲ್ಲಿ ರೀನಾಗೆ ವಿಚ್ಛೇದನ ನೀಡಿ ನಂತರ 2005ರಲ್ಲಿ ಕಿರಣ್ ರಾವ್ ಅವರೊಂದಿಗೆ ಮತ್ತೆ ಮದುವೆ ಆಗಿದ್ದರು. ಇದಾದ ಮೇಲೆ 2021ರಲ್ಲಿ ಅವರಿಬ್ಬರು ಬೇರೆಯಾದ್ರು. ಈಗ ಗೌರಿ ಅವರನ್ನು ಪ್ರೇಯಸಿ ಎಂದು ಪರಿಚಯಿಸಿದ್ದಾರೆ.

ಇಷ್ಟು ದಿನ ಡೇಟಿಂಗ್ ವಿಷಯವನ್ನು ರಿವೀಲ್ ಮಾಡದೇ ಇದ್ದ ಅಮೀರ್ ಖಾನ್ ಈಗ ಗೌರಿ ಜೊತೆ ಡೇಟಿಂಗ್ ಮಾಡ್ತಿರೋದನ್ನು ಒಪ್ಪಿಕೊಂಡಿದ್ದಾರೆ. ಅಮಿರ್ ಖಾನ್ ತಮ್ಮ ಹುಟ್ಟುಹಬ್ಬಕ್ಕೆ ಸ್ವಲ್ಪ ಸಮಯದ ಮೊದಲು ಹೋಟೆಲ್ ವೊಂದರಲ್ಲಿ ನಡೆದ ಅನಧಿಕೃತ ಸಭೆ ಮತ್ತು ಕಾರ್ಯಕ್ರಮದಲ್ಲಿ ಗೌರಿಯನ್ನು ಎಲ್ಲರಿಗೂ ಪರಿಚಯಿಸಿದ್ದಾರೆ.

## ಉದಯೋನ್ಮುಖ ನೃತ್ಯ ಕಲಾವಿದೆ ಕು. ಕೀರ್ತನಾ ಶಶಿಕುಮಾರ್ ಪ್ರಥಮ ಹೆಜ್ಜೆ



ಖ್ಯಾತ ''ಉಷಾಸ್ ಫೌಂಡೇಶನ್ ' ನೃತ್ಯಸಂಸ್ಥೆಯ ಕಲಾತ್ಮಕ ನಿರ್ದೇಶಕಿ, ಗುರು ಕಲೈಮಾಮಣಿ ಡಾ. ಸಂಗೀತಾ ಕಪಿಲನ್ ಅವರ ನುರಿತ ಗರಡಿಯಲ್ಲಿ ರೂಪುಗೊಂಡ ನೃತ್ಯ ಕಲಾಶಿಲ್ಪ ಕು. ಕೀರ್ತನಾ ಶಶಿಕುಮಾರ್ ಭರವಸೆಯ ಉದಯೋನ್ಮುಖ ನೃತ್ಯಕಲಾವಿದೆ. ಪರಿಣತ ಅಭಿನಯ- ಹರಿತ ನೃತ್ತ ಪಾಂಡಿತ್ಯದಲ್ಲಿ ಪಂದನಲ್ಲೂರು ಬಾನಿಯಲ್ಲಿ ಹೆಸರು ಮಾಡಿರುವ ಗುರು ಸಂಗೀತಾ ಅವರ ಸಮರ್ಥ ಮಾರ್ಗದರ್ಶನದಲ್ಲಿ, ನೃತ್ಯ ಸಂಯೋಜನೆಯಲ್ಲಿ ಕೀರ್ತನ, ತನ್ನ ನೃತ್ಯದ ಆಯಾಮಗಳನ್ನು ವೈವಿಧ್ಯಗೊಳಿಸಿಕೊಳ್ಳುತ್ತ ನಾಡಿನಾದ್ಯಂತ ಅನೇಕ ನೃತ್ಯ ಪ್ರದರ್ಶನಗಳನ್ನು ನೀಡಿ ಕಲಾರಸಿಕರ ಮೆಚ್ಚುಗೆ ಗಳಿಸಿದ್ದಾಳೆ. ಶ್ರೀ ಶಶಿಕುಮಾರ್ ಮತ್ತು ಹರಿಪ್ರಿಯ ಅವರ ಪುತ್ರಿಯಾದ ಇವಳು, ಕಳೆದ ಹದಿಮೂರು ವರ್ಷಗಳಿಂದ ಅತ್ಯಂತ ಪರಿಶ್ರಮ- ನಿಷ್ಠೆಯಿಂದ ಭರತನಾಟ್ಯಾಭ್ಯಾಸ ನೃತ್ಯಾಭ್ಯಾಸ ಮಾಡುತ್ತಿದ್ದಾಳೆ. ವೈದೇಹಿ ಕಾಲೇಜಿನಲ್ಲಿ ದಂತ ವೈದ್ಯಕೀಯ ವಿದ್ಯಾಭ್ಯಾಸವನ್ನು ಮಾಡುತ್ತಿರುವ ಕೀರ್ತನ, ಉತ್ತಮ ವಿದ್ಯಾರ್ಥಿನಿಯಾಗಿದ್ದು, ಇದೀಗ ಅವಳು ತನ್ನ ನೃತ್ಯಪ್ರತಿಭಾ ಪ್ರದರ್ಶನ ಮಾಡಲು ಸಜ್ಜಾಗಿದ್ದಾಳೆ. ಇದೇ ತಿಂಗಳ 16 ಭಾನುವಾರದಂದು ವಯ್ಯಾಲಿಕಾವಲ್ಲಿನ ಶ್ರೀ ಕೃಷ್ಣದೇವರಾಯ ಕಲಾಮಂದಿರದಲ್ಲಿ ಸಂಜೆ 6 ಗಂಟೆಗೆ ತನ್ನ ನೃತ್ಯದ ಕಲಾಸೊಬಗನ್ನು ಪ್ರದರ್ಶಿಸಲು, ವಿದ್ಯುಕ್ತವಾಗಿ ರಂಗಪ್ರವೇಶ ಮಾಡುತ್ತಿದ್ದಾಳೆ. ಆಕೆಯ ನೃತ್ಯ ಸೌಂದರ್ಯವನ್ನು ಕಣ್ತುಂಬಿಕೊಳ್ಳಲು ಎಲ್ಲ ಕಲಾರಸಿಕರಿಗೂ ಆದರದ ಸುಸ್ವಾಗತ.

ಕು. ಕೀರ್ತನಾಳಿಗೆ ಚಿಕ್ಕಂದಿನಿಂದ ನೃತ್ಯ ಮಾಡುವುದು ಎಂದರೆ ತುಂಬಾ ಇಷ್ಟ- ಒಲವು. ಬಾಲಪ್ರತಿಭೆಯಾದ ಆರುವರ್ಷದ ಮಗಳ ಹೆಜ್ಜೆಗಳ ತಾಳ-ಲಯಜ್ಞಾನ ಹಾಗೂ ಅವಳ ನೃತ್ಯ ಪ್ರತಿಭೆಯನ್ನು ಗುರುತಿಸಿದ ಹೆತ್ತವರು, ಅವಳ ಪ್ರತಿಭಾ ಪೋಷಣೆಗೆ ಮುಂದಾದರು. ಶಾಸ್ತ್ರೀಯವಾಗಿ ಭರತನಾಟ್ಯವನ್ನು ಕಲಿಯಲು ನೃತ್ಯಗುರು ಸಂಧ್ಯಾ ಅವರಲ್ಲಿ ಸೇರ್ಪಡೆಗೊಳಿಸಿದರು. ಮುಂದೆ- ಪ್ರಸಿದ್ಧ ಗುರುಗಳಾದ ಡಾ. ಸಂಗೀತಾ ಕಪಿಲನ್ ಅವರಲ್ಲಿ ಭರತನಾಟ್ಯ ಕಲಿಕೆ ಮುಂದುವರೆಸಿದಳು. ಅಲ್ಲಿಂದ ಕೀರ್ತನಳಿಗೆ ಕ್ರಮಬದ್ಧ ಉತ್ತಮ ನೃತ್ಯಶಿಕ್ಷಣ ದೊರೆಯತೊಡಗಿತು. ಕಳೆದ ಎಂಟು ವರ್ಷಗಳಿಂದ ಸಂಗೀತಾ ಅವರ ಬಳಿಯೇ ಭರತನಾಟ್ಯವನ್ನು ಅತ್ಯಂತ ಆಸಕ್ತಿ-ಪರಿಶ್ರಮಗಳಿಂದ ಕಲಿಯುತ್ತ 'ಉಷಾಸ್ ಫೌಂಡೇಶನ್' ನೃತ್ಯಶಾಲೆಯ ಎಲ್ಲ ಕಾರ್ಯಕ್ರಮಗಳಲ್ಲಿ, ನರ್ತಿಸಿದ್ದಾಳೆ ಕೀರ್ತನಾ .

ಬೆಂಗಳೂರಿನ ಗ್ಲೋಬಲ್ ಸಿಟಿ ಇಂಟನ್ಯಾಷನಲ್ ಶಾಲೆಯಲ್ಲಿ ಓದಿದ ಕೀರ್ತನಾ ಓದಿನಲ್ಲಿ ಚುರುಕಾಗಿದ್ದಷ್ಟೇ ಸಾಂಸ್ಕೃತಿಕ ಚಟುವಟಿಕೆಗಳಲ್ಲೂ ಮುಂದು. ಚಿತ್ರಕಲೆಯನ್ನು ರೂಢಿಸಿಕೊಂಡಿರುವ ಕೀರ್ತನಾಗೆ ಓದುವುದು ಮತ್ತು ಪ್ರವಾಸ ಮಾಡುವುದೆಂದರೆ ಬಲು ಪ್ರೀತಿ. ಪ್ರಸ್ತುತ ವೈದೇಹಿ ಡೆಂಟಲ್ ಕಾಲೇಜಿನಲ್ಲಿ ದಂತ ವೈದ್ಯಕೀಯ ವಿಜ್ಞಾನದ ಮೊದಲ ವರ್ಷದಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದಾಳೆ.

ತಾನು ನೃತ್ಯ ಕಲಿಯುತ್ತಿರುವ 'ಉಷಾಸ್ ಫೌಂಡೇಶನ್' ನ ವಿವಿಧ ನೃತ್ಯ ಪ್ರದರ್ಶನ ಕಾರ್ಯಕ್ರಮದ ಸಂದರ್ಭದಲ್ಲಿ ಕೀರ್ತನಳಿಗೆ ವಿಪುಲ ಅವಕಾಶಗಳು ದೊರೆತಿವೆ. ವಿವಿಧ ರಾಜ್ಯಗಳಲ್ಲಿ ನಾಟ್ಯಾಂಜಲಿ ನೃತ್ಯೋತ್ಸವಗಳು, ದೆಹಲಿ ಕರ್ನಾಟಕ ಸಂಘದ ರಾಜ್ಯೋತ್ಸವ ಸಮಾರಂಭ, ಗಂಗೋತ್ರಿ, ಪೀಠ-ತಿರುನೆಲ್ವೇಲಿ, ಕೇರಳಾ, ಇಸ್ಕಾನ್ ಮುಂತಾದೆಡೆ ಅನೇಕ ದೇವಾಲಯಗಳ ದೈವೀಕ ಸನ್ನಿಧಿಯಲ್ಲಿ ನೃತ್ಯ ಪ್ರದರ್ಶನ , ನವರಾತ್ರಿ, ವಾಲ್ಮೀಕಿ ಜಯಂತಿ- ಮುಂತಾದ ನೃತ್ಯೋತ್ಸವಗಳಲ್ಲಿ ನೃತ್ಯಾರ್ಪಣೆ ಮಾಡಿರುವ ಕೀರ್ತನಾ ತನ್ನ ಕಲಾ ಪ್ರತಿಭೆಯ ಪ್ರದರ್ಶನ ಮಾಡಿ ಕಲಾರಸಿಕರಿಂದ ಮನ್ನಣೆ-ಮೆಚ್ಚುಗೆ ಗಳಿಸಿದ್ದಾಳೆ. ಇದೇ ರೀತಿ ನೃತ್ಯ ಪಯಣವನ್ನು ಬದ್ಧತೆಯಿಂದ ಮುಂದುವರೆಸುತ್ತ ವಿಶಿಷ್ಟ ಸಾಧನೆ ಮಾಡುವ ಕನಸು ಅವಳದು.

**। ವೈ.ಕೆ.ಸಂಧ್ಯಾ ಶರ್ಮ**

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ವಿದ್ಯಾಭ್ಯಾಸದಲ್ಲಿ ಪ್ರಗತಿ, ಆರೋಗ್ಯದಲ್ಲಿ ವ್ಯತ್ಯಾಸ, ಉದ್ಯೋಗ ಸ್ಥಳದಲ್ಲಿ ಶತ್ರು ಕಾಟ, ಮನೋವ್ಯಾಧಿ.

**ವೃಷಭ:** ವಿದ್ಯಾಭ್ಯಾಸದಲ್ಲಿ ಆಸಕ್ತಿ ಹೆಚ್ಚು, ಮಕ್ಕಳ ಭವಿಷ್ಯದ ಬಗ್ಗೆ ಚಿಂತನೆ, ಕುಟುಂಬದ ಉನ್ನತಿ ಬಗ್ಗೆ ಆಲೋಚನೆ, ನೆರೆಹೊರೆಯವರಿಂದ ಆರ್ಥಿಕ ಸಹಾಯ.

**ಮಿಥುನ:** ತಾಯಿಯಿಂದ ಅನುಕೂಲ, ಭೂಮಿ ಮತ್ತು ವಾಹನದಿಂದ ಧನಾಗಮನ, ವಿದ್ಯಾಭ್ಯಾಸದಲ್ಲಿ ಅಡೆತಡೆ, ಪ್ರೀತಿ-ಪ್ರೇಮ ವಿಷಯಗಳಲ್ಲಿ ಸಮಸ್ಯೆ.

**ಕಟಕ:** ವ್ಯವಹಾರ ಕ್ಷೇತ್ರದಲ್ಲಿ ಅನುಕೂಲ, ಪಾಲುದಾರಿಕೆಯಲ್ಲಿ ನಷ್ಟ, ಕಲಾವಿಭಾಗದ ವಿದ್ಯಾರ್ಥಿಗಳಿಗೆ ಅನುಕೂಲ.

**ಸಿಂಹ:** ವಿದ್ಯಾಭ್ಯಾಸದಲ್ಲಿ ಒತ್ತಡ, ಮರೆವಿನ ಸ್ವಭಾವ ಹೆಚ್ಚು, ಸಾಲದ ಚಿಂತೆ ಮತ್ತು ನಿದ್ರಾಭಂಗ, ಆರೋಗ್ಯದಲ್ಲಿ ಏರುಪೇರು, ಮಾತಿನಿಂದ ತೊಂದರೆ.

**ಕನ್ಯಾ:** ಉದ್ಯೋಗದಲ್ಲಿ ಬಡ್ತಿ, ಪ್ರಗತಿ ಮಾನ ಸನ್ಮಾನಗಳು, ವಿದ್ಯಾಭ್ಯಾಸದಲ್ಲಿ ಸಮಸ್ಯೆ, ಆರೋಗ್ಯದಲ್ಲಿ ವ್ಯತ್ಯಾಸ.

**ತುಲಾ:** ವಿದ್ಯಾರ್ಥಿಗಳಿಗೆ ಅನುಕೂಲ, ಆಕಸ್ಮಿಕ ಅವಕಾಶಗಳು, ಹೆಣ್ಣುಮಕ್ಕಳಿಂದ ಸಮಸ್ಯೆ, ವಾಹನ ಚಾಲನೆಯಲ್ಲಿ ಎಚ್ಚರಿಕೆ.

**ವೃಶ್ಚಿಕ:** ತಂದೆಯಿಂದ ಲಾಭ, ಪ್ರಯಾಣದಲ್ಲಿ ಅನುಕೂಲ, ಕರ್ಮ ಫಲ ಪ್ರಾಪ್ತಿ, ಮಿತ್ರರಿಂದ ಅನುಕೂಲ.

**ಧನಸ್ಸು:** ಉದ್ಯೋಗ ಸ್ಥಳದಲ್ಲಿ ಕಲಹಗಳು, ಹಣಕಾಸಿನ ನೆರವು ಲಭಿಸುವುದು, ಕುಟುಂಬ ನಿರ್ವಹಣೆಗಾಗಿ ಸಾಲ ಬೇಡುವಿರಿ.

**ಮಕರ:** ಮಿತ್ರರಿಂದ ಅನಾನುಕೂಲ, ಸಾಮಾಜಿಕ ಚರ್ಚೆಗಳಲ್ಲಿ ತೊಡಗುವಿರಿ, ಸಂಗಾತಿಯಿಂದ ಅನುಕೂಲ, ಉದ್ಯೋಗನಿಮಿತ್ತ ಪ್ರಯಾಣ.

**ಕುಂಭ:** ವಿದ್ಯಾಭ್ಯಾಸದಲ್ಲಿ ಹಿನ್ನಡೆ ನಷ್ಟ, ಸಾಲದ ಸಮಸ್ಯೆ, ಅನುಕೂಲಕರ ದಿವಸ, ಮಕ್ಕಳು ದೂರ.

**ಮೀನ:** ಮಕ್ಕಳಿಂದ ಅನುಕೂಲ, ವಿದ್ಯಾಭ್ಯಾಸದಲ್ಲಿ ಪ್ರಗತಿ, ಸ್ನೇಹಿತರಿಂದ ಸಹಾಯ, ಮಹಿಳೆಯರಿಂದ ಅನಿರೀಕ್ಷಿತ ಅನುಕೂಲ

## ವಿಶ್ವ ಗ್ರಾಹಕ ಹಕ್ಕುಗಳ ದಿನ

ಪ್ರತಿ ವರ್ಷ ಮಾರ್ಚ್ 15 ರಂದು ಆಚರಿಸಲಾಗುವ ವಿಶ್ವ ಗ್ರಾಹಕ ಹಕ್ಕುಗಳ ದಿನವು ಗ್ರಾಹಕರ ಹಕ್ಕುಗಳು ಮತ್ತು ಅಗತ್ಯಗಳ ಬಗ್ಗೆ ಜಾಗೃತಿ ಮೂಡಿಸುವ ಗುರಿಯನ್ನು ಹೊಂದಿರುವ ಜಾಗತಿಕ ಕಾರ್ಯಕ್ರಮವಾಗಿದೆ. ಗ್ರಾಹಕ ಹಕ್ಕುಗಳು ಎಂದರೆ ವಿವಿಧ ಉತ್ಪನ್ನಗಳು, ಸರಕುಗಳು ಮತ್ತು ಸೇವೆಗಳನ್ನು ಖರೀದಿಸುವ ಪ್ರತಿಯೊಬ್ಬ ವ್ಯಕ್ತಿಯು ಆ ಉತ್ಪನ್ನಗಳ ಗುಣಮಟ್ಟ, ಶುದ್ಧತೆ, ಬೆಲೆ ಮತ್ತು ಗುಣಮಟ್ಟದ ಬಗ್ಗೆ ಮಾಹಿತಿಯನ್ನು ಪಡೆಯುವ ಹಕ್ಕನ್ನು ಹೊಂದಿರುತ್ತಾನೆ. ಗ್ರಾಹಕರಾಗಿ ನೀವು ಎಲ್ಲಿಂದಲಾದರೂ, ಯಾವುದೇ ಸಮಯದಲ್ಲಿ ದೂರು ಸಲ್ಲಿಸುವ ಹಕ್ಕನ್ನು ಹೊಂದಿದ್ದೀರಿ ಎಂದು ನಿಮಗೆ ತಿಳಿದಿದೆಯೇ? ಹೆಚ್ಚಿನ ಜನರು ಗ್ರಾಹಕರಾಗಿ ತಮ್ಮ ಹಕ್ಕುಗಳ ಬಗ್ಗೆ ತಿಳಿದಿರುವುದಿಲ್ಲ, ಆದ್ದರಿಂದ ಈ ದಿನವನ್ನು ಆಚರಿಸುವ ಮೂಲಕ, ಮಾರುಕಟ್ಟೆಯಲ್ಲಿನ ವಂಚನೆಯ ಚಟುವಟಿಕೆಗಳಿಂದ ರಕ್ಷಣೆ ಕೋರುವ ಮತ್ತು ಸುರಕ್ಷಿತವಾಗಿರಲು ನಾವು ಇತರರಿಗೆ ಹಕ್ಕು ನೀಡುತ್ತೇವೆ.

ವಾರ್ಷಿಕವಾಗಿ ಮಾರ್ಚ್ 15 ರಂದು ಆಚರಿಸಲಾಗುವ ವಿಶ್ವ ಗ್ರಾಹಕ ಹಕ್ಕುಗಳ ದಿನದ ಅಂತಿಮ ಗುರಿಯೆಂದರೆ, ಗ್ರಾಹಕರು ತಿಳುವಳಿಕೆಯುಳ್ಳ ನಿರ್ಧಾರ ತೆಗೆದುಕೊಳ್ಳಲು ಅಗತ್ಯವಿರುವ ಎಲ್ಲಾ ಮಾಹಿತಿಯನ್ನು ಹೊಂದಿದ್ದಾರೆ ಎಂದು ಖಚಿತಪಡಿಸಿಕೊಳ್ಳುವುದು. ಈ ದಿನದ ಇತಿಹಾಸವು ಆಸಕ್ತಿದಾಯಕವಾಗಿದೆ. ಕನ್ಸ್ಯೂಮರ್ ಇಂಟರ್ನ್ಯಾಷನಲ್ ವಾರ್ಷಿಕವಾಗಿ ವಿಶ್ವ ಗ್ರಾಹಕ ಹಕ್ಕುಗಳ ದಿನವನ್ನು ರಚಿಸುತ್ತದೆ ಮತ್ತು ಆಯೋಜಿಸುತ್ತದೆ. ಕನ್ಸ್ಯೂಮರ್ ಇಂಟರ್ನ್ಯಾಷನಲ್ 1960 ರಲ್ಲಿ ಸ್ಥಾಪನೆಯಾದ ಗ್ರಾಹಕ ಸಂಸ್ಥೆಗಳ ಜಾಗತಿಕ ಒಕ್ಕೂಟವಾಗಿದೆ ಮತ್ತು ಈ ಸಂಸ್ಥೆಯು ಗ್ರಾಹಕರಿಗಾಗಿ ಸ್ವತಂತ್ರ ಮತ್ತು ಪ್ರಭಾವಶಾಲಿ ಧ್ವನಿಯಾಗಿ ಸ್ಥಾಪಿಸಲ್ಪಟ್ಟಿತು.

ವಿಶ್ವ ಗ್ರಾಹಕ ಹಕ್ಕುಗಳ ದಿನವನ್ನು 1983 ರಿಂದ ಆಚರಿಸಲಾಗುತ್ತಿದೆ ಮತ್ತು ಮಾರ್ಚ್ 15 ರಂದು ಅಮೆರಿಕದ ಅಧ್ಯಕ್ಷ ಜಾನ್ ಫಿಟ್ಜ್‌ಗೆರಾಲ್ಡ್ ಕೆನಡಿ ಅವರು ಮಾರ್ಚ್ 15, 1962 ರಂದು ಅಮೆರಿಕ ಕಾಂಗ್ರೆಸ್ ಗೆ ಮಾಡಿದ ಭಾಷಣವನ್ನು ಗೌರವಿಸಲಾಗುತ್ತದೆ. ಈ ಭಾಷಣದಲ್ಲಿ, ಅವರು ನಾಲ್ಕು ಮೂಲಭೂತ ಗ್ರಾಹಕ ಹಕ್ಕುಗಳನ್ನು ರೂಪಿಸಿದರು - ಸುರಕ್ಷತೆಯ ಹಕ್ಕು, ಮಾಹಿತಿ ಪಡೆಯುವ ಹಕ್ಕು, ಆಯ್ಕೆ ಮಾಡುವ ಹಕ್ಕು ಮತ್ತು ಕೇಳುವ ಹಕ್ಕು.

ಅಂದಿನಿಂದ, ವಿಶ್ವ ಗ್ರಾಹಕ ಹಕ್ಕುಗಳ ದಿನವು ಜನಪ್ರಿಯತೆಯನ್ನು ಗಳಿಸಿದೆ ಮತ್ತು ಪ್ರತಿ ವರ್ಷ ಒಂದು ನಿರ್ದಿಷ್ಟ ವಿಷಯದೊಂದಿಗೆ ಆಚರಿಸಲಾಗುತ್ತದೆ. ಅತ್ಯಂತ ಆಸಕ್ತಿದಾಯಕ ವಿಷಯಗಳಲ್ಲಿ ಒಂದಾದ 'ಪ್ಲಾಸ್ಟಿಕ್ ಮಾಲಿನ್ಯವನ್ನು ನಿಭಾಯಿಸುವುದು', ಪ್ಲಾಸ್ಟಿಕ್‌ಗಳ ಉತ್ಪಾದನೆ ಮತ್ತು ಬಳಕೆ ಮತ್ತು ಪರಿಸರದ ಮೇಲೆ ಅವುಗಳ ಪ್ರಭಾವದ ಮೇಲೆ ಕೇಂದ್ರೀಕರಿಸುವ ಸುಸ್ಥಿರ ಬಳಕೆ ಮತ್ತು ಅಭ್ಯಾಸಗಳ ಬಗ್ಗೆ ಜಾಗೃತಿ ಮೂಡಿಸುವ ಗುರಿಯನ್ನು ಹೊಂದಿದೆ. ಗ್ರಾಹಕರಾಗಿ ನಮ್ಮ ಹಕ್ಕುಗಳನ್ನು ತಿಳಿದುಕೊಳ್ಳುವುದು ಬಹಳ ಮುಖ್ಯ ಏಕೆಂದರೆ ನಾವು ನಮ್ಮ ಗ್ರಾಹಕರ ಹಕ್ಕುಗಳನ್ನು ತಿಳಿದಿದ್ದರೆ ಮಾತ್ರ, ನಾವು ಮೂರ್ಖರಾಗುತ್ತಿದ್ದೇವೆಯೇ ಅಥವಾ ಮೋಸ ಹೋಗುತ್ತಿದ್ದೇವೆಯೇ ಎಂದು ಗುರುತಿಸಬಹುದು

# ದೇಶ-ವಿದೇಶ



## ಸುನೀತಾ ವಿಲಿಯಮ್ಸ್, ಬುಚ್ ವಿಲ್ಮೋರ್ ಭೂಮಿಗೆ ಬರಲು ಕ್ಷಣಗಣನೆ; ಕಾರ್ಯಾಚರಣೆ ಶುರು ಮಾಡಿದ ನಾಸಾ, ಸ್ಪೇಸ್‌ಎಕ್ಸ್

**ವಾಷಿಂಗ್ಟನ್:** ಒಂಬತ್ತು ತಿಂಗಳಿನಿಂದ ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ಸಿಲುಕಿಕೊಂಡಿದ್ದ ಅಮೆರಿಕದ ಗಗನಯಾತ್ರಿಗಳಾದ ಸುನೀತಾ ವಿಲಿಯಮ್ಸ್ ಮತ್ತು ಬುಚ್ ವಿಲ್ಮೋರ್ ಅವರನ್ನು ಮರಳಿ ಕರೆತರಲು ನಾಸಾ ಮತ್ತು ಸ್ಪೇಸ್‌ಎಕ್ಸ್ ಶುಕ್ರವಾರ ಕಾರ್ಯಾಚರಣೆ ಪ್ರಾರಂಭಿಸಿದೆ. ಕ್ರೂ ಡ್ರ್ಯಾಗನ್ ಕ್ಯಾಪ್ಸುಲ್ ಅನ್ನು ಅದರ ಮೇಲ್ಭಾಗಕ್ಕೆ ಜೋಡಿಸಲಾದ ಫಾಲ್ಕನ್ 9 ರಾಕೆಟ್ ಫ್ಲೋರಿಡಾದ ಕೆನಡಿ ಬಾಹ್ಯಾಕಾಶ ಕೇಂದ್ರದಿಂದ ಉಡಾವಣೆ ಮಾಡಲಾಗಿದೆ ಎಂದು ತಿಳಿದು ಬಂದಿದೆ. ನಾಸಾ ಗಗನಯಾತ್ರಿಗಳಾದ ಆನ್ ಮೆಕ್‌ಕ್ಲೇನ್ ಮತ್ತು ನಿಕೋಲ್ ಅಯರ್ಸ್, ಎಂಘಿಂ (ಜಪಾನ್ ಏರೋಸ್ಪೇಸ್ ಎಕ್ಸ್ಪ್ಲೋರೇಶನ್ ಏಜೆನ್ಸಿ) ಗಗನಯಾತ್ರಿ ಟಕುಯಾ ಒನಿಶಿ ಮತ್ತು ರೋಸ್ಕೋಸ್ಮೋಸ್ ಗಗನಯಾತ್ರಿ ಕಿರಿಲ್ ಪೆಸ್ಕೋವ್ ಸೇರಿದಂತೆ ನಾಲ್ವರು ವಿಜ್ಞಾನಿಗಳನ್ನು ಅಧಿಕಾರಿಗಳು ಕಾರ್ಯಾಚರಣೆಯ ಭಾಗವಾಗಿ ಐಎಸ್ಎಸ್ ಗೆ ಕಳುಹಿಸಿದರು.

ಆರಂಭದಲ್ಲಿ ಉಡಾವಣೆಯನ್ನು ವಾರದ ಆರಂಭಿಕ ದಿನಗಳಲ್ಲಿ ನಿಗದಿಪಡಿಸಲಾಗಿತ್ತು ಆದರೆ ತಾಂತ್ರಿಕ ಸಮಸ್ಯೆಗಳು ಮತ್ತು ಕಳಪೆ ಹವಾಮಾನದಿಂದಾಗಿ ವಿಳಂಬವಾಯಿತು. ಬಾಹ್ಯಾಕಾಶಕ್ಕೆ ತೆರಳುವ ಯೋಜನೆಯೊಂದಿಗೆ ನಾಸಾ ಗಗನಯಾನಿಗಳಾದ ಆನ್ ಮೆಕ್ಲೇನ್ ಮತ್ತು ನಿಕೋಲ್ ಅಯರ್ಸ್, ಜಾಕ್ಸಾದ (ಜಪಾನ್ ಏರೋಸ್ಪೇಸ್) ಗಗನಯಾನಿ ಟಕುಯಾ ಒನಿಶಿ ಮತ್ತು ರೋಸ್ಕೋಸ್ಮೋಸ್ ಗಗನಯಾನಿ ಕಿರಿಲ್ ಪೆಸ್ಕೋವ್ ಅವರು ಫ್ಲೋರಿಡಾದ ನಾಸಾ ಕೆನಡಿಯಲ್ಲಿರುವ ಗಗನಯಾನಿಗಳ ಕ್ವಾರ್ಟರ್ಸ್‌ನಲ್ಲಿಯೇ ಉಳಿಯಲಿದ್ದಾರೆ.

ಕ್ರೂ-9 ತಂಡವು ಬುಧವಾರ ಐಎಸ್‌ಎಸ್‌ನಿಂದ ನಿರ್ಗಮಿಸಿ ಫ್ಲೋರಿಡಾ ಕರಾವಳಿಯಲ್ಲಿ ಇಳಿಯುವ ಸಾಧ್ಯತೆಯಿದೆ. ಶುಕ್ರವಾರದಂದು, ಅಮೆರಿಕದ ರಕ್ಷಣಾ ಕಾರ್ಯದರ್ಶಿ ಪೀಟ್ ಹೆಗ್ಸೆತ್ ಅವರು ಸಿಬ್ಬಂದಿಗೆ ಬೆಂಬಲ ವ್ಯಕ್ತಪಡಿಸಲು ಸಾಮಾಜಿಕ ಮಾಧ್ಯಮದಲ್ಲಿ ವೀಡಿಯೊ ಸಂದೇಶವನ್ನು ಹಂಚಿಕೊಂಡಿದ್ದಾರೆ. ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ ವೀಡಿಯೊದಲ್ಲಿ ಅವರು ಬಾಹ್ಯಾಕಾಶದಲ್ಲಿ ಸಿಲುಕಿದವರ ಸ್ವಾಗತಕ್ಕಾಗಿ ಎದುರು ನೋಡುತ್ತಿದ್ದೇನೆ ಎಂದು ಹೇಳಿದ್ದಾರೆ.





## ರಾಜ್ಯದ ಬೊಕ್ಕಸದಿಂದಲೇ ಶೈಕ್ಷಣಿಕ ನಿಧಿ ಬಿಡುಗಡೆಗೆ ಸ್ಟಾಲಿನ್ ಸರಕಾರ ನಿರ್ಧಾರ

**ಚೆನ್ನೈ:** ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಜಾರಿಗೊಳಿಸದೆ ಇದ್ದುದಕ್ಕಾಗಿ ಸಮಗ್ರ ಶಿಕ್ಷಣ ಯೋಜನೆಗಾಗಿನ 2152 ಕೋಟಿ ರೂ. ಅನುದಾನವನ್ನು ಕೇಂದ್ರ ಸರಕಾರವು ತಡೆಹಿಡಿದಿರುವುದಕ್ಕೆ ಪರಿಹಾರವಾಗಿ ರಾಜ್ಯ ಸರಕಾರವು ತನ್ನ ಬೊಕ್ಕಸದಿಂದಲೇ ನಿಧಿಯನ್ನು ಬಿಡುಗಡೆಗೊಳಿಸಲಿದೆಯೆಂದು ತಮಿಳುನಾಡು ವಿತ್ತ ಸಚಿವ ತಂಗಂ ತೆನ್ನರಸು ತಿಳಿಸಿದ್ದಾರೆ.

ವಿದ್ಯಾರ್ಥಿಗಳ ಒಳಿತನ್ನು ಗಮನದಲ್ಲಿರಿಸಿಕೊಂಡು, ಸರಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಶಿಕ್ಷಣವು ಅಬಾಧಿತವಾಗಿ ನಡೆಯುವಂತೆ ನೋಡಿಕೊಳ್ಳಲು ರಾಜ್ಯ ಸರಕಾರವು ತನ್ನದೇ ಸಂಪನ್ಮೂಲಗಳಿಂದ ಶಿಕ್ಷಕರ ವೇತನವೂ ಸೇರಿದಂತೆ ನಿಧಿಗಳನ್ನು ಬಿಡುಗಡೆಗೊಳಿಸಲಿದೆಯೆಂದು ಅವರು ತಮಿಳುನಾಡು ವಿಧಾನಸಭೆಯಲ್ಲಿ ಬಜೆಟ್ ಚರ್ಚೆಯ ಸಂದರ್ಭ ಹೇಳಿದ್ದಾರೆ.

2018ರಲ್ಲಿ ಜಾರಿಗೊಳಿಸಲಾದ ಸಮಗ್ರ ಶಿಕ್ಷಾ ಯೋಜನೆಯ ಮೂಲಕ ಕೇಂದ್ರ ಸರಕಾರವು ಪ್ರಾಥಮಿಕ ಹಾಗೂ ಮಾಧ್ಯಮಿಕ ಶಾಲಾ ಶಿಕ್ಷಣಕ್ಕಾಗಿ ನಿಧಿಗಳನ್ನು ಒದಗಿಸುತ್ತಿದೆ. ಆದರೆ ರಾಷ್ಟ್ರೀಯ ಶಿಕ್ಷಣ ನೀತಿ ಹಾಗೂ ತ್ರಿಭಾಷಾ ಸೂತ್ರವನ್ನು ಜಾರಿಗೊಳಿಸದೆ ಇದ್ದುದಕ್ಕಾಗಿ ತಮಿಳುನಾಡಿಗೆ ಈ ಮೊತ್ತವನ್ನು ಬಿಡುಗಡೆಗೊಳಿಸುವುದಿಲ್ಲವೆಂದು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರದಾನ್ ತಿಳಿಸಿದ್ದರು.



## 51 ವರ್ಷದವರೆಗೆ ಮಹಿಳೆ ಬಾಡಿಗೆ ತಾಯ್ತನ ಮೂಲಕ ಮಗು ಪಡೆಯಲು ಅರ್ಹಳು: ಕೇರಳ ಹೈಕೋರ್ಟ್



**ಕೊಚ್ಚಿ:** 50 ವರ್ಷ ಪೂರ್ಣಗೊಂಡು 51 ವರ್ಷ ತುಂಬುವವರೆಗೆ ಮಹಿಳೆ ಬಾಡಿಗೆ ತಾಯ್ತನ ಮೂಲಕ ಮಗು ಪಡೆಯಲು ಅರ್ಹಳಾಗಿದ್ದು, 51 ವರ್ಷ ಮುಗಿದ ನಂತರ ಆಕೆಯ ಅರ್ಹತೆ ಕೊನೆಯಾಗುತ್ತದೆ ಎಂದು ಕೇರಳ ಹೈಕೋರ್ಟ್ ತೀರ್ಪು ನೀಡಿದೆ.

ಮಹಿಳೆಗೆ 50 ವರ್ಷವಾಗಿದೆ ಎಂಬ ಕಾರಣಕ್ಕೆ ಬಾಡಿಗೆ ತಾಯ್ತನ ಹೊಂದಲು ಅನರ್ಹಳಾದಳು ಎಂದು ಅನುಮತಿ ನಿರಾಕರಿಸಿದ ಏಕಪೀಠ ನ್ಯಾಯಾಧೀಶರ ತೀರ್ಪಿನ ವಿರುದ್ಧ ಮಹಿಳೆಯೊಬ್ಬರು ಸಲ್ಲಿಸಿದ ಮೇಲ್ಮನವಿಯನ್ನು ಪುರಸ್ಕರಿಸಿದ ಕೇರಳ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ನಿತಿನ್ ಜಾಮ್ದಾರ್ ಮತ್ತು ನ್ಯಾಯಮೂರ್ತಿ ಎಸ್ ಮನು ಅವರನ್ನೊಳಗೊಂಡ ವಿಭಾಗೀಯ ಪೀಠವು ಈ ಆದೇಶವನ್ನು ಹೊರಡಿಸಿತು.

50 ನೇ ವರ್ಷದ ಆರಂಭದಿಂದ ಅಥವಾ 50 ವರ್ಷ ಅಂತ್ಯದವರೆಗೆ ಮಹಿಳೆ ಬಾಡಿಗೆ ತಾಯ್ತನ ಮೂಲಕ ಮಗು ಪಡೆಯಲು ಅರ್ಹಳಾಗಿದ್ದಾಳೆಯೇ ಎಂಬುದು ಮೇಲ್ಮನವಿಯಲ್ಲಿರುವ ಪ್ರಶ್ನೆಯಾಗಿದೆ ಎಂದು ವಿಭಾಗೀಯ ಪೀಠವು ಗಮನಿಸಿತು.

ಈ ಕಾಯ್ದೆಯು ಮಹಿಳೆಯ ನೈತಿಕ ಮತ್ತು ಕಾನೂನು ರಕ್ಷಣೆಗಳನ್ನು ಖಚಿತಪಡಿಸಿಕೊಳ್ಳಲು ಉದ್ದೇಶಿಸಿದೆ. ನಿರೀಕ್ಷಿತ ತಾಯ್ತನದ ವಯಸ್ಸಿನ ಅರ್ಹತೆಯನ್ನು ಅರ್ಥೈಸುವಾಗ, ವಿಶೇಷವಾಗಿ 50 ವರ್ಷ ವಯಸ್ಸಿನ ಗರಿಷ್ಠ ಮಿತಿಯು 50 ವರ್ಷ ತುಂಬಿದ ಮಹಿಳೆಯರನ್ನು ಹೊರಗಿಡುತ್ತದೆಯೇ ಎಂಬುದನ್ನು ಅರ್ಥಮಾಡಿಕೊಳ್ಳುವಾಗ ಇದು ಮುಖ್ಯವಾಗಿದೆ. ವಯಸ್ಸಿನ ಅರ್ಹತೆಯ ಕುರಿತಾದ ನಿಬಂಧನೆಯನ್ನು ಅನಗತ್ಯ ನಿರ್ಬಂಧಗಳನ್ನು ಸೃಷ್ಟಿಸುವ ಬದಲು ನೈತಿಕವಾಗಿ ಬಾಡಿಗೆ ತಾಯ್ತನದ ಅಭ್ಯಾಸಗಳನ್ನು ಖಚಿತಪಡಿಸುವ ರೀತಿಯಲ್ಲಿ ಅರ್ಥಮಾಡಿಕೊಳ್ಳಬೇಕು.

ಈ ಸಂದರ್ಭದಲ್ಲಿ ಮಹಿಳೆಗೆ ತಾಯಿಯಾಗುವ ಅವಕಾಶದ ಶಾಶ್ವತ ನಷ್ಟವು ಅಪಾಯದಲ್ಲಿದೆ ಎಂದು ನ್ಯಾಯಾಲಯವು ಗಮನಿಸಿದೆ. ತಾಯ್ತನವು ಜೀವನದ ಆಳವಾದ ವೈಯಕ್ತಿಕ ಮತ್ತು ಮೂಲಭೂತ ಅಂಶವಾಗಿದೆ. ಯಾರನ್ನಾದರೂ ಶಾಶ್ವತವಾಗಿ ಅದರಿಂದ ವಂಚಿತರನ್ನಾಗಿ ಮಾಡುವ ತೀರ್ಪು ಸರಿಯಲ್ಲ ಎಂದು ನ್ಯಾಯಾಲಯ ತೀರ್ಪು ನೀಡಿದೆ.

## ವಿಶ್ವಸಂಸ್ಥೆಯಲ್ಲಿ ಕಾಶ್ಮೀರದ ಪ್ರಸ್ತಾಪ: ಪಾಕ್ ತರಾಟೆಗೆ ತೆಗೆದುಕೊಂಡ ಭಾರತ

**ವಿಶ್ವಸಂಸ್ಥೆ:** ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಜಮ್ಮು ಮತ್ತು ಕಾಶ್ಮೀರದ ಬಗ್ಗೆ ಅನಾವಶ್ಯಕವಾಗಿ ಉಲ್ಲೇಖಿಸಿದ್ದಕ್ಕಾಗಿ ಭಾರತವು ಪಾಕಿಸ್ತಾನವನ್ನು ತರಾಟೆಗೆ ತೆಗೆದುಕೊಂಡಿದೆ. ಅಂತಹ ಹೇಳಿಕೆಗಳು ದೇಶದ ಹಕ್ಕನ್ನು ಮಾನ್ಯ ಮಾಡುವುದಿಲ್ಲ ಅಥವಾ ಗಡಿಯಾಚೆಗಿನ ಭಯೋತ್ಪಾದನೆಯ ಅಭ್ಯಾಸವನ್ನು ಸಮರ್ಥಿಸುವುದಿಲ್ಲ ಎಂದು ನವದೆಹಲಿ ಪ್ರತಿಪಾದಿಸಿದೆ.



ಜಮ್ಮು - ಕಾಶ್ಮೀರದ ಬಗ್ಗೆ ಅನಾವಶ್ಯಕವಾಗಿ ಮಾತನಾಡುವುದನ್ನು ಪಾಕಿಸ್ತಾನ ಅಭ್ಯಾಸ ಮಾಡಿಕೊಂಡಿದೆ. ಇದೇ ಚಾಳಿ ಮುಂದುವರಿಸಿರುವ ಪಾಕಿಸ್ತಾನದ ಮಾಜಿ ವಿದೇಶಾಂಗ ಕಾರ್ಯದರ್ಶಿ, ಜಮ್ಮು ಮತ್ತು ಕಾಶ್ಮೀರದ ಭಾರತೀಯ ಕೇಂದ್ರಾಡಳಿತ ಪ್ರದೇಶದ ಬಗ್ಗೆ ವಿನಾಕಾರಣ ಉಲ್ಲೇಖ ಮಾಡಿದ್ದಾರೆ ಎಂದು ವಿಶ್ವಸಂಸ್ಥೆಯ ಭಾರತದ ಖಾಯಂ ಪ್ರತಿನಿಧಿ, ರಾಯಭಾರಿ ಪಿ ಹರೀಶ್ ಹೇಳಿದ್ದಾರೆ. ಇಸ್ಲಾಮೋಫಾಬ್ ದಿನಾಚರಣೆಯ ಸ್ಮರಣಾರ್ಥವಾಗಿ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ನಡೆದ ಅನೌಪಚಾರಿಕ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪಾಕಿಸ್ತಾನದ ಆಗಾಗ್ಗೆ ಈ ಬಗ್ಗೆ ಉಲ್ಲೇಖ ಮಾಡುತ್ತಲೇ ಇರುತ್ತಾರೆ. ಹೀಗಾಗಿ ಈ ಮಾತುಗಳು ಅವರ ಹಕ್ಕನ್ನು ಮಾನ್ಯ ಮಾಡುವುದಿಲ್ಲ ಅಥವಾ ಗಡಿಯಾಚೆಗಿನ ಭಯೋತ್ಪಾದನೆಯ ಅವರ ಅಭ್ಯಾಸವನ್ನು ಸಮರ್ಥಿಸುವುದಿಲ್ಲ ಎಂದು ಹರೀಶ್ ಹೇಳಿದರು. ಆ ರಾಷ್ಟ್ರದ ಮತಾಂಧ ಮನಸ್ಥಿತಿಯು ಎಲ್ಲರಿಗೂ ತಿಳಿದಿದೆ. ಜೊತೆಗೆ ಅದರ ಧರ್ಮಾಂಧತೆಯ ದಾಖಲೆಯೂ ವಿಶ್ವದ ಮುಂದಿದೆ. ಇಂತಹ ಪ್ರಯತ್ನಗಳು ಜಮ್ಮು ಮತ್ತು ಕಾಶ್ಮೀರವು ಈಗಿರುವ ಹಾಗೂ ಈ ಹಿಂದಿನ ಮತ್ತು ಯಾವಾಗಲೂ ಭಾರತದ ಅವಿಭಾಜ್ಯ ಅಂಗವಾಗಿದೆ ಎಂಬ ವಾಸ್ತವತೆಯನ್ನು ಬದಲಾಯಿಸುವುದಿಲ್ಲ ಎಂದು ಖಡಾಖಂಡಿತವಾಗಿ ಅವರು ಹೇಳಿದ್ದಾರೆ.

## ಕೆನಡಾ ಪ್ರಧಾನಿಯಾಗಿ ಮಾರ್ಕ್ ಕಾರ್ನಿ ಪ್ರಮಾಣ ವಚನ ಸ್ವೀಕಾರ

**ಒಟ್ಟಾವಾ:** ಕೆನಡಾದ ನೂತನ ಪ್ರಧಾನ ಮಂತ್ರಿಯಾಗಿ ಮಾರ್ಕ್ ಕಾರ್ನಿ ಶುಕ್ರವಾರ ಪ್ರಮಾಣ ವಚನ ಸ್ವೀಕರಿಸಿದರು. ಒಟ್ಟಾವಾದ ರೈಡೋ ಹಾಲ್‌ನಲ್ಲಿ ನಡೆದ ಸಮಾರಂಭದಲ್ಲಿ ಗವರ್ನರ್ ಜನರಲ್ ಮೇರಿ ಸೈಮನ್ ಅವರು ಕಾರ್ನಿ ಅವರಿಗೆ ಪ್ರಮಾಣ ವಚನ ಬೋಧಿಸಿದರು. ಇದೇ ವೇಳೆ ಮಾರ್ಕ್ ಕಾರ್ನಿ ಅವರ ಸಂಪುಟ ಸದಸ್ಯರೂ ಪ್ರಮಾಣ ವಚನ ಸ್ವೀಕರಿಸಿದರು. ಲಿಬರಲ್ ಪಕ್ಷದಿಂದ ಸ್ಪರ್ಧಿಸಿದ್ದ ಕಾರ್ನಿ ಅವರು ಶೇ.86 ಮತಗಳೊಂದಿಗೆ ಭರ್ಜರಿ ಗೆಲುವು ಸಾಧಿಸಿದ್ದರು.



## ಪಾಕಿಸ್ತಾನಕ್ಕೆ ಭಾರತ ತಿರುಗೇಟು

**ನವದೆಹಲಿ:** ತನ್ನ ದೇಶದ ವಿರುದ್ಧ ಭಯೋತ್ಪಾದನೆಗೆ ಭಾರತ ಬೆಂಬಲಿಸುತ್ತಿದೆ ಎಂಬ ಪಾಕಿಸ್ತಾನದ ಆರೋಪವನ್ನು ಸ್ಪಷ್ಟವಾಗಿ ತಿರಸ್ಕರಿಸಿರುವ ಭಾರತ, ಭಯೋತ್ಪಾದನೆಯನ್ನು ಮಟ್ಟ ಹಾಕಲು ವಿಫಲವಾಗಿರುವ ಹಾಗೂ ಸ್ವತಃ ತಾನೇ ಜಾಗತಿಕ ಭಯೋತ್ಪಾದನೆಗೆ ಕೇಂದ್ರಬಿಂದುವಾಗಿರುವ ಪಾಕಿಸ್ತಾನ ಮೊದಲಿಗೆ ತನ್ನೊಳಗೆ ಇಣುಕಿ ನೋಡಿಕೊಳ್ಳಲಿ ಎಂದು ತಿರುಗೇಟು ನೀಡಿದೆ.

21 ಜನರ ಸಾವಿಗೆ ಕಾರಣವಾದ ಬಲೂಚಿಸ್ತಾನ್ ರೈಲು ಅಪಹರಣ ಘಟನೆಯ ನಂತರ, ಭಾರತ ತನ್ನ ದೇಶದ ವಿರುದ್ಧ ಭಯೋತ್ಪಾದನೆಯನ್ನು ಬೆಂಬಲಿಸುತ್ತಿದೆ ಎಂದು ಪಾಕಿಸ್ತಾನ ಆರೋಪ ಮಾಡಿತ್ತು.

ಪಾಕಿಸ್ತಾನದ ಆಧಾರರಹಿತ ಆರೋಪಗಳನ್ನು ನಾವು ಬಲವಾಗಿ ತಿರಸ್ಕರಿಸುತ್ತೇವೆ ಎಂದು ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಇಸ್ಲಾಮಾಬಾದ್ ಆರೋಪಗಳ ಬಗ್ಗೆ ಮಾಧ್ಯಮಗಳ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದರು.

ಜಾಗತಿಕ ಭಯೋತ್ಪಾದನೆಯ ಕೇಂದ್ರಬಿಂದು ಎಲ್ಲಿದೆ ಎಂಬುದು ಇಡೀ ಜಗತ್ತಿಗೆ ತಿಳಿದಿದೆ. ಪಾಕಿಸ್ತಾನವು ತನ್ನ ಆಂತರಿಕ ಸಮಸ್ಯೆಗಳು ಮತ್ತು ವೈಫಲ್ಯಗಳಿಗೆ ಇತರರ ಮೇಲೆ ಬೆರಳು ತೋರಿಸುವ ಬದಲು ಆಂತರಿಕವಾಗಿ ನೋಡಿಕೊಳ್ಳಬೇಕು ಎಂದು ಅವರು ಹೇಳಿದರು.

ರೈಲಿನ ಮೇಲಿನ ದಾಳಿಯ ಸಮಯದಲ್ಲಿ ಭಯೋತ್ಪಾದಕರು ಅಫ್ಘಾನಿಸ್ತಾನ ಮೂಲದ ಯೋಜಕರೊಂದಿಗೆ ನೇರ ಸಂಪರ್ಕದಲ್ಲಿದ್ದರು ಎಂದು ಪಾಕಿಸ್ತಾನದ ವಿದೇಶಾಂಗ ಕಚೇರಿ ವಕ್ತಾರ ಶಫ್ಕತ್ ಅಲಿ ಖಾನ್ ಹೇಳಿದ್ದಾರೆ. ಪಾಕಿಸ್ತಾನದ ವಿರುದ್ಧ ದಾಳಿ ಮಾಡಲು ಬಲೂಚಿಸ್ತಾನ್ ಲಿಬರೇಶನ್ ಆರ್ಮಿ (ಬಿಎಲ್‌ಎ) ಯಂಥ ಭಯೋತ್ಪಾದಕ ಗುಂಪುಗಳಿಗೆ ತನ್ನ ನೆಲವನ್ನು ಬಳಸಲು ಅವಕಾಶ ನೀಡದಂತೆ ಅಫ್ಘಾನಿಸ್ತಾನಕ್ಕೆ ಇಸ್ಲಾಮಾಬಾದ್ ಹಲವಾರು ಬಾರಿ ಸೂಚನೆ ನೀಡಿದೆ ಎಂದು ಅವರು ತಿಳಿಸಿದರು.



## ಪಾಯಕಾರಿ ಐಸಿಸ್ ಉಗ್ರ 'ಅಬು ಖದೀಜಾ' ಹತ್ಯೆ.!

**ನವದೆಹಲಿ:** ಇರಾಕ್ ಮತ್ತು ಸಿರಿಯಾದಲ್ಲಿ ಇಸ್ಲಾಮಿಕ್ ಸ್ಟೇಟ್‌ನ ನಾಯಕ, ಅಬು ಖದೀಜಾ ಎಂದೂ ಕರೆಯಲ್ಪಡುವ ಅಬ್ದುಲ್ಲಾ ಮಕಿ ಮುಸ್ಲೆಹ್ ಅಲ್-ರಿಫಾಯಿ, ಭಯೋತ್ಪಾದನಾ ನಿಗ್ರಹ ಕಾರ್ಯಾಚರಣೆಯಲ್ಲಿ ಸಾವನ್ನಪ್ಪಿದ್ದಾರೆ ಎಂದು ಇರಾಕಿ ಪ್ರಧಾನಿ ಮೊಹಮ್ಮದ್ ಶಿಯಾ ಅಲ್-ಸುಡಾನಿ ಶುಕ್ರವಾರ ದೃಢಪಡಿಸಿದ್ದಾರೆ. ''ಇರಾಕ್ ಮತ್ತು ವಿಶ್ವದ ಅತ್ಯಂತ ಅಪಾಯಕಾರಿ ಭಯೋತ್ಪಾದಕರಲ್ಲಿ ಒಬ್ಬರು'' ಎಂದು ಬಣ್ಣಿಸಲಾದ ಅಬು ಖದೀಜಾ ಅವರನ್ನು ಇರಾಕಿ ಭದ್ರತಾ ಪಡೆಗಳು ಐಸಿಸ್ ವಿರುದ್ಧ ಹೋರಾಡುವ ಅಮೆರಿಕ ನೇತೃತ್ವದ ಒಕ್ಕೂಟದ ಸಮನ್ವಯದೊಂದಿಗೆ ಹೊಡೆದುರುಳಿಸಿದವು. ಈ ಕಾರ್ಯಾಚರಣೆಯು ಉಗ್ರಗಾಮಿ ಗುಂಪಿನ ವಿರುದ್ಧ ನಡೆಯುತ್ತಿರುವ ಇರಾಕ್ನ ಯುದ್ಧದಲ್ಲಿ ಮಹತ್ವದ ವಿಜಯವನ್ನು ಸೂಚಿಸುತ್ತದೆ. ಇದು ತನ್ನ ಪ್ರಾದೇಶಿಕ ನಿಯಂತ್ರಣವನ್ನು ಕಳೆದುಕೊಂಡರೂ ಭದ್ರತಾ ಬೆದರಿಕೆಯನ್ನು ಒಡ್ಡುತ್ತಲೇ ಇದೆ.



## ಅಮೇರಿಕಾದಿಂದ ಭಾರತೀಯ ವಿದ್ಯಾರ್ಥಿನಿ ಗಡಿಪಾರು

**ವಾಷಿಂಗ್ಟನ್:** ಪ್ಯಾಲೆಸ್ಟೈನ್ ಪರ ಪ್ರತಿಭಟನೆಯಲ್ಲಿ ಭಾಗವಹಿಸಿದ್ದಕ್ಕಾಗಿ ವಿದ್ಯಾರ್ಥಿ ವೀಸಾವನ್ನು ರದ್ದುಪಡಿಸಿದ ಕೆಲವೇ ದಿನಗಳ ನಂತರ ಅಮೆರಿಕದ ಕೊಲಂಬಿಯಾ ವಿಶ್ವವಿದ್ಯಾಲಯದಲ್ಲಿ ಅಧ್ಯಯನ ಮಾಡುತ್ತಿರುವ ಭಾರತೀಯ ವಿದ್ಯಾರ್ಥಿನಿಯನ್ನು ದೇಶದಿಂದ ಸ್ವಯಂ ಗಡೀಪಾರು ಮಾಡಲಾಗಿದೆ.



ಹಿಂಸಾಚಾರ ಮತ್ತು ಭಯೋತ್ಪಾದನೆಯನ್ನು ಪ್ರತಿಪಾದಿಸಿದ್ದಕ್ಕಾಗಿ ರಂಜನಿ ಶ್ರೀನಿವಾಸನ್ ಅವರ ವೀಸಾವನ್ನು ಮಾರ್ಚ್ 5 ರಂದು ರದ್ದುಪಡಿಸಲಾಗಿದೆ ಎಂದು ಯುಎಸ್ ಹೋಮ್ಲ್ಯಾಂಡ್ ಸೆಕ್ಯುರಿಟಿ ಇಲಾಖೆ ತಿಳಿಸಿದೆ.

''ರಂಜನಿ ಶ್ರೀನಿವಾಸನ್ ಭಯೋತ್ಪಾದಕ ಸಂಘಟನೆಯಾದ ಹಮಾಸ್ ಅನ್ನು ಬೆಂಬಲಿಸುವ ಚಟುವಟಿಕೆಗಳಲ್ಲಿ ಭಾಗಿಯಾಗಿದ್ದರು. ಮಾರ್ಚ್ 5, 2025 ರಂದು, ರಾಜ್ಯ ಇಲಾಖೆ ಅವರ ವೀಸಾವನ್ನು ಹಿಂತೆಗೆದುಕೊಂಡಿತು. ಮಾರ್ಚ್ 11 ರಂದು ಸ್ವಯಂ ಗಡೀಪಾರು ಮಾಡಲು ಕಸ್ಟಮ್ಸ್ ಮತ್ತು ಬಾರ್ಡರ್ ಪ್ರೊಟೆಕ್ಷನ್ (ಸಿಪಿಬಿ) ಏಜೆನ್ಸಿ ಅಪ್ಲಿಕೇಶನ್ ಅನ್ನು ಬಳಸಿದ ವೀಡಿಯೊ ತುಣುಕನ್ನು ಹೋಮ್ಲ್ಯಾಂಡ್ ಸೆಕ್ಯುರಿಟಿ ಇಲಾಖೆ ಪಡೆದುಕೊಂಡಿದೆ'' ಎಂದು ಅದು ಹೇಳಿಕೆಯಲ್ಲಿ ತಿಳಿಸಿದೆ.

ಸ್ವಯಂ-ಗಡಿಪಾರು, ಅಥವಾ ಅಧಿಕಾರಿಗಳು ಕ್ರಮ ತೆಗೆದುಕೊಳ್ಳುವ ಮೊದಲು ಸ್ವಯಂಪ್ರೇರಿತವಾಗಿ ಹೊರಹೋಗುವುದು, ಒಬ್ಬರನ್ನು ಯುಎಸ್ ಮಿಲಿಟರಿ ವಿಮಾನದಲ್ಲಿ ಇರಿಸಿ ಇತ್ತೀಚೆಗೆ ಭಾರತಕ್ಕೆ ಬಂದವರಂತೆ ಮನೆಗೆ ಕಳುಹಿಸುವ ಅಪಾಯವನ್ನು ತಪ್ಪಿಸುತ್ತದೆ. ಹೋಮ್ಲ್ಯಾಂಡ್ ಸೆಕ್ಯುರಿಟಿ ಸೆಕ್ರೆಟರಿ ಕ್ರಿಸ್ಟಿ ನೋಮ್ ಅವರು ವಿಮಾನ ನಿಲ್ದಾಣದಲ್ಲಿ ಶ್ರೀನಿವಾಸನ್ ಅವರ ವೀಡಿಯೊವನ್ನು ಪೋಸ್ಟ್ ಮಾಡಿದ್ದು, ''ಹಿಂಸಾಚಾರ ಮತ್ತು ಭಯೋತ್ಪಾದನೆಯನ್ನು ಪ್ರತಿಪಾದಿಸುವ ಯಾರಾದರೂ ದೇಶದಲ್ಲಿರಬಾರದು'' ಎಂದು ಹೇಳಿದ್ದಾರೆ.

## ಶಿಕ್ಷಕಿ ಮನೆಯಲ್ಲಿ ಬೆಂಕಿ ಆಕಸ್ಮಿಕ; 175 ಉತ್ತರ ಪತ್ರಿಕೆ ಭಸ್ಮ

**ಪಾಲ್ಘರ್:** ಶಿಕ್ಷಕಿಯೊಬ್ಬರ ಮನೆಯಲ್ಲಿ ಸಂಭವಿಸಿದ ಬೆಂಕಿ ಆಕಸ್ಮಿಕದಲ್ಲಿ ಎಚ್‌ಎಸ್‌ಸಿ ಮಂಡಳಿಯ 175 ಉತ್ತರ ಪತ್ರಿಕೆಗಳು ಭಸ್ಮವಾಗಿರುವ ಘಟನೆ ಮಹಾರಾಷ್ಟ್ರದ ಪಾಲ್ಘರ್ ಜಿಲ್ಲೆಯ ವಸಾಯ್ ನಲ್ಲಿ ಮಾ.10ರಂದು ನಡೆದಿರುವ ಘಟನೆ ಬೆಳಕಿಗೆ ಬಂದಿದೆ.



ಶಿಕ್ಷಕಿ ಈ ಉತ್ತರ ಪತ್ರಿಕೆಗಳನ್ನು ಮನೆಗೆ ತಂದಿದ್ದು, ಬೆಂಕಿ ಅನಾಹುತ ಸಂಭವಿಸಿದ ಸಂದರ್ಭದಲ್ಲಿ ನೆರೆಹೊರೆಯವರು ಆಗಮಿಸಿ ಅಗ್ನಿಶಾಮಕ ದಳ ಆಗಮಿಸುವ ಮುನ್ನವೇ ಬೆಂಕಿ ಆರಿಸಿದ್ದಾರೆ. ಆದರೆ ಆ ವೇಳೆಗಾಗಲೇ ಉತ್ತರ ಪತ್ರಿಕೆಗಳು ಸುಟ್ಟುಹೋಗಿದ್ದವು ಎಂದು ಹೇಳಲಾಗಿದೆ. ಉತ್ತರ ಪತ್ರಿಕೆಗಳನ್ನು ಮನೆಯಲ್ಲಿ ಇಟ್ಟುಕೊಂಡ ಆರೋಪದಲ್ಲಿ ಶಿಕ್ಷಕಿ ವಿರುದ್ಧ ಎಫ್ ಐಆರ್ ದಾಖಲಿಸಲಾಗಿದೆ. ಕೆಲ ಉತ್ತರ ಪತ್ರಿಕೆಗಳಿಗೆ ಯಾವುದೇ ಹಾನಿಯಾಗಿಲ್ಲ. ಆರ್ಗನೈಸೇಷನ್ ಅಂಡ್ ಮ್ಯಾನೇಜ್ಮೆಂಟ್ ವಿಷಯದ ಮೇಲೆ ಫೆಬ್ರವರಿ 15ರಂದು ನಡೆದ ಪರೀಕ್ಷೆಯ ಉತ್ತರ ಪತ್ರಿಕೆಗಳು ಭಸ್ಮವಾಗಿವೆ. ಸೋಫಾದ ಮೇಲೆ ಇರಿಸಿದ್ದ ಉತ್ತರ ಪತ್ರಿಕೆಗಳ ಕಟ್ಟು ಭಸ್ಮವಾಗಿವೆ. ವಿಹಾರ್ ನ ಉತ್ಕರ್ಷ್ ವಿದ್ಯಾಲಯ ಮತ್ತು ಜ್ಯೂನಿಯರ್ ಕಾಲೇಜಿನ ಉತ್ತರ ಪತ್ರಿಕೆಗಳನ್ನು ಶಿಕ್ಷಕಿ ಮನೆಗೆ ತಂದಿದ್ದು, ಇವು ಸುಟ್ಟುಹೋಗಿವೆ. ಮಹಾರಾಷ್ಟ್ರ ರಾಜ್ಯ ಸೆಕೆಂಡರಿ ಮತ್ತು ಹೈಯರ್ ಸೆಕೆಂಡರಿ ಬೋರ್ಡ್, ಶಿಕ್ಷಕಿ ಪ್ರಿಯಾ ರಾಡ್ರಿಗಸ್ ಮತ್ತು ಪ್ರಾಚಾರ್ಯ ಮುಗ್ಧ ಲೇಲೆ ವಿರುದ್ಧ ಎಫ್‌ಐಆರ್ ದಾಖಲಿಸಿದೆ.

## ಯುನೆಸ್ಕೊ ವಿಶ್ವಪರಂಪರೆ ತಾತ್ಕಾಲಿಕ ಪಟ್ಟಿಗೆ ಭಾರತದ 6 ತಾಣಗಳು ಸೇರ್ಪಡೆ

**ನವದೆಹಲಿ:** ಅಶೋಕನ ಶಾಸನ ತಾಣಗಳು ಮತ್ತು ವಿವಿಧ ರಾಜ್ಯಗಳಲ್ಲಿ ಹರಡಿರುವ ಚೌಸತ್ ಯೋಗಿನಿ ದೇವಾಲಯಗಳು ಸೇರಿದಂತೆ ಆರು ಸ್ಥಳಗಳನ್ನು ಯುನೆಸ್ಕೋದ ವಿಶ್ವ ಪರಂಪರೆ ಕೇಂದ್ರವು ಭಾರತದ ವಿಶ್ವ ಪರಂಪರೆಯ ತಾತ್ಕಾಲಿಕ ಪಟ್ಟಿಗೆ ಸೇರಿಸಿದೆ.

ಈ ತಾಣಗಳನ್ನು ಮಾರ್ಚ್ 7 ರಂದು ಪಟ್ಟಿಗೆ ಸೇರಿಸಲಾಗಿದೆ ಎಂದು ಯುನೆಸ್ಕೋಗೆ ಭಾರತದ ಖಾಯಂ ನಿಯೋಗ ಹೇಳಿಕೆಯಲ್ಲಿ ತಿಳಿಸಿದೆ. ಯುನೆಸ್ಕೋದ ಭಾರತ ವಿಭಾಗವು ಗುರುವಾರ ತಡರಾತ್ರಿ ಸಾಮಾಜಿಕ ಜಾಲತಾಣ ಎಕ್ಸ್?ನಲ್ಲಿ ಈ ಹೇಳಿಕೆಯನ್ನು ಶೇರ್ ಮಾಡಿದೆ.

ಭವಿಷ್ಯದಲ್ಲಿ ಸ್ಥಳವೊಂದನ್ನು ವಿಶ್ವ ಪರಂಪರೆಯ ಪಟ್ಟಿಗೆ ನಾಮನಿರ್ದೇಶನ ಮಾಡಬೇಕಾದರೆ ವಿಶ್ವ ಪರಂಪರೆ ಕೇಂದ್ರದ ತಾತ್ಕಾಲಿಕ ಪಟ್ಟಿಗೆ ಸೇರ್ಪಡೆಯಾಗುವುದು ಕಡ್ಡಾಯವಾಗಿದೆ ಎಂದು ಅದು ಹೇಳಿದೆ.

ತಾತ್ಕಾಲಿಕ ಪಟ್ಟಿಗೆ ಸೇರಿಸಲಾದ ಆರು ಸ್ಥಳಗಳಲ್ಲಿ ಛತ್ತೀಸ್ ಗಢದ ಕಂಗರ್ ಕಣಿವೆ ರಾಷ್ಟ್ರೀಯ ಉದ್ಯಾನ, ತೆಲಂಗಾಣದ ಮುದುಮಲ್ ಮೆಗಾಲಿಥಿಕ್ ಮೆನ್ಹಿರ್ ಗಳು, ಮೌರ್ಯರ ಕಾಲದ (ಬಹು ರಾಜ್ಯಗಳು) ಅಶೋಕನ ಶಾಸನ ತಾಣಗಳ ಸರಣಿ, ಚೌಸತ್ ಯೋಗಿನಿ ದೇವಾಲಯಗಳ ಸರಣಿ (ಅನೇಕ ರಾಜ್ಯಗಳು), ಉತ್ತರ ಭಾರತದ (ಅನೇಕ ರಾಜ್ಯಗಳು) ಗುಪ್ತ ದೇವಾಲಯಗಳು ಮತ್ತು ಮಧ್ಯಪ್ರದೇಶ ಮತ್ತು ಉತ್ತರ ಪ್ರದೇಶದ ಬುಂದೇಲರ ಅರಮನೆ - ಕೋಟೆಗಳು ಸೇರಿವೆ ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ.




ಈ ಸೇರ್ಪಡೆಗಳೊಂದಿಗೆ ಭಾರತವು ಈಗ ತಾತ್ಕಾಲಿಕ ಪಟ್ಟಿಯಲ್ಲಿ 62 ತಾಣಗಳನ್ನು ಹೊಂದಿದೆ. 'ತಾತ್ಕಾಲಿಕ ಪಟ್ಟಿ'ಯು ಯುನೆಸ್ಕೋ ನಾಮನಿರ್ದೇಶನಕ್ಕಾಗಿ ಪ್ರತಿ ದೇಶವು ಪರಿಗಣಿಸಲು ಬಯಸುವ ತನ್ನ ತಾಣಗಳ ಪಟ್ಟಿಯಾಗಿದೆ.

## ಏರಿಕೆ ಕಾಣುತ್ತಿದೆ ಬಂಗಾರ

**ದೆಹಲಿ:** ಭೌಗೋಳಿಕ ರಾಜಕೀಯ ಮತ್ತು ಆರ್ಥಿಕ ಅನಿಶ್ಚಿತತೆಯಿಂದಾಗಿ ಹೂಡಿಕೆದಾರರು ಸುರಕ್ಷಿತ ಹೂಡಿಕೆಯತ್ತ ಚಿತ್ತ ಹರಿಸುತ್ತಿದ್ದಾರೆ. ಹೀಗಾಗಿ ಚಿನ್ನದ ದರ ನಿರಂತರ ಏರಿಕೆಯತ್ತ ಸಾಗುವಂತೆ ಮಾಡಿದೆ. ಅಮೂಲ್ಯವಾದ ಲೋಹ ಬಂಗಾರ ಇದೇ ಮೊದಲ ಬಾರಿಗೆ ಪ್ರತಿ ಔನ್ಸ್ ಗೆ 3,000 ಡಾಲರ್ ಆಗಿದೆ.

ಇನ್ನು ದೇಶದಲ್ಲಿ ಚಿನ್ನ ಮತ್ತು ಬೆಳ್ಳಿಯ ಬೆಲೆಯಲ್ಲಿ ಇಂದೂ ಕೂಡಾ ಭಾರೀ ಏರಿಕೆಯಾಗಿದೆ. ಗುರುವಾರ 10 ಗ್ರಾಂ ಚಿನ್ನದ ಬೆಲೆ ರೂ.89,550 ಇದ್ದರೆ, ಶುಕ್ರವಾರ ರೂ.920 ಏರಿಕೆಯಾಗಿ ರೂ.90,470 ಆಗಿತ್ತು. ಶನಿವಾರವಾದ ಇಂದು ಮತ್ತೆ 300 ರೂಗಳಷ್ಟು ಏರಿಕೆ ಕಂಡು 90724ಕ್ಕೆ ತಲುಪಿದೆ. ಪ್ರತಿ ಕೆಜಿ ಬೆಳ್ಳಿಯ ಬೆಲೆ ಗುರುವಾರ ರೂ.1,01,29 ರಷ್ಟಿದ್ದರೆ, ಶುಕ್ರವಾರ ರೂ.1101 ಏರಿಕೆಯಾಗಿ ರೂ.1,02,400 ರಷ್ಟಿತ್ತು. ಇಂದು ಈ ಬೆಲೆ 102622ಗೆ ಮುಟ್ಟಿದ್ದು, 200 ರೂ ಹೆಚ್ಚಳವಾಗಿದೆ.

ಇನ್ನು ಬೆಂಗಳೂರಲ್ಲಿ ಇಂದು ಚಿನ್ನದ ಬೆಲೆ 99.9 ಪ್ಯೂರಿಟಿಯ 10 ಗ್ರಾಂ ಬಂಗಾರಕ್ಕೆ 90724 ರೂಪಾಯಿ ಆಗಿದೆ. ಈ ಮೂಲಕ ಬಂಗಾರ ಇದೇ ಮೊದಲ ಬಾರಿಗೆ 90 ಸಾವಿರದ ಗಡಿ ದಾಟಿ ಮುನ್ನುಗ್ಗುತ್ತಿದೆ. ಇನ್ನೇನು ಕೆಲವೇ ದಿನಗಳಲ್ಲಿ 1ಲಕ್ಷ ರೂ ತಲುಪಿದರೂ ಅಚ್ಚರಿ ಪಡಬೇಕಿಲ್ಲ.

**ಎಷ್ಟಿದೆ ಬೆಳ್ಳಿ ಬೆಲೆ:** ಒಂದು ಕೆಜಿ ಬೆಳ್ಳಿ ದರ 102622 ರೂ.ಗೆ ತಲುಪಿದೆ.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ದರ್ಶನ್ ನಟನೆಯ 'ಡೆವಿಲ್' ಚಿತ್ರದಲ್ಲಿ ಶರ್ಮಿಳಾ ಮಾಂಡ್ರೆ



ನಟಿ ಶರ್ಮಿಳಾ ಮಾಂಡ್ರೆ, ಅವರು ದರ್ಶನ್ ನಟನೆಯ 'ದಿ ಡೆವಿಲ್' ಸಿನಿಮಾದಲ್ಲಿ ನಟಿಸುತ್ತಿದ್ದಾರೆ. ಮೈಸೂರಿನಲ್ಲಿ ನಡೆಯುತ್ತಿರುವ ಶೂಟಿಂಗ್‌ನಲ್ಲಿ ಅವರು ಪಾಲ್ಗೊಂಡಿದ್ದಾರೆ.

ಮಿಲನಾ ಪ್ರಕಾಶ್ ನಿರ್ದೇಶಿಸಿ, ನಿರ್ಮಾಣ ಮಾಡುತ್ತಿರುವ 'ದಿ ಡೆವಿಲ್' ಚಿತ್ರಕ್ಕೆ ಶರ್ಮಿಳಾ ಎಂಟ್ರಿ ಕೊಟ್ಟಿದ್ದಾರೆ. ಚಿತ್ರದ ಶೂಟಿಂಗ್‌ನಲ್ಲಿ ತೊಡಗಿಸಿಕೊಂಡಿದ್ದಾರೆ. ಚಿತ್ರೀಕರಣದ ಸ್ಥಳದಲ್ಲಿ ತಾವು ಇರುವ ಕ್ಯಾರವಾನ್ ಫೋಟೋವನ್ನು ಶೇರ್ ಮಾಡಿಕೊಂಡಿದ್ದಾರೆ. ಚಿತ್ರದಲ್ಲಿ ಅವರ ಪಾತ್ರ ಹೇಗಿದೆ? ಎಂಬುದು ರಿವೀಲ್ ಆಗಿಲ್ಲ.

ಶರ್ಮಿಳಾ ಅಷ್ಟೇ ಅಲ್ಲ, 'ಬಿಗ್ ಬಾಸ್ ಕನ್ನಡ 10'ರ ಸ್ಪರ್ಧಿ ವಿನಯ್ ಗೌಡ 'ಡೆವಿಲ್' ಸೆಟ್‌ಗೆ ಎಂಟ್ರಿ ಕೊಟ್ಟಿದ್ದಾರೆ. ಡೆವಿಲ್‌ನಲ್ಲಿ ವಿಲನ್ ಪಾತ್ರದಲ್ಲಿ ಅಬ್ಬರಿಸಲಿದ್ದಾರೆ. ದರ್ಶನ್, ಶರ್ಮಿಳಾ, ವಿನಯ್ ಇರುವ ಚಿತ್ರೀಕರಣದ ಸ್ಥಳದಲ್ಲಿ ಭಾರೀ ಬಿಗಿ ಭದ್ರತೆ ಕೊಡಲಾಗಿದೆ. ಪೊಲೀಸ್ ಮತ್ತು ಬೌನ್ಸರ್ ಇಟ್ಟುಕೊಂಡು ನಿರ್ದೇಶಕ ಶೂಟಿಂಗ್ ಶುರು ಮಾಡಿದ್ದಾರೆ.

ಇನ್ನೂ ಈ ಹಿಂದೆ 'ನವಗ್ರಹ' ಸಿನಿಮಾದಲ್ಲಿ ದರ್ಶನ್ ಜೊತೆ ಶರ್ಮಿಳಾ ತೆರೆಹಂಚಿಕೊಂಡಿದ್ದರು. ಇದೀಗ 2ನೇ ಬಾರಿ ದರ್ಶನ್ ಜೊತೆ ನಟಿ ಸಿನಿಮಾ ಮಾಡ್ತಿದ್ದಾರೆ.





# ಕತ್ರಿನಾ ಮಾಜಿ ಗೆಳೆಯನ ದಾಖಲೆಯನ್ನು ಮುರಿಯಲಿದ್ದಾರೆ ವಿಕ್ಕಿ ಕೌಶಲ್

ಲಕ್ಷ್ಮಣ್ ಉಟೇಕರ್ ನಿರ್ದೇಶನದ 'ಛಾವಾ' ಚಿತ್ರದ ಗಳಿಕೆ ನಿಧಾನವಾಗಿದ್ದರೂ, ಬಿಡುಗಡೆಯಾದ ನಾಲ್ಕನೇ ವಾರದಲ್ಲಿಯೂ ಪ್ರೇಕ್ಷಕರನ್ನು ಚಿತ್ರಮಂದಿರಗಳತ್ತ ಆಕರ್ಷಿಸುವಲ್ಲಿ ಯಶಸ್ವಿಯಾಗಿದೆ. ನಾಲ್ಕನೇ ವಾರದಲ್ಲಿ 'ಛಾವಾ' ಚಿತ್ರದ ಗಳಿಕೆ ನಿರಂತರ ಕುಸಿತ ಕಂಡಿತು. ಶುಕ್ರವಾರ ಈ ಚಿತ್ರ 5.15 ಕೋಟಿ ರೂ. ಗಳಿಸಿದೆ. ಫೆಬ್ರವರಿ 14ರಂದು ಬಿಡುಗಡೆಯಾದ ಈ ಚಿತ್ರದಲ್ಲಿ ನಟ ವಿಕ್ಕಿ ಕೌಶಲ್ (ಗಿಳಿಇಥಿ ಏಚಿಣ್ಣುಚಿಟ) ಛತ್ರಪತಿ ಸಂಭಾಜಿ ಮಹಾರಾಜ್ ಪಾತ್ರವನ್ನು ನಿರ್ವಹಿಸಿದ್ದಾರೆ. ಪ್ರತಿದಿನ ಗಳಿಕೆ ಸ್ವಲ್ಪ ಕಡಿಮೆಯಾಗುತ್ತಿದ್ದರೂ, ಚಿತ್ರವು ಮತ್ತೊಂದು ದಾಖಲೆ ನಿರ್ಮಿಸಲು ಕೆಲವೇ ಹೆಜ್ಜೆಗಳ ದೂರದಲ್ಲಿದೆ.

'ಛಾವಾ' ಚಿತ್ರ ಇದುವರೆಗೆ ದೇಶಾದ್ಯಂತ 546 ಕೋಟಿ ರೂ. ಗಳಿಸಿದೆ. ಅದರಲ್ಲಿ ಹಿಂದಿ ಆವೃತ್ತಿ 534.45 ಕೋಟಿ ರೂ. ಗಳಿಸಿದೆ. ತೆಲುಗು ಆವೃತ್ತಿಯ ಗಳಿಕೆ 12.55 ಕೋಟಿ ರೂ ಆಗಿದೆ. ಬಂದಿರುವ ಮಾಹಿತಿಯ ಪ್ರಕಾರ, 'ಛಾವಾ' ವಿಶ್ವಾದ್ಯಂತ 730 ಕೋಟಿ ರೂ. ಕಲೆಕ್ಷನ್ ಮಾಡಿದೆ. ಇಲ್ಲಿಯವರೆಗೆ, ವಿಕ್ಕಿ ಕೌಶಲ್ ಅವರ ಚಿತ್ರವು ಸನ್ನಿ ಡಿಯೋಲ್ ಅವರ 'ಗದರ್ 2 , ಸಲ್ಮಾನ್ ಖಾನ್ ಅವರ 'ಸುಲ್ತಾನ್' ಮತ್ತು ರಣಬೀರ್ ಕಪೂರ್ ಅವರ 'ಸಂಜು' ಚಿತ್ರಗಳನ್ನು ಮೀರಿಸಿದೆ. ಹಾಗಾಗಿ, 'ಛಾವಾ' ಚಿತ್ರವು ರಣಬೀರ್ ಅವರ ಬ್ಲಾಕ್‌ಬಸ್ಟರ್ ಚಿತ್ರ 'ಅನಿಮಲ್' ದಾಖಲೆಯನ್ನು ಮುರಿಯಲು ಕೇವಲ ಕೆಲವೇ ಕೋಟಿ ರೂ.ಗಳಷ್ಟು ದೂರದಲ್ಲಿದೆ. ರಾಜ್‌ಕುಮಾರ್ ರಾವ್ ಮತ್ತು ಶ್ರದ್ಧಾ ಕಪೂರ್ ಅವರ 'ಸ್ತ್ರೀ 2 ಚಿತ್ರದ ಗಳಿಕೆಯ ದಾಖಲೆಯನ್ನು ಮುರಿಯಲು 'ಛಾವಾ' ಇನ್ನೂ 63 ಕೋಟಿ ರೂ. ಗಳಿಸಬೇಕಾಗಿದೆ.



'ಛಾವಾ' ಮೊದಲ ವಾರದಲ್ಲಿ 219.25 ಕೋಟಿ ರೂ., ಎರಡನೇ ವಾರದಲ್ಲಿ 180.25 ಕೋಟಿ ರೂ. ಮತ್ತು ಮೂರನೇ ವಾರದಲ್ಲಿ 84.05 ಕೋಟಿ ರೂ. ಗಳಿಸಿದೆ. ನಾಲ್ಕನೇ ವಾರದ ಶನಿವಾರ ಚಿತ್ರದ ಗಳಿಕೆಯಲ್ಲಿ ಶೇಕಡಾ 91 ರಷ್ಟು ನೇರ ಏರಿಕೆ ಕಂಡುಬಂದಿದೆ. ಆದರೆ ಅದರ ನಂತರ, ಗಳಿಕೆಯ ಗ್ರಾಫ್ ಕುಸಿಯುತ್ತಲೇ ಇದೆ. ಆದರೆ, ಹೋಳಿ ಮತ್ತು ರಂಗಪಂಚಮಿ ರಜೆಗಳ ಹಿನ್ನೆಲೆಯಲ್ಲಿ ಆದಾಯದಲ್ಲಿ ಮತ್ತಷ್ಟು ಏರಿಕೆಗಿದೆ.

ಲಕ್ಷ್ಮಣ್ ಉಟೇಕರ್ ನಿರ್ದೇಶನದ ಈ ಚಿತ್ರದಲ್ಲಿ ಛತ್ರಪತಿ ಸಂಭಾಜಿ ಮಹಾರಾಜ್ ಪಾತ್ರದಲ್ಲಿ ವಿಕ್ಕಿ ಕೌಶಲ್, ಮಹಾರಾಣಿ ಯೇಸುಬಾಯಿ ಪಾತ್ರದಲ್ಲಿ ರಶ್ಮಿಕಾ ಮಂದಣ್ಣ ಮತ್ತು ಔರಂಗಜೇಬ್ ಪಾತ್ರದಲ್ಲಿ ಅಕ್ಷಯ್ ಖನ್ನಾ ನಟಿಸಿದ್ದಾರೆ. ಇದಲ್ಲದೆ, ಅಶುತೋಷ್ ರಾಣಾ, ವಿನೀತ್ ಕುಮಾರ್ ಸಿಂಗ್, ದಿವ್ಯಾ ದತ್ತ, ಸುವ್ರತ್ ಜೋಶಿ, ಸಂತೋಷ್ ಜುವೇಕರ್ ಕೂಡ ಚಿತ್ರದಲ್ಲಿ ಪ್ರಮುಖ ಪಾತ್ರಗಳಲ್ಲಿದ್ದಾರೆ.

# ಜೀವನದಲ್ಲಿ ಯಶಸ್ವಿಯಾಗಲು ಪವಿತ್ರಾ ಗೌಡ ಟಿಪ್ಸ್

ಸೋಶಿಯಲ್ ಮೀಡಿಯಾದಲ್ಲಿ ಸದಾ ಆಕ್ಟೀವ್ ಆಗಿರುವ ಪವಿತ್ರಾ ಗೌಡ ಜೀವನದಲ್ಲಿ ಯಶಸ್ವಿಯಾಗಲು ಸಲಹೆ ಕೊಟ್ಟಿದ್ದಾರೆ. ಫ್ಯಾಷನ್ ಡಿಸೈನರ್ ಆಗಿ ತಮ್ಮದೇ ಕ್ಷೇತ್ರದಲ್ಲಿ ಗುರುತಿಸಿಕೊಂಡಿರುವ ಪವಿತ್ರಾ ಫ್ಯಾನ್ಸ್‌ಗೆ ಸಕ್ಸಸ್ ಕುರಿತು ಟಿಪ್ಸ್ ಕೊಟ್ಟಿದ್ದಾರೆ.

ನಾನೊಂದು ವ್ಯವಹಾರ ಆರಂಭಿಸಿರುವುದಕ್ಕೆ ನಿಜಕ್ಕೂ ಅದೃಷ್ಟಶಾಲಿ. ಅದು ನನಗೆ ಆರ್ಥಿಕ, ಬೌದ್ಧಿಕ ಮತ್ತು ವೈಯಕ್ತಿಕವಾಗಿ ತೃಪ್ತಿಕರವಾಗಷ್ಟೇ ಇಲ್ಲ. ನಾನು ಉತ್ಸಾಹದಿಂದ ಬದುಕಲು ಅವಕಾಶ ಮಾಡಿಕೊಟ್ಟಿದೆ. ಜೀವನದಲ್ಲಿ ಯಶಸ್ವಿಯಾಗಲು ಮೊದಲು ಮಾಡಬೇಕಾದ ಕೆಲಸವೆಂದರೆ ನಿಮ್ಮ ಕೆಲಸವನ್ನು ಪ್ರೀತಿಸುವುದು ಎಂದು ನಟಿ ಇನ್ಸ್ಟಾಗ್ರಾಂನಲ್ಲಿ ಬರೆದುಕೊಂಡಿದ್ದಾರೆ. ನಟಿಯ ಪೋಸ್ಟ್‌ಗೆ ಬಗೆ ಬಗೆಯ ಕಾಮೆಂಟ್‌ಗಳು ಬಂದಿವೆ. ಇತ್ತೀಚೆಗೆ 'ರೆಡ್ ಕಾರ್ಪೆಟ್ ಸ್ಟುಡಿಯೋ' ಬೂಟಿಕ್ ಅನ್ನು ಪವಿತ್ರಾ ರೀ ಲಾಂಚ್ ಮಾಡಿದ್ದಾರೆ. ಉದ್ಯಮದಲ್ಲಿ ಮತ್ತೆ ನಟಿ ಬ್ಯುಸಿಯಾಗಿದ್ದಾರೆ.



# ತಮಿಳಿನತ್ತ 'ದಿಯಾ' ಖ್ಯಾತಿಯ ದೀಕ್ಷಿತ್ ಶೆಟ್ಟಿ

'ದಿಯಾ' ಖ್ಯಾತಿಯ ದೀಕ್ಷಿತ್ ಶೆಟ್ಟಿ ಕಾಲಿವುಡ್‌ನತ್ತ ಮುಖ ಮಾಡಿದ್ದಾರೆ. ಕನ್ನಡ, ತೆಲುಗಿನಲ್ಲಿ ನಟಿಸಿ ಸೈ ಎನಿಸಿಕೊಂಡಿದ್ದ ದೀಕ್ಷಿತ್ ಶೆಟ್ಟಿ ಈಗ ತಮಿಳು ಚಿತ್ರರಂಗಕ್ಕೂ ಪಾದಾರ್ಪಣೆ ಮಾಡಿದ್ದಾರೆ.



ರಾಮ್ ವೆಂಕಟ್ ನಿರ್ದೇಶನದ ಹೊಸ ಸಿನಿಮಾದಲ್ಲಿ ದೀಕ್ಷಿತ್ ಆಯ್ಕೆಯಾಗಿದ್ದಾರೆ. ಇದೀಗ ಸರಳವಾಗಿ ಮುಹೂರ್ತ ಕಾರ್ಯಕ್ರಮ ಕೂಡ ಜರುಗಿದೆ. ವಿಭಿನ್ನ ಕಥೆಯ ಮೂಲಕ ಕಾಲಿವುಡ್‌ಗೆ ಅವರು ಎಂಟ್ರಿ ಕೊಡುತ್ತಿದ್ದಾರೆ.

ರಶ್ಮಿಕಾ ಮಂದಣ್ಣಗೆ ಜೋಡಿಯಾಗಿ 'ದಿ ಗರ್ಲ್‌ಫ್ರೆಂಡ್' ಚಿತ್ರದಲ್ಲಿ ನಟಿಸುತ್ತಿದ್ದಾರೆ. ಶೀಘ್ರಮೇವ ಕಲ್ಯಾಣ ಪ್ರಾಪ್ತಿರಸ್ತು, ಸ್ಟ್ರಾಬೆರಿ, ಬ್ಯಾಂಕ್ ಆಫ್ ಭಾಗ್ಯಲಕ್ಷ್ಮಿ, ತೆಲುಗಿನ ಕಿಂಗ್ ಜಾಕಿ ಕ್ವೀನ್ ಮತ್ತು ಒಪ್ಪೀಸ್ ಚಿತ್ರಗಳು ನಟನ ಕೈಯಲ್ಲಿವೆ.

ದೀಕ್ಷಿತ್ ಶೆಟ್ಟಿ ಅವರು 2020ರಲ್ಲಿ 'ದಿಯಾ' ಚಿತ್ರದ ಮೂಲಕ ಸ್ಯಾಂಡಲ್‌ವುಡ್‌ಗೆ ಪದಾರ್ಪಣೆ ಮಾಡಿದರು. ಬಳಿಕ ಅವರು ಕೆಟಿಎಂ ಮತ್ತು ಬ್ಲಿಂಕ್ ಮತ್ತು ತೆಲುಗು ಚಿತ್ರಗಳಾದ ಮುಗ್ಗುರು ಮೊನಗಲ್ಲು, ದಿ ರೋಸ್ ವಿಲ್ಲಾ ನಟಿಸಿದ್ದಾರೆ. ತೆಲುಗಿನಲ್ಲಿ ನಾನಿ ಮತ್ತು ಕೀರ್ತಿ ಸುರೇಶ್ ಜೊತೆ 'ದಸರಾ' ಸಿನಿಮಾ ಮಾಡಿ ಗೆದ್ದಿದ್ದಾರೆ.

ಐಪಿಎಲ್‌ನಲ್ಲಿ ಅಧಿಕ ಸೊನ್ನೆ

# ಆರ್‌ಸಿಬಿ ಆಟಗಾರರದ್ದೇ ಪಾರುಪತ್ಯ

ಐಪಿಎಲ್‌ನಲ್ಲಿ ಬ್ಯಾಟರ್‌ಗಳ ಆರ್ಭಟಕ್ಕೆ ಹೆಚ್ಚು ಪ್ರಾಮುಖ್ಯತೆ. ತರಹೆವಾರಿ ಶಾಟ್‌ಗಳ ಮೂಲಕ ಅಭಿಮಾನಿಗಳನ್ನುಹುಚ್ಚೆದ್ದು ಕುಣಿಯುವಂತೆ ಮಾಡುವ ಬ್ಯಾಟ್ಸ್‌ಮನ್‌ಗಳನ್ನು ಕ್ಷಣ ಮಾತ್ರದಲ್ಲಿ ಪೆವಿಲಿಯನ್‌ಗಟ್ಟುವ ಕಲೆಯನ್ನು ಗರಗತ ಮಾಡಿಕೊಂಡಿರುವ ಬೌಲರ್‌ಗಳನ್ನು ಈ ಲೀಗ್‌ನಲ್ಲಿ ಕಾಣಬಹುದಾಗಿದೆ. ಹಾಗೆಯೇ ಬರೀ ಹೊಡಿಬಡಿ ಆಟಕ್ಕೆ ಹೆಚ್ಚು ಹೆಸರುವಾಸಿಯಾಗಿರುವ ಈ ಲೀಗ್‌ನಲ್ಲೂ ಕೆಲವು ಆಟಗಾರರಿದ್ದಾರೆ. ಅವರು ಸೊನ್ನೆ ಸುತ್ತುವುದರಲ್ಲಿ ಎತ್ತಿದ್ದ ಕೈ. ಅಂತಹ ಐವರು ಬ್ಯಾಟರ್‌ಗಳ ವಿವರ ಇಲ್ಲಿದೆ.

ಗ್ಲೆನ್ ಮ್ಯಾಕ್ಸ್‌ವೆಲ್:ಐಪಿಎಲ್ ಇತಿಹಾಸದಲ್ಲಿ ಅತಿ ಹೆಚ್ಚು ಬಾರಿ ಶೂನ್ಯಕ್ಕೆ ಔಟಾದ ನಾಚಿಕೆಗೇಡಿನ ದಾಖಲೆಯನ್ನು ಗ್ಲೆನ್ ಮ್ಯಾಕ್ಸ್‌ವೆಲ್ ಜಂಟಿಯಾಗಿ ಹೊಂದಿದ್ದಾರೆ. ಇಂಡಿಯನ್ ಪ್ರೀಮಿಯರ್ ಲೀಗ್‌ನಲ್ಲಿ ಮ್ಯಾಕ್ಸ್‌ವೆಲ್ ಇದುವರೆಗೆ ಒಟ್ಟು 18 ಬಾರಿ ಖಾತೆ ತೆರೆಯದೆ ಪೆವಿಲಿಯನ್ ಸೇರಿಕೊಂಡಿದ್ದಾರೆ.

ದಿನೇಶ್ ಕಾರ್ತಿಕ್ ಕೂಡ ಐಪಿಎಲ್‌ನಲ್ಲಿ ಒಟ್ಟು 18 ಬಾರಿ ಶೂನ್ಯಕ್ಕೆ ಔಟಾಗಿದ್ದಾರೆ. ಕಾರ್ತಿಕ್ ತಮ್ಮ ಐಪಿಎಲ್ ವೃತ್ತಿಜೀವನಕ್ಕೆ ಪೂರ್ಣವಿರಾಮ ಹಾಕಿದ್ದು, ಮುಂಬರುವ ಸೀಸನ್‌ನಲ್ಲಿ ಅವರು ಆಡುವುದನ್ನು ಕಾಣುವುದಿಲ್ಲ. ಅವರು ಕಳೆದ ಎರಡು ಸೀಸನ್‌ಗಳಲ್ಲಿ ಆರ್‌ಸಿಬಿಯ ಭಾಗವಾಗಿದ್ದರು ಮತ್ತು ಫಿನಿಷರ್ ಆಗಿ ಅದ್ಭುತವಾಗಿ ಬ್ಯಾಟಿಂಗ್ ಮಾಡಿದರು.



ಮುಂಬೈ ಇಂಡಿಯನ್ಸ್ ತಂಡವನ್ನು ಐದು ಬಾರಿ ಚಾಂಪಿಯನ್ ಆಗಿ ಮಾಡಿದ ನಾಯಕ ರೋಹಿತ್ ಶರ್ಮಾ ಅವರ ಹೆಸರೂ ಕೂಡ ಈ ಪಟ್ಟಿಯಲ್ಲಿದೆ. ಇಂಡಿಯನ್ ಪ್ರೀಮಿಯರ್ ಲೀಗ್‌ನಲ್ಲಿ ಹಿಟ್‌ಮ್ಯಾನ್ ಒಟ್ಟು 17 ಬಾರಿ ಖಾತೆ ತೆರೆಯದೆ ಔಟಾಗಿದ್ದಾರೆ.

ತಮ್ಮ ಸ್ಪಿನ್ ಮೂಲಕ ಎಂತಹ ಬ್ಯಾಟ್ಸ್‌ಮನ್‌ಗಳನ್ನು ಪೆವಿಲಿಯನ್‌ಗಟ್ಟುವ ಕಲೆ ಹೊಂದಿರುವ ಪಿಯೂಷ್ ಚಾವ್ಲಾ ಕೂಡ ಐಪಿಎಲ್‌ನಲ್ಲಿ 16 ಬಾರಿ ಶೂನ್ಯಕ್ಕೆ ಔಟಾಗಿದ್ದಾರೆ. ಇದರ ಹೊರತಾಗಿ ಐಪಿಎಲ್ ಇತಿಹಾಸದಲ್ಲಿ ಅತಿ ಹೆಚ್ಚು ವಿಕೆಟ್ ಪಡೆದ ಬೌಲರ್‌ಗಳ ಪಟ್ಟಿಯಲ್ಲಿ ಪಿಯೂಷ್ ಎರಡನೇ ಸ್ಥಾನದಲ್ಲಿದ್ದಾರೆ.

ಕಳೆದ ಐಪಿಎಲ್‌ನಲ್ಲಿ ಕೋಲ್ಕತ್ತಾ ನೈಟ್ ರೈಡರ್ಸ್ ತಂಡವನ್ನು ಚಾಂಪಿಯನ್ ಮಾಡುವಲ್ಲಿ ಪ್ರಮುಖ ಪಾತ್ರವಹಿಸಿದ್ದ ಸುನಿಲ್ ನರೈನ್ ಕೂಡ ಈ ಲೀಗ್‌ನಲ್ಲಿ 16 ಬಾರಿ ಶೂನ್ಯಕ್ಕೆ ಔಟಾಗಿದ್ದಾರೆ. ನರೈನ್ ತಮ್ಮ ಸ್ಫೋಟಕ ಬ್ಯಾಟಿಂಗ್‌ಗೆ ಹೆಸರುವಾಸಿಯಾಗಿದ್ದು, ಆರಂಭಿಕ ಆಟಗಾರರಾಗಿ ಪವರ್‌ಪ್ಲೇನಲ್ಲಿ ಬೌಂಡರಿ ಮತ್ತು ಸಿಕ್ಸರ್‌ಗಳ ಮಳೆ ಸುರಿಸುತ್ತಿದ್ದಾರೆ.

# ಹನುಮಗಿರಿಯ ತಪೋವನ ಕ್ಷೇತ್ರದಲ್ಲಿ ನಡೆದ ಕಬ್ಬಾಳಮ್ಮದೇವಿಯ ಜಾತ್ರಾಮಹೋತ್ಸವ

**ಬೆಂಗಳೂರು:** ಉತ್ತರಹಳ್ಳಿಯ ಅರೇಹಳ್ಳಿ ಬಳಿಯಲ್ಲಿರುವ ಹನುಮಗಿರಿಯ ತಪೋವನ ಕ್ಷೇತ್ರದಲ್ಲಿ ನೂರಾರು ವರ್ಷಗಳ ಕಾಲದಿಂದಲೂ ನೆಲೆಸಿರುವ ಕಬ್ಬಾಳಮ್ಮ ದೇವಿಯ ಉತ್ಸವ, ರಥೋತ್ಸವ, ಜಾತ್ರಾಮಹೋತ್ಸವ ಉಯ್ಯಾಲೋತ್ಸವ ಸಾವಿರಾರು ಭಕ್ತರ ಸಮುಖದಲ್ಲಿ ಸಡಗರ, ಸಂಭ್ರಮದಿಂದ ಅದ್ದೂರಿಯಾಗಿ ನಡೆಯಿತು.

ಮುಂಜಾನೆ ಕಬ್ಬಾಳಮ್ಮ ದೇವಿಗೆ ವಿಶೇಷ ಪೂಜೆ, ಪುರಸ್ಕಾರ, ಹೋಮ-ಹವನಗಳು ನಡೆದವು, ಕಾರ್ಯಕ್ರಮದಲ್ಲಿ ವಿವಿಧ ಬಡಾವಣೆ, ಗ್ರಾಮಗಳಿಂದ ಭಕ್ತರು ಪಾಲ್ಗೊಂಡರು, ಭಕ್ತಾಧಿಗಳು , ಜಯಘೋಷಗಳು ಮುಗಿಲು ಮುಟ್ಟಿದವು ಇದೇ ಸಂದರ್ಭದಲ್ಲಿ ತಪೋವನ ಕ್ಷೇತ್ರದಲ್ಲಿ ನೆಲೆಸಿರುವ ಲಕ್ಷ್ಮೀವೆಂಕಟೇಶ್ವರ, ಗಣೇಶ ಸ್ವಾಮಿಗೆ ವಿಶೇಷ ಪೂಜೆ ಪುರಸ್ಕಾರಗಳು ನಡೆದವು. ಭಕ್ತಾಧಿಗಳಿಗೆ ಮಜ್ಜಿಗೆ, ಪಾನಕ, ಕೋಸಂಬರಿ, ಪ್ರಸಾದದ ವ್ಯವಸ್ಥೆ ಮಾಡಲಾಗಿತು.

ಹನುಮಗಿರಿ ಕ್ಷೇತ್ರದಲ್ಲಿ ಅನಾಧಿಕಾಲ ಕಾಲದಿಂದಲೂ ಪೂರ್ವಿಕರು, ಹಿರಿಯರು, ಭಕ್ತಾಧಿಗಳು ಶ್ರೀಲಕ್ಷ್ಮೀವೆಂಕಟೇಶ್ವರಸ್ವಾಮಿ, ಶ್ರೀಕಬ್ಬಾಳಮ್ಮದೇವಿ, ಗಣೇಶದೇವರಿಗೆ ಪೂಜೆ, ಪುರಸ್ಕಾರ ನಡೆಸಿಕೊಂಡು ಬರುತ್ತಿದ್ದಾರೆ ನಂತರದ ವರ್ಷಗಳಿಂದ ಭಕ್ತಾಧಿಗಳು, ದೇವಸ್ಥಾನ ಅಭಿವೃದ್ಧಿ ಸಮಿತಿಯ ಪದಾಧಿಕಾರಿಗಳು ಗ್ರಾಮೀಣ ಕಲೆ, ಸಂಸ್ಕೃತಿ ಇತಿಹಾಸವನ್ನು ಯುವ ಜನತೆಗೆ ತಿಳಿಸುವ ಉದ್ದೇಶದಿಂದ ಅದ್ದೂರಿಯಾಗಿ ಮುಂದುವರೆಸಿಕೊಂಡು ಬರುತ್ತಿದ್ದೇವೆ ಎಂದು ಸಮಿತಿಯ ಅಧ್ಯಕ್ಷ ವಿ.ಆಂಜನಪ್ಪ ತಿಳಿಸಿದರು.



**ಕಬ್ಬಾಳಮ್ಮ ದೇವಿಯ ಜಾತ್ರಾಮಹೋತ್ಸವ, ಉತ್ಸವ ಕಾರ್ಯಕ್ರಮದಲ್ಲಿ ವಿವಿಧ ಹೋಮ ಹವನಗಳನ್ನು ಭಕ್ತಾಧಿಗಳು ಸಾಮೂಹಿಕವಾಗಿ ನಡೆಸಿಕೊಟ್ಟರು**

# ಆರ್‌ಸಿಬಿ ಸ್ಟೆಡಿನಾ?

# ಕಂಬ್ಯಾಕ್‌ಗೆ ಜಸ್‌ಪ್ರೀತ್ ಬುಮ್ರಾ ರೆಡಿ

ಇಂಡಿಯನ್ ಪ್ರೀಮಿಯರ್ ಲೀಗ್ ಆರಂಭಕ್ಕೆ ಇನ್ನು ದಿನಗಳು ಮಾತ್ರ ಉಳಿದಿವೆ. ಈಗಾಗಲೇ ಬಹುತೇಕ ತಂಡಗಳು ಅಭ್ಯಾಸವನ್ನು ಆರಂಭಿಸಿದ್ದಾರೆ. ಇದಾಗ್ಯೂ ಟೀಮ್ ಇಂಡಿಯಾದಿಂದ ಹೊರಗುಳಿದಿರುವ ಜಸ್‌ಪ್ರೀತ್ ಬುಮ್ರಾ ಮುಂಬೈ ಇಂಡಿಯನ್ಸ್ ಕ್ಯಾಂಪ್‌ನಲ್ಲಿ ಕಾಣಿಸಿಕೊಂಡಿಲ್ಲ. ಇದಕ್ಕೆ ಮುಖ್ಯ ಕಾರಣ ಅವರ ಫಿಟ್‌ನೆಸ್ ಸಮಸ್ಯೆ.

ಬೆನ್ನು ನೋವಿನ ಸಮಸ್ಯೆಯಿಂದ ಬಳಲುತ್ತಿರುವ ಕಾರಣ ಜಸ್‌ಪ್ರೀತ್ ಬುಮ್ರಾ ಈ ಬಾರಿಯ ಚಾಂಪಿಯನ್ಸ್ ಟ್ರೋಫಿಯಿಂದ ಹೊರಗುಳಿದಿದ್ದರು. ಇದಾಗ್ಯೂ ಅವರು ಐಪಿಎಲ್ ವೇಳೆಗೆ ಸಂಪೂರ್ಣ ಗುಣಮುಖರಾಗಲಿದ್ದಾರೆ ಎನ್ನಲಾಗಿತ್ತು. ಇದನ್ನು ಪುಷ್ಠೀಕರಿಸುವಂತೆ ಅವರು ಇತ್ತೀಚೆಗೆ ನೆಟ್ಸ್‌ನಲ್ಲಿ ಬೌಲಿಂಗ್ ಅಭ್ಯಾಸವನ್ನು ಸಹ ಮಾಡಿದ್ದರು.

ಫಿಟ್‌ನೆಸ್ ಪರೀಕ್ಷಿಸಲೆಂದೇ ನಡೆದ ಈ ಅಭ್ಯಾಸದ ವೇಳೆ ಬುಮ್ರಾ ಅವರು ಸಂಪೂರ್ಣ ಗುಣಮುಖರಾಗಿಲ್ಲ ಎಂಬುದು ತಿಳಿದು ಬಂದಿದೆ. ಅಲ್ಲದೆ ಈ ಸಮಸ್ಯೆಗಾಗಿ ಮತ್ತೊಂದಷ್ಟು ದಿನಗಳ ಕಾಲ ಅವರು ನ್ಯಾಷನಲ್ ಕ್ರಿಕೆಟ್ ಅಕಾಡೆಮಿಯಲ್ಲಿ ಚಿಕಿತ್ಸೆ ಪಡೆಯಲಿದ್ದಾರೆ. ಹೀಗಾಗಿ ಮಾರ್ಚ್ 22 ರಿಂದ ಆರಂಭವಾಗಲಿರುವ ಐಪಿಎಲ್‌ನ ಆರಂಭಿಕ ಪಂದ್ಯಗಳಿಗೆ ಅವರು ಅಲಭ್ಯರಾಗುವುದು ಬಹುತೇಕ ಖಚಿತವಾಗಿದೆ.



ಪ್ರಸ್ತುತ ಮಾಹಿತಿ ಪ್ರಕಾರ, ಜಸ್‌ಪ್ರೀತ್ ಬುಮ್ರಾ ಏಪ್ರಿಲ್ ಮೊದಲ ವಾರದಲ್ಲಿ ಮುಂಬೈ ಇಂಡಿಯನ್ಸ್ ತಂಡವನ್ನು ಕೂಡಿಕೊಳ್ಳಲಿದ್ದಾರೆ. ಅಂದರೆ ಮುಂಬೈ ಇಂಡಿಯನ್ಸ್ ತಂಡದ ಮೊದಲ ಮೂರು ಪಂದ್ಯಗಳಿಗೆ ಬುಮ್ರಾ ಅಲಭ್ಯರಾಗುವುದು ಖಚಿತವಾಗಿದೆ. ಇನ್ನು ಏಪ್ರಿಲ್ ಮೊದಲ ವಾರದಲ್ಲಿ ಮುಂಬೈ 2 ಪಂದ್ಯಗಳನ್ನಾಡಲಿದ್ದು, ಈ ವೇಳೆ ಅವರು ತಂಡವನ್ನು ಸೇರಿಕೊಳ್ಳಲಿದ್ದಾರೆ.

ಅದರಂತೆ ಏಪ್ರಿಲ್ 7 ರಂದು ನಡೆಯಲಿರುವ ರಾಯಲ್ ಚಾಲೆಂಜರ್ಸ್ ಬೆಂಗಳೂರು ವಿರುದ್ಧದ ಪಂದ್ಯದಲ್ಲಿ ಜಸ್‌ಪ್ರೀತ್ ಬುಮ್ರಾ ಕಾಣಿಸಿಕೊಳ್ಳುವುದು ಬಹುತೇಕ ಖಚಿತ. ಮುಂಬೈನ ವಾಂಖೆಡೆ ಸ್ಟೇಡಿಯಂನಲ್ಲಿ ನಡೆಯಲಿರುವ ಈ ಮೂಲಕ ಪಂದ್ಯದ ಮೂಲಕ ಬುಮ್ರಾ ಅವರ ಬೂಮ್ ಬೂಮ್ ಮತ್ತೆ ಶುರುವಾಗಲಿದೆ.

ಮುಂಬೈ ಇಂಡಿಯನ್ಸ್ ತಂಡ: ಹಾರ್ದಿಕ್ ಪಾಂಡ್ಯ (ನಾಯಕ), ರೋಹಿತ್ ಶರ್ಮಾ, ಸೂರ್ಯಕುಮಾರ್ ಯಾದವ್, ಜಸ್‌ಪ್ರೀತ್ ಬುಮ್ರಾ, ತಿಲಕ್ ವರ್ಮಾ, ಟ್ರೆಂಟ್ ಬೌಲ್ಟ್, ನಮನ್ ಧೀರ್, ರಾಬಿನ್ ಮಿಂಝ್, ಕರ್ಣ್ ಶರ್ಮಾ, ದೀಪಕ್ ಚಹರ್, ರೀಸ್ ಟೋಪ್ಲಿ, ರಿಯಾನ್ ರಿಕೆಲ್ಟನ್, ವಿಲ್ ಜ್ಯಾಕ್ಸ್, ಮಿಚೆಲ್ ಸ್ಯಾಂಟ್ನರ್, ಕರ್ಣ್ ಶರ್ಮಾ, ರಾಜ್ವ ಶರ್ಮಾ, ಸತ್ಯನಾರಾಯಣ ರಾಜು, ರಾಜ್ ಬಾವ, ಕೃಷ್ಣನ್ ಶ್ರೀಜಿತ್, ಅಶ್ವಾಣಿ ಕುಮಾರ್, ಬೆವನ್ ಜೇಕಬ್ಸ್, ಅರ್ಜುನ್ ತೆಂಡೂಲ್ಕರ್, ಲಿಝಾಡ್ ವಿಲಿಯಮ್ಸ್, ಮುಜೀಬ್ ಉರ್ ರೆಹಮಾನ್.

ದಲಿತರಿಗೆ ಮೀಸಲಿಟ್ಟ ಹಣ ಗ್ಯಾರಂಟಿಗೆ ಬಳಸಿದ್ದು ನಿಜವೇ?

# ಸದನದಲ್ಲಿ ಬಿಸಿ ಬಿಸಿ ಚರ್ಚೆ

**ಬೆಂಗಳೂರು:** ರಾಜ್ಯ ಸರ್ಕಾರ ತನ್ನ ಗ್ಯಾರಂಟಿ ಯೋಜನೆಗಳಿಗೆ ದಲಿತರ ಅಭಿವೃದ್ಧಿ ಮೀಸಲಿಟ್ಟಿರುವ ಎಸ್‌ಸಿಪಿ, ಟಿಎಸ್‌ಪಿ ಅನುದಾನ ಬಳಕೆ ಮಾಡುತ್ತಿದೆ ಎಂದು ವಿರೋಧ ಪಕ್ಷಗಳು ಆರೋಪಿಸಿವೆ. ಈ ಬಗ್ಗೆ ಇಂದು ಪರಿಷತ್‌ನಲ್ಲೂ ಬಿಸಿಬಿಸಿ ಚರ್ಚೆಗಳು ನಡೆದಿವೆ.

**ಪರಿಷತ್‌ನಲ್ಲಿ ತೀವ್ರ ಗದ್ದಲ, ಆರೋಪ-ಪ್ರತ್ಯಾರೋಪಗಳು:** ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗೆ ಮೀಸಲಿಟ್ಟ ಹಣವನ್ನು ಸರ್ಕಾರದ ಗ್ಯಾರಂಟಿ ಯೋಜನೆಗಳಿಗೆ ಬಳಸಲಾಗುತ್ತಿದೆಯೇ ಎಂಬ ಪ್ರಶ್ನೆ ಮುನ್ನೆಲೆಗೆ ಬಂದಿತು. ಈ ವಿಚಾರವಾಗಿ ಪರಿಷತ್ ನಲ್ಲಿ ತೀವ್ರ ಗದ್ದಲ, ಆರೋಪ-ಪ್ರತ್ಯಾರೋಪಗಳು ನಡೆದವು.

ಟಿ.ಎ. ಶರವಣ ಮತ್ತು ಹೇಮಲತಾ ನಾಯಕ್ ಅವರು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅನುದಾನವನ್ನು ಬೇರೆಡೆಗೆ ಬಳಸಲಾಗುತ್ತಿದೆಯೇ ಎಂದು ಪ್ರಶ್ನಿಸಿದರು. ಈ ಸಮುದಾಯಗಳ ಅಭಿವೃದ್ಧಿಗೆ ಮೀಸಲಿಟ್ಟ ಹಣವನ್ನು ಸರಿಯಾಗಿ ಖರ್ಚು ಮಾಡುತ್ತಿಲ್ಲ ಎಂಬುದು ಅವರ ಆರೋಪವಾಗಿತ್ತು.



ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಕೂಡ ಈ ಪ್ರಶ್ನೆಗೆ ದನಿ ನೀಡಿದರು. ಅವರು, ದಲಿತರಿಗೆ ಈ ಸರ್ಕಾರದಿಂದ ಆಗಿರುವಷ್ಟು ಅನ್ಯಾಯ ಬೇರೆ ಎಲ್ಲೂ ಆಗಿಲ್ಲ. ನಮಗೆ ಮೋಸ ಮಾಡಲು ನಮ್ಮ ಜನಾಂಗದ ವ್ಯಕ್ತಿಯನ್ನೇ ನೇಮಿಸಲಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಆದರೆ, ಸಚಿವ ಮಹದೇವ ಪ್ರಸಾದ್ ಅವರು ಗ್ಯಾರಂಟಿ ಯೋಜನೆಗಳಿಗೆ ಈ ಹಣವನ್ನು ಬಳಸುತ್ತಿಲ್ಲ ಎಂದು ಸ್ಪಷ್ಟಪಡಿಸಿದರು. ಅವರು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗೆ ಮೀಸಲಿಟ್ಟ ಹಣವನ್ನು ಬೇರೆ ಉದ್ದೇಶಗಳಿಗೆ ಬಳಸಲು ಸಾಧ್ಯವಿಲ್ಲ. ಈ ಹಣವನ್ನು ಆ ಸಮುದಾಯದ ಜನರಿಗೆ ಮಾತ್ರ ಬಳಕೆ ಮಾಡಲಾಗುತ್ತಿದೆ ಎಂದು ಹೇಳಿದರು.

ಆದರೆ, ಛಲವಾದಿ ನಾರಾಯಣಸ್ವಾಮಿ ಅವರು ಸರ್ಕಾರದ ವಿವರಣೆಯನ್ನು ಒಪ್ಪಿಕೊಳ್ಳಲಿಲ್ಲ. ಅವರು, ಇಲ್ಲಿ ಬಹಳ ದುರುಪಯೋಗ ಆಗುತ್ತಿದೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜನರು ಬೊಬ್ಬೆ ಹೊಡೆಯುತ್ತಿದ್ದಾರೆ. ಈ ಸಮುದಾಯಗಳಿಗಾಗಿ 42 ಸಾವಿರ ಕೋಟಿ ರೂಪಾಯಿಗಳನ್ನು ಮೀಸಲಿಡಲಾಗಿತ್ತು. ಇದರಲ್ಲಿ ಇಲಾಖೆಗಳಿಗೆ 21 ಸಾವಿರ ಕೋಟಿ ರೂಪಾಯಿಗಳನ್ನು ನೀಡಲಾಗಿದೆ. ಗ್ಯಾರಂಟಿ ಯೋಜನೆಗಳಿಗೆ 14 ಸಾವಿರ ಕೋಟಿ ರೂಪಾಯಿಗಳನ್ನು ಬಳಸಲಾಗಿದೆ. ಈಗ ಉಳಿದಿರುವುದು ಕೇವಲ 7 ಸಾವಿರ ಕೋಟಿ ರೂಪಾಯಿಗಳು ಮಾತ್ರ. ನಿಗಮ ಮಂಡಳಿಗಳಿಗೆ ಹಣ ಬಂದರೂ ಅದು ಈ ಸಮುದಾಯಗಳಿಗೆ ತಲುಪುತ್ತಿಲ್ಲ ಎಂದು ಆರೋಪಿಸಿದರು. ಈ ವೇಳೆ ಸದನದಲ್ಲಿ ಬಿಜೆಪಿ ಮತ್ತು ಕಾಂಗ್ರೆಸ್ ಸದಸ್ಯರ ನಡುವೆ ಮಾತಿನ ಚಕಮಕಿ ನಡೆಯಿತು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com